ಸಂಪುಟ: 04 ಸಂಚಿಕೆ: 156 ಪುಟಗಳು: 08 ಭಾನುವಾರ 18 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಮೊದಲು ನಮ್ಮ ಬಗ್ಗೆ ನಮಗೆ ನಂಬಿಕೆಯಿದ್ದಲ್ಲಿ ಮಾತ್ರ ಭಗವಂತನಲ್ಲಿ ನಂಬಿಕೆಯಿಡಲು ಸಾಧ್ಯ, ತನ್ನನ್ನೇ ನಂಬದವನು ಭಗವಂತನನ್ನು ಹೇಗೆ ತಾನೇ ನಂಬಲು ಸಾಧ್ಯ..



ರಾಜ್ಯಪಾಲರು ಮುಡಾ ಪ್ರಕರಣದಲ್ಲಿ ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿರುವುದರಿಂದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು.ಕಾರ್ಯಾಂಗದ ಮುಖ್ಯಸ್ಥರಾಗಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಸಾಂವಿಧಾನಿಕವಾಗಿ ತಮಗಿರುವ ಅಧಿಕಾರವನ್ನು ಚಲಾಯಿಸಿ ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರದಲ್ಲಿ ಸಾಕಷ್ಟು ಭ್ರಷ್ಟಾಚಾರ ನಡೆಯುತ್ತಿದೆ ಎಂಬುದಕ್ಕೆ ಈ ಹಿಂದಿನ ನಿದರ್ಶನಗಳೇ ಸಾಕ್ಷಿಯಾಗಿವೆ.

-ಬಿ.ವೈ.ವಿಜಯೇಂದ್ರ, ರಾಜ್ಯ ಬಿಜೆಪಿ ಅಧ್ಯಕ್ಷ



ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ತನಿಖೆಗೆ ರಾಜ್ಯಪಾಲರು ಅನುಮತಿ ನೀಡಿರುವುದು ಬಿಜೆಪಿ ಪಾದಯಾತ್ರೆಗೆ ಸಿಕ್ಕಿರುವ ಯಶಸ್ಸು. ಯಾವುದೇ ವ್ಯಕ್ತಿಯ ವಿರುದ್ಧ ಬಿಜೆಪಿ ಹೋರಾಟ ಮಾಡುತ್ತಿಲ್ಲ. ಅಕ್ರಮ ಬಯಲಿಗೆ ಬಂದು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕೆಂಬುದು ನಮ ಉದ್ದೇಶ. ಸತ್ಯ ಏನೆಂದು ಗೊತ್ತಾಗಲಿ. 86 ಸಾವಿರ ಜನರು ನಿವೇಶನಕ್ಕೆ ಅರ್ಜಿ ಸಲ್ಲಿಸಿ ಕಾಯುತ್ತಿದ್ದಾರೆ. ಅವರಿಗೆ ಈ ತನಿಖೆಯಿಂದ ನ್ಯಾಯ ದೊರೆಯಲಿದೆ.

-ಆರ್.ಅಶೋಕ್ ಪ್ರತಿಪಕ್ಷ ನಾಯಕ



ಸಿಎಂ ಸಿದ್ದರಾಮಯ್ಯ ಮೇಲೆ ಪ್ರಾಸಿಕ್ಯೂಷನ್ ಅನುಮತಿ ಕೊಡಲು ರಾಜ್ಯಪಾಲರು ಸಮಯಾವಕಾಶ, ತಜ್ಞರ ಸಲಹೆ ಪಡೆದು ಸಮಗ್ರ ತನಿಖೆಗೆ ಅನುಮತಿ ಕೊಟ್ಟಿದ್ದಾರೆ. ರಾಜ್ಯಪಾಲರ ಈ ಕ್ರಮ ಸರಿಯಾಗಿದೆ. ರಾಜ್ಯಪಾಲರ ಈ ಕ್ರಮ ಸಾರ್ವಜನಿಕ ಜೀವನದಲ್ಲಿರುವ ಯಾವುದೇ ವ್ಯಕ್ತಿ ಶುದ್ಧತೆ ಕಾಪಾಡಿಕೊಳ್ಳುವುದಕ್ಕೆ ಬಹುದೊಡ್ಡ ಹೆಜ್ಜೆಯಾಗಿದೆ. ಯಾರೇ ಇದ್ದರೂ ಸಹ ಉನ್ನತ ಸ್ಥಾನದಲ್ಲಿದ್ದವರ ಮೇಲೆ ಆರೋಪ ಬಂದಾಗ ತನಿಖೆ, ಕ್ರಮಗಳಾಗಬೇಕು.

-ಪ್ರಲ್ಹಾದ್ ಜೋಶಿ ಕೇಂದ್ರ ಸಚಿವ



ಮುಖ್ಯಮಂತ್ರಿ ರಾಜೀನಾಮೆ ಕೊಟ್ಟು ಕಾನೂನು ಕ್ರಮ ಎದರಿಸಬೇಕು. ರಾಜ್ಯಪಾಲರು ತಜ್ಞರ ಜೊತೆ ಚರ್ಚಿಸಿ, ಭ್ರಷ್ಟಾಚಾರ ತಡೆ ಕಾನೂನಿನಂತೆ ಕ್ರಮ ಕೈಗೊಂಡಿದ್ದಾರೆ ಮುಖ್ಯಮಂತ್ರಿ ರಕ್ಷಿಸಲು, ಭ್ರಷ್ಮಚಾರ ಮುಚ್ಚಿಹಾಕಲು ಸಚಿವರು ಬಾಯಿಗೆ ಬಂದಂತೆ ಮಾತನಾಡುತ್ತಿದ್ದಾರೆ. ಆದರೆ, ಯಾರೇ ಆದರೂ ಕಾನೂನು ಎದರಿಸಬೇಕು. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣದಲ್ಲಿ ಸಿಎಂ ನೈತಿಕ ಹೊಣೆ ಹೊತ್ತು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕು.

-ಶೋಭಾ ಕರಂದ್ಲಾಜೆ ಕೇಂದ್ರ ಸಚಿವೆ

# ಮುಗಿಯದ ಮುಡಾ ಮುನಿಸು

# ಸರ್ಕಾರ ಉಳಿಯುತ್ತಾ.. ಉರುಳುತ್ತಾ..?

● ಬೆನ್ನಲ್ಲೇ ರಾಜಕೀಯ ಸಂಚಲನ ● ಕಾಂಗ್ರೆಸ್‌ನಲ್ಲಿ ತಳಮಳ ● ರಾಜ್ಯಪಾಲರ ವಿರುದ್ಧ ರಾಜ್ಯಾದ್ಯಂತ ಕಾಂಗ್ರೆಸ್ ಪ್ರತಿಭಟನೆ ● ಬಿಗಿ ಪೊಲೀಸ್ ಬಂದೋಬಸ್ತ್ ● ಸಿಎಂ ಸಿದ್ದರಾಮಯ್ಯ ಬೆಂಬಲಕ್ಕೆ ನಿಂತ ಹೈಕಮಾಂಡ್ ● ಮೈಸೂರಿನಲ್ಲಿ ಭಾರೀ ಪ್ರತಿಭಟನೆ

## ಸಿಎಂಗೆ ಸಂಕಷ್ಟ



• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಸೈಟುಗಳನ್ನು ಅಕ್ರಮವಾಗಿ ಪಡೆದ ಆರೋಪ ಎದುರಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಕಾನೂನು ಕ್ರಮ (ಪ್ರಾಸಿಕ್ಯೂಷನ್) ಕೈಗೊಳ್ಳಲು ರಾಜ್ಯಪಾಲರು ಅನುಮತಿ ನೀಡಿದ್ದಾರೆ. ಆ ಹಿನ್ನೆಲೆ ಸಿದ್ದರಾಮಯ್ಯನವರು ತಮ್ಮ ನಾಲ್ಕು ದಶಕಗಳ ರಾಜಕೀಯ ಜೀವನದಲ್ಲಿ ಇದೇ ಮೊದಲ ಬಾರಿಗೆ ಕಾನೂನು ಕುಣಿಕೆಗೆ ಸಿಕ್ಕಿಹಾಕಿಕೊಂಡಂತಾಗಿದೆ. ಆ ಹಿನ್ನೆಲೆ, ರಾಜ್ಯಪಾಲರು ಕೊಟ್ಟಿರುವ ಪ್ರಾಸಿಕ್ಯೂಷನ್ ಆದೇಶವನ್ನು ಕರ್ನಾಟಕ ಹೈಕೋರ್ಟ್ ನಲ್ಲಿ ಪ್ರಶ್ನಿಸಲು ಸಿದ್ದರಾಮಯ್ಯ ಮುಂದಾಗಿದ್ದಾರೆ.

ಮಹತ್ವದ ಬೆಳವಣಿಗೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದಲ್ಲಿ ಅಕ್ರಮ ನಿವೇಶನ ಪಡೆದ ಆರೋಪಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದಾರೆ. ರಾಜ್ಯದ ಇತಿಹಾಸದಲ್ಲೇ ಹಾಲಿ ಮುಖ್ಯಮಂತ್ರಿ ವಿರುದ್ಧ ಪ್ರಕರಣವೊಂದಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಸಮ್ಮತಿಸಿದ ಎರಡನೇ ಪ್ರಕರಣ ಇದಾಗಿದೆ. ಈ ಹಿಂದೆ ಅಕ್ರಮ ಡಿ ನೋಟಿಫಿಕೇಶನ್ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ 2011ರಲ್ಲಿ ಅಂದಿನ ರಾಜ್ಯಪಾಲ ಹಂಸರಾಜ್ ಭಾರದ್ವಾಜ್‌ರವರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದರು. ಸಿಎಂ ವಿರುದ್ಧ ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988 , ಭಾರತೀಯ ನಾಗರಿಕ ಸುರಕ್ಷಾ ಸಮಿತಿ ಸೆಕ್ಷನ್ 218ರ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ ಎಂದು ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್.ಪ್ರಭುಶಂಕರ್ ಅವರು ಹೊರಡಿಸಿರುವ ನೋಟಿಸ್‌ನಲ್ಲಿ ತಿಳಿಸಿದ್ದಾರೆ.

ಇದೀಗ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಸಿಎಂ ವಿರುದ್ಧ ತನಿಖೆ ನಡೆಸಲು ಅನುಮತಿ ನೀಡಿರುವುದರಿಂದ ಸಿದ್ದರಾಮಯ್ಯಗೆ ಭಾರಿ ಕಾನೂನಿನ ಸಂಕಷ್ಟ ಎದುರಾಗಿದೆ. ಇದರ ಬೆನ್ನಲ್ಲೇ ಮುಖ್ಯಮಂತ್ರಿಗಳ ಅಧಿಕೃತ ನಿವಾಸ ಕಾವೇರಿಯಲ್ಲಿ ಮುಂದಿನ ಕಾನೂನು ಹೋರಾಟ ನಡೆಸುವ ಕುರಿತು ತಮ್ಮ ಸಂಪುಟದ ಸಹದ್ಯೋಗಿಗಳು ಹಾಗೂ ಕಾನೂನು ಸಲಹೆಗಾರ ಪೊನ್ನಣ್ಣ ಸೇರಿದಂತೆ ಮತ್ತಿತರರ ಜೊತೆ ಸಿದ್ದರಾಮಯ್ಯನವರು ಸಭೆ ನಡೆಸಿದ್ದಾರೆ.

ಇದರ ಬೆನ್ನಲ್ಲೇ ಸಂಜೆ 5 ಗಂಟೆಗೆ ವಿಶೇಷ ಸಚಿವ ಸಂಪುಟ ಸಭೆ ಕರೆದಿರುವುದು ಕೂಡ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ. ಇದೀಗ ಸರ್ಕಾರ ಗಿ ರಾಜಭವನದ ನಡುವೆ ಕಾನೂನಿನ ಸಂಘರ್ಷ ಏರ್ಪಟ್ಟಿದ್ದು, ರಾಜ್ಯಪಾಲರ ತೀರ್ಮಾನವನ್ನು ನ್ಯಾಯಾಲಯದಲ್ಲಿ ಪ್ರಶ್ನಿಸಲು ಸರ್ಕಾರ ಸಜ್ಜಾಗಿದೆ.

ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿ ವಿಚಾರವಾಗಿ ಮುಖ್ಯ ಕಾರ್ಯದರ್ಶಿ ಶಾಲಿನ್ ರಜನೀಶ್, ಎಸಿಎಸ್ ಅತೀಕ್‌ಗೆ ನೋಟಿಸ್ ನೀಡಲಾಗಿದೆ. ರಾಜಭವನದಿಂದ ನೋಟಿಸ್ ರವಾನೆಯಾಗಿದೆ. ಮುಡಾ ಪ್ರಕರಣದ ಮೂವರು ದೂರುದಾರರಾದ ಟಿ.ಜೆ.ಅಬ್ರಹಾಂ, ಸ್ನೇಹಮಯಿ ಕೃಷ್ಣ, ಪ್ರದೀಪ್‌ಗೆ ನೋಟಿಸ್ ಜಾರಿ ಮಾಡಲಾಗಿದೆ. ಪ್ರದೀಪ್ ಈಗಾಗಲೇ ರಾಜಭವನದಲ್ಲಿ ನೋಟಿಸ್ ಸ್ವೀಕರಿಸಿದ್ದಾರೆ. ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಅವರ ವಿರುದ್ಧ ಎಫ್ ಐಆರ್ ದಾಖಲಾಗುವ ಸಾಧ್ಯತೆಯಿದೆ. ಹೀಗಾದರೆ ರಾಜಕೀಯ ಮತ್ತು ಕಾನೂನಾತ್ಮಕವಾಗಿ ಸರ್ಕಾರ ಇದನ್ನು ಒಂದು ಕಡೆಯಲ್ಲಿ ಎದುರಿಸಲಿದೆ. ಅದರ ಜೊತೆಗೆ ನೈತಿಕವಾಗಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂಬ ಆಗ್ರಹ ಪ್ರತಿಪಕ್ಷಗಳಿಂದ ಹೆಚ್ಚಾಗುತ್ತದೆ. ಹೀಗಾಗಿ ಮುಂದಿನ ರಾಜಕೀಯ ಬೆಳವಣಿಗೆಗಳು ಸಾಕಷ್ಟು ಕುತೂಹಲಕ್ಕೆ ಕಾರಣವಾಗುತ್ತದೆ.

ಸಿದ್ದರಾಮಯ್ಯನವರು ಅಧಿಕಾರ ದುರುಪಯೋಗಪಡಿಸಿಕೊಂಡು ಮುಡಾದಲ್ಲಿ ತಮ್ಮ ಪತ್ನಿ ಪಾರ್ವತಮ್ಮ ಹೆಸರಿನಲ್ಲಿ 14 ನಿವೇಶನಗಳನ್ನು ಪಡೆದಿದ್ದಾರೆ ಎಂದು ಸಾಮಾಜಿಕ ಕಾರ್ಯಕರ್ತರಾದ ಟಿ.ಜೆ. ಅಬ್ರಹಾಂ ಮೈಸೂರು ಮೂಲದ ಸ್ನೇಹಮಯಿ ಕೃಷ್ಣ , ಪ್ರದೀಪ್ ಎಂಬುವವರು ರಾಜ್ಯಪಾಲ ರಿಗೆ ದಾಖಲೆಗಳ ಸಮೇತ ದೂರು ಸಲ್ಲಿಸಿದ್ದರು. ಈ ದೂರುಗಳನ್ನು ಸುದೀರ್ಘವಾಗಿ ಪರಿಶೀಲಿಸಿ ಕಾನೂನು ತಜ್ಞರ ಜೊತೆ ಚರ್ಚೆ ನಡೆಸಿದ್ದ ರಾಜ್ಯಪಾಲರು ಪ್ರಾಸಿಕ್ಯೂಶನ್‌ಗೆ ಅನುಮತಿ ನೀಡಿದ್ದಾರೆ. ಸಿಎಂ ವಿರುದ್ಧ ದೂರು ನೀಡಿರುವ ಮೂವರಿಗೂ ರಾಜ್ಯಪಾಲರಿಂದ ದೂರವಾಣಿ ಕರೆ ಬಂದಿದ್ದು, ರಾಜಭವನಕ್ಕೆ ಬರುವಂತೆ ಅಬ್ರಹಾಂ, ಸ್ನೇಹಮಯಿ ಕೃಷ್ಣ,ಪ್ರದೀಪ್‌ಗೆ ಸೂಚಿಸಲಾಗಿದೆ.

| | |
|---|---|
| 1 | ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್ ಗಾಗಿ ಆದೇಶ. |
| 2 | ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಆದೇಶ. |
| 3 | ಪ್ರಾಸಿಕ್ಯೂಷನ್ ಆದೇಶವನ್ನು ಕರ್ನಾಟಕ ಹೈಕೋರ್ಟ್ ನಲ್ಲಿ ಪ್ರಶ್ನಿಸಲು ಸಿಎಂ ಸಿದ್ದರಾಮಯ್ಯ ಮುಂದು. |

### ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಮುಡಾ ಸಂಕಷ್ಟ

ಮುಡಾ ಪ್ರಕರಣದಲ್ಲಿ ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ಸಿದ್ದರಾಮಯ್ಯ ಅವರು ಕಾನೂನು ಉರುಳಿಗೆ ಸಿಲುಕಿದಂತಾಗಿದ್ದು, ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಲು ಅನುಮತಿ ಸಿಕ್ಕಂತಾಗಿದ್ದು, ಮುಖ್ಯಮಂತ್ರಿಗಳ ವಿರುದ್ಧ ದೂರು ನೀಡಿ ಎಫ್ ಐಆರ್‌ನ್ನು ದಾಖಲಿಸಬಹುದಾಗಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿ ಸ್ಥಾನದಲ್ಲಿ ನಿಂತು ಪ್ರಕರಣ ಎದುರಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಮೈಸೂರು ಅಭಿವೃದ್ಧಿ ಪ್ರಾಧಿಕಾರ ಮುಡಾದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಪತ್ನಿಗೆ ನೀಡಿರುವ 14 ನಿವೇಶನಗಳಲ್ಲಿ ಅಕ್ರಮ ನಡೆದಿದೆ ಎಂದು ದೂರು ನೀಡಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕು ಎಂದು ಸಾಮಾಜಿಕ ಕಾರ್ಯಕರ್ತ ಟಿ.ಜೆ. ಅಬ್ರಹಾಂ, ಸ್ನೇಹಮಯಿ ಕೃಷ್ಣ, ಪ್ರದೀಪ್‌ಕುಮಾರ್ ರಾಜ್ಯಪಾಲ ಥಾವರ್‌ಚಂದ್ ಗೆಲ್ಹೋಟ್ ಅವರಿಗೆಮನವಿ ಮಾಡಿದ್ದರು.

### ಸಿದ್ದರಾಮಯ್ಯ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ

ಸಿಎಂ ಸಿದ್ದರಾಮಯ್ಯನವರಿಗೆ ನಿಜವಾಗಲೂ ಸಂವಿಧಾನ ಹಾಗೂ ನ್ಯಾಯಾಂಗದ ಮೇಲೆ ಗೌರವವಿದ್ದರೆ ಅವರ ಹುದ್ದೆಗೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು. ಇಲ್ಲವಾದಲ್ಲಿ ಈ ಘಟನೆ ಸಿದ್ದರಾಮಯ್ಯನವರ 40 ವರ್ಷಗಳ ರಾಜಕೀಯ ಜೀವನಕ್ಕೆ ಕಪ್ಪು ಚುಕ್ಕೆಯಾಗಲಿದೆ. ಸಿದ್ದರಾಮಯ್ಯನವರು ನಾನೊಬ್ಬ ಸಮಾಜವಾದಿ ಎಂದು ಹೇಳಿಕೊಂಡು ದಲಿತರು, ಹಿಂದುಳಿದವರನ್ನು ತನ್ನ ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿದ್ದಾರೆ. ದಲಿತರ ಜಮೀನು ಹೊಡೆದು, ಅದನ್ನು ಮುಡಾಗೆ ಕೊಟ್ಟು, ಬೆಲೆ ಬಾಳುವ 14 ನಿವೇಶನಗಳನ್ನು ಪಡೆದುಕೊಂಡಿದ್ದಾರೆ. ಸಂಪೂರ್ಣ ಮಾಹಿತಿ ಪಡೆದು ರಾಜ್ಯಪಾಲರು ಕಾನೂನು ಕ್ರಮಕ್ಕೆ ಆದೇಶಿಸಿದ್ದಾರೆ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಆಗ್ರಹಿಸಿದ್ದಾರೆ.




ರಾಜ್ಯ ಸರ್ಕಾರವನ್ನು ದುರ್ಬಲಗೊಳಿಸಲು ಕೇಂದ್ರ ಸರ್ಕಾರದ ಸಂಘಟಿತ ಯತ್ನ ನಡೆಸುತ್ತಿದ್ದು, ಬಿಜೆಪಿ ರಾಜಭವನವನ್ನು ಸಾಧನವಾಗಿ ದುರುಪಯೋಗಪಡಿಸಿಕೊಳ್ಳುತ್ತಿದೆ. ಸಾಮಾಜಿಕ ಜಾಲತಾಣದಲ್ಲಿ ತಮ್ಮ ಅಭಿಪ್ರಾಯ ಹಂಚಿಕೊಂಡಿರುವ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಕ್ರಮವನ್ನು ಟೀಕಿಸಿ ರಾಜಕೀಯ ಯಜಮಾನರನ್ನು ಸಮಾಧಾನಪಡಿಸಲು ಸಾಂವಿಧಾನಿಕ ಬಿಕ್ಕಟ್ಟನ್ನು ಹುಟ್ಟು ಹಾಕುತ್ತಿದ್ದಾರೆ.

-ಪ್ರಿಯಾಂಕ್ ಖರ್ಗೆ ಸಚಿವ



ಸಿಎಂ ಸಿದ್ದರಾಮಯ್ಯ ವಿರುದ್ಧ ಪಿತೂರಿ ಪ್ರೇರಿತ ಅಜೆಂಡಾ ರೂಪಿಸಿ ರಾಜ್ಯಪಾಲರಿಂದ ಪ್ರಾಸಿಕ್ಯೂಷನ್ ಕೊಡಿಸುವಲ್ಲಿ ಕೇಂದ್ರ ಸರ್ಕಾರ ರಾಜಭವನವನ್ನು ದುರುಪಯೋಗ ಪಡಿಸಿಕೊಂಡಿದೆ. ರಾಜಕೀಯ ಪಿತೂರಿ ಭಾಗವಾಗಿ ಮಾಡಲಾದ ಕ್ರಮಗಳಿಗೆ ರಾಜೀನಾಮೆ ಕೊಡುವ ಪ್ರಮೇಯ ಸರಕಾರಕ್ಕೆ ಬರುವುದಿಲ್ಲ. ಅಂತಹ ಪಿತೂರಿ ರಾಜಕೀಯದ ವಿರುದ್ಧ ಹಾಗೂ ಕಾನೂನಾತಕವಾಗಿ ಮೆಟ್ಟಿ ನಿಲ್ಲುವ ಕ್ಷಮತೆ ಕಾಂಗ್ರೆಸ್ ಸರಕಾರ ಮತ್ತು ಪಕ್ಷಕ್ಕಿದೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ಹಿನ್ನೆಲೆ ಮುಖ್ಯಮಂತ್ರಿಗಳು ರಾಜಿನಾಮೆ ನೀಡುವ ಪ್ರಶ್ನೆಯೇ ಇಲ್ಲ.

-ಲಕ್ಷ್ಮಿ ಹೆಬ್ಬಾಳ್ಕರ್ ಸಚಿವೆ



ಯಾವುದೇ ಕಾರಣಕ್ಕೂ ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲ್ಲ ಅದರ ಅಗತ್ಯತೆ ಇಲ್ಲ. ಈ ಪ್ರಕರಣದಲ್ಲಿ ಸಿದ್ದರಾಮಯ್ಯ ಅವರ ತಪ್ಪಿಲ್ಲ ರಾಜೀನಾಮೆ ಕೊಡುವ ಅಗತ್ಯವಿಲ್ಲ. ರಾಜ್ಯಪಾಲರ ಮೇಲೆ ರಾಜಕೀಯ ಒತ್ತಡವಿದೆ. ಹೀಗಾಗಿ ಪ್ರಾಸುಕ್ಯೂಷನ್ ಗೆ ಅನುಮತಿ ನೀಡಿದ್ದಾರೆ.

- ಜಮೀರ್ ಅಹಮ್ಮದ್ ಸಚಿವ



ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮೇಲೆ ರಾಜಕೀಯ ದ್ವೇಷದಿಂದ ಪ್ರಾಸಿಕ್ಯೂಷನ್ಗೆ ಅನುಮತಿ ನೀಡುವ ಮೂಲಕ ರಾಜಭವನವನ್ನು ದುರ್ಬಳಕೆ ಮಾಡಿಕೊಂಡಿರುವುದು ಸ್ಪಷ್ಟವಾಗಿದೆ. ಜನರಿಂದ ಆಯ್ಕೆಯಾದ ಸರ್ಕಾರಗಳನ್ನು, ಮುಖ್ಯಮಂತ್ರಿಗಳನ್ನು ಅಸ್ಥಿರಗೊಳಿಸುವ ಬಿಜೆಪಿ ಮತ್ತು ಕೇಂದ್ರ ಸರ್ಕಾರದ ದ್ವೇಷ ರಾಜಕಾರಣಕ್ಕೆ ಜನರೇ ಕಳೆದ ಲೋಕಸಭೆಯಲ್ಲೇ ಉತ್ತರ ಕೊಟ್ಟಾಗಿದೆ. ಆದರೂ ಕೂಡ ಬಿಜೆಪಿ ಮತ್ತು ಮೋದಿ ಸರ್ಕಾರ ಬುದ್ಧಿ ಕಲಿಯುವ ಲಕ್ಷಣಗಳಿಲ್ಲ.

- ಬಿ.ಕೆ.ಹರಿಪ್ರಸಾದ್ ಹಿರಿಯ ನಾಯಕ

### ಕಾನೂನು ಸಮರ ಸಿಎಂ ಚರ್ಚೆ

ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ತೀರ್ಮಾನದ ವಿರುದ್ಧ ಕಾನೂನು ಹೋರಾಟ ನಡೆಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದು, ರಾಜ್ಯಪಾಲರ ತೀರ್ಮಾನದ ಬಗ್ಗೆ ಯಾವ ರೀತಿ ಮುಂದಿನ ಹೆಜ್ಜೆಗಳನ್ನು ಇಡಬೇಕು ಎಂಬ ಬಗ್ಗೆ ಕಾನೂನು ತಜ್ಞರ ಜತೆ ಸಮಾಲೋಚನೆ ನಡೆಸಿದ್ದಾರೆ. ರಾಜ್ಯಪಾಲರ ತೀರ್ಮಾನ ಆಡಳಿತಾರೂಢ ಕಾಂಗ್ರೆಸ್‌ಗೆ ಒಂದು ರೀತಿ ಆಘಾತ ತಂದಿದ್ದು, ರಾಜ್ಯಪಾಲರ ನಡೆ ಬಗ್ಗೆ ಸಚಿವರುಗಳು ಹಾಗೂ ಕಾಂಗ್ರೆಸ್ ಮುಖಂಡರುಗಳು ಬಹಿರಂಗವಾಗಿಯೇ ಅಸಮಾಧಾನ ವ್ಯಕ್ತಪಡಿಸಿ ರಾಜ್ಯಪಾಲರ ವಿರುದ್ಧ ಆಕ್ರೋಶ ಹೊರ ಹಾಕಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯರವರ ಬೆನ್ನಿಗೆ ನಿಂತಿರುವ ಸಚಿವ ಸಂಪುಟದ ಸಚಿವರುಗಳು ರಾಜ್ಯಪಾಲರ ತೀರ್ಮಾನ ಹೊರ ಬಿದ್ದ ತಕ್ಷಣವೇ ಸಿದ್ದರಾಮಯ್ಯರವರ ಅಧಿಕೃತ ನಿವಾಸ ಕಾವೇರಿಯತ್ತ ದೌಡಾಯಿಸಿದ್ದು, ಸಚಿವರುಗಳೊಂದಿಗೂ ಮುಖ್ಯಮಂತ್ರಿಗಳು ಮುಂದಿನ ನಡೆ ಬಗ್ಗೆ ಸಮಾಲೋಚನೆ ನಡೆಸಿದರು. ಡಿಕೆ. ಶಿವಕುಮಾರ್ ಸೇರಿದಂತೆ ಸಚಿವ ಸಂಪುಟದ ಸರ್ಕಾರದ ಬಹುತೇಕ ಸಚಿವರುಗಳು ಮುಖ್ಯಮಂತ್ರಿಗಳ ನಿವಾಸದಲ್ಲಿ ನಡೆದ ಸಭೆಯಲ್ಲಿ ಉಪಸ್ಥಿತರಿದ್ದರು.



ಬಿಜೆಪಿಯಿಂದ ಸಿಎಂ ಸಿದ್ದರಾಮಯ್ಯರ ಒಂದು ಕೂದಲು ಅಲುಗಾಡಿಸಲು ಸಾಧ್ಯವಿಲ್ಲ. ರಾಜ್ಯಪಾಲರು ಈ ಮಟ್ಟಕ್ಕೆ ಇಳಿಯುತ್ತಾರೆ ಅಂತ ಅಂದುಕೊಂಡಿರಲಿಲ್ಲ. ರಾಜ್ಯ ಕಂಡ ಏಕೈಕ ಅತ್ಯುತ್ತಮ ನಾಯಕ ಸಿದ್ದರಾಮಯ್ಯ. ಅಧಿಕಾರ ಇದ್ದ ಸಂದರ್ಭದಲ್ಲಿ ಕುಟುಂಬದವರನ್ನ ಅಕ್ಕಪಕ್ಕ ಸೇರಿಸದೇ ಆಡಳಿತ ಮಾಡಿದ್ದಾರೆ. ಸಿದ್ದರಾಮಯ್ಯ ಕಾಲದಲ್ಲಿ ಆಗದೇ ಇರೋ ವಿಚಾರವನ್ನ ಅವರ ಹಣೆಗೆ ಕಟ್ಟುವ ಕೆಲಸ ಆಗ್ತಿದೆ. ಬಿಜೆಪಿಯವ್ರಿಗೆ ಸಿದ್ದರಾಮಯ್ಯನ ಜನಪ್ರಿಯತೆ ಸಹಿಸಲು ಆಗ್ತಿಲ್ಲ.

-ಎಚ್.ಸಿ ಬಾಲಕೃಷ್ಣ, ಕಾಂಗ್ರೆಸ್ ಶಾಸಕ



ಸಿದ್ದರಾಮಯ್ಯನವರಿಗೆ ನೈತಿಕತೆ ಎಂಬುದು ಗೊತ್ತಿದ್ದರೆ ರಾಜೀನಾಮೆ ನೀಡುಬೇಕು. ಆರೋಪ ಕೇಳಿಬಂದ ತಕ್ಷಣ ಈ ಹಿಂದೆಯೇ ಸಿದ್ದರಾಮಯ್ಯನವರು ರಾಜೀನಾಮೆ ಕೊಡಬೇಕಿತ್ತು. ಈಗಲಾದರೂ ತಕ್ಷಣ ರಾಜೀನಾಮೆ ಕೊಟ್ಟರೆ ಗೌರವ ಇರುತ್ತಿತ್ತು. ಬೆಳಿಗ್ಗೆ ಎದ್ದರೆ ನೈತಿಕತೆ ಮತ್ತು ಕಾನೂನು ಬಗ್ಗೆ ಮಾತನಾಡುವ ಸಿದ್ದರಾಮಯ್ಯನವರಿಗೆ ನೈತಿಕತೆ ಇದ್ದರೆ ರಾಜೀನಾಮೆ ನೀಡಿ ತನಿಖೆ ಎದುರಿಸಲಿ ಈ ಹಿಂದೆ ಸಿದ್ದರಾಮಯ್ಯನವರು ನನ್ನ ವಿರುದ್ಧ ಪಾದಯಾತ್ರೆ ಮಾಡಿದ್ದರು.

-ಜನಾರ್ಧನ ರೆಡ್ಡಿ, ಶಾಸಕ



ಮುಖ್ಯಮಂತ್ರಿ ಸನ್ಮಾನ್ಯ ಸಿದ್ದರಾಮಯ್ಯ ಅವರ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದು ರಾಜಕೀಯದ ದುರುದ್ದೇಶ ಎಂಬುದು ಸ್ಪಷ್ಟವಾಗಿದೆ. ರಾಜ್ಯ ಮತ್ತು ಕೇಂದ್ರ ಬಿಜೆಪಿ ನಾಯಕರ ಒತ್ತಡದಿಂದ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದಾರೆ. ಬಿಜೆಪಿ-ಜೆಡಿಎಸ್ ನಾಯಕರ ಹಲವು ಪ್ರಕರಣಗಳಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸಲ್ಲಿಸಿದ್ದ ಕಡತಗಳು ರಾಜಭವನದಲ್ಲೇ ಧೂಳು ತಿನ್ನುತ್ತಿವೆ

-ಆರ್.ಬಿ ತಿಮ್ಮಾಪೂರ, ಸಚಿವ




ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ನೇರ ಕೈವಾಡವಿದೆ. ಹೀಗಾಗಿ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಟ್ಟು ಮನೆಗೆ ಹೋಗಬೇಕು. ರಾಜ್ಯಪಾಲರು ಸಿಎಂ ಸಿದ್ದರಾಮಯ್ಯಗೆ ಪ್ರಾಸಿಕ್ಯೂಷನ್ ಕೊಟ್ಟಿರುವುದು ಕಾಂಗ್ರೆಸ್ ನ ಹಲವು ನಾಯಕರು ಒಳಗೊಳಗೆ ಖುಷಿ ಪಡುತ್ತಿದ್ದಾರೆ. ಬೃಹತ್ ರಾಜಕೀಯ ಬೆಳವಣಿಗೆಯೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡುವ ಕಡತಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಹಿ ಹಾಕಿದ್ದಾರೆ.

-ಜಗದೀಶ್ ಶೆಟ್ಟರ್, ಸಂಸದ

## ಬೆಂಗಳೂರಿಗೆ ಆಗಮಿಸಿದ ಖರ್ಗೆ

• ಉದಯವಾಹಿನಿ, ಬೆಂಗಳೂರು

ಬೃಹತ್ ರಾಜಕೀಯ ಬೆಳವಣಿಗೆಯೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡುವ ಕಡತಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಹಿ ಹಾಕಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಅಡಿಯಲ್ಲಿ ಅವರ ಪತ್ನಿಗೆ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ನಡುವೆ ಹೈಕಮಾಂಡ್ ಸಿಎಂ ಸಿದ್ದರಾಮಯ್ಯಗೆ ಅಭಯ ನೀಡಿದ್ದು, ಎಐಸಿಸಿ ನಾಯಕರಾದ ರಣದೀಪ್ ಸುರ್ಜೆವಾಲಾ ಹಾಗೂ ಕೆ.ಸಿ. ವೇಣುಗೋಪಾಲ್ ಕರೆ ಮಾಡಿ ಸಿಎಂ ಸಿದ್ದರಾಮಯ್ಯಗೆ ಧೈರ್ಯ ತುಂಬಿದ್ದಾರೆ. ನಿಮ್ಮ ಜೊತೆಗೆ ನಾವು ಇದ್ದೇವೆ ನೀವು ಧೈರ್ಯವಾಗಿರಿ, ಏನೇ ಆದರೂ ಕಾನೂನು ಹೋರಾಟ ಮಾಡೋಣ. ರಾಜ್ಯಾದ್ಯಂತ ಹೋರಾಟಕ್ಕೆ ಕರೆ ನೀಡಿದ್ದಾರೆ.



## ರಾಜ್ಯಪಾಲರ ವಜಾಕ್ಕೆ ಸಚಿವ ಈಶ್ವರ್ ಖಂಡ್ರೆ ಒತ್ತಾಯ

### ರಾಜ್ಯಪಾಲರು ರಾಜಕೀಯ ಪಕ್ಷದ ಏಜೆಂಟರಂತೆ ವರ್ತಿಸುತ್ತಿರುವುದು ಅಕ್ಷಮ್ಯ

• ಉದಯವಾಹಿನಿ, ಬೆಂಗಳೂರು

ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರು ರಾಜಕೀಯ ಪಕ್ಷದ ಏಜೆಂಟರಂತೆ ವರ್ತಿಸುತ್ತಿರುವುದು ಅಕ್ಷಮ್ಯ. ಇವರನ್ನು ರಾಷ್ಟ್ರಪತಿಗಳು ತಕ್ಷಣವೇ ವಜಾ ಮಾಡಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಒತ್ತಾಯಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಿಜೆಪಿ ರಾಜಕೀಯ ಪ್ರೇರಿತವಾಗಿ ಮಾಡಿರುವ ಆರೋಪವನ್ನೇ ಆಧಾರವಾಗಿಟ್ಟುಕೊಂಡು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವುದು ಸರಿಯಲ್ಲ.

ರಾಜ್ಯಪಾಲರು ಇಷ್ಟು ಕೀಳುಮಟ್ಟಕ್ಕೆ ಇಳಿಯುತ್ತಾರೆ ಎಂದು ನಾವು ನಿರೀಕ್ಷಿಸಿರಲಿಲ್ಲ ಎಂದು ತಿಳಿಸಿದ್ದಾರೆ.

ರಾಜಕೀಯ ದ್ವೇಷ ಮತ್ತು ಒತ್ತಡಕ್ಕೆ ಮಣಿದು ರಾಜ್ಯಪಾಲರು ಅನುಮತಿ ನೀಡಿರುವುದು ಸರಿಯಾದ ಕ್ರಮವಲ್ಲ ಇದು ಸರ್ಕಾರವನ್ನು ಅಸ್ಥಿರಗೊಳಿಸುವ ಹುನ್ನಾರ ಎಂದು ಈಶ್ವರ ಖಂಡ್ರೆ ಕಿಡಿ ಕಾರಿದ್ದಾರೆ. ಕಾಂಗ್ರೆಸ್ ಪಕ್ಷ ಇದರ ವಿರುದ್ಧ ರಾಜಕೀಯ ಹೋರಾಟ ಮಾಡುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ನಂಬಿಕೆ ಇಲ್ಲದ ಬಿಜೆಪಿ, ಚುನಾಯಿತ ಸರ್ಕಾರಗಳನ್ನು ಬೀಳಿಸುವ ಕೆಲಸ ಮಾಡುತ್ತಿದೆ. ಕರ್ನಾಟಕದಲ್ಲಿ ಎರಡು ಬಾರಿ ವಾಮ ಮಾರ್ಗದಿಂದ ಆಡಳಿತಕ್ಕೆ ಬಂದ ಬಿಜೆಪಿ ಮತ್ತೆ ತನ್ನ ಹಳೆ ಚಾಳಿ ಮುಂದುವರಿಸಿದೆ. ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕ ಎಂದು ಖಂಡ್ರೆ ಹೇಳಿದ್ದಾರೆ. ಜನಪರವಾದ ಆಡಳಿತ ನೀಡುತ್ತಾ, ಸಾಮಾಜಿಕ ನ್ಯಾಯಕ್ಕೆ ಶ್ರಮಿಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜನಪ್ರಿಯತೆಯನ್ನು ಕುಗ್ಗಿಸಲು ಮತ್ತು ಕಾಂಗ್ರೆಸ್ ಸರ್ಕಾರವನ್ನು ಉರುಳಿಸಲು ಬಿಜೆಪಿ ಅದರಲ್ಲೂ ಪ್ರಧಾನಿ ನರೇಂದ್ರ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ರಾಜ್ಯಪಾಲರ ಮೂಲಕ ಷಡ್ಯಂತ್ರ ರೂಪಿಸಿದ್ದಾರೆ.

ಇತ್ತೀಚೆಗೆ ದೆಹಲಿಗೆ ರಾಜ್ಯಪಾಲರನ್ನು ಕರೆಸಿಕೊಂಡು ಅವರಿಗೆ ಸ್ಪಷ್ಟ ಸೂಚನೆ ನೀಡಿ ಕಳಿಸಿದ್ದಾರೆ ಎಂದೂ ಆರೋಪಿಸಿದ್ದಾರೆ.ರಾಜ್ಯದ ಜನತೆ ಇದನ್ನು ಕ್ಷಮಿಸುವುದಿಲ್ಲ ಕಾಂಗ್ರೆಸ್ ಪಕ್ಷ ರಾಜ್ಯಪಾಲರ ಪಕ್ಷಪಾತ ಧೋರಣೆಯ ವಿರುದ್ಧ ರಾಜ್ಯಾದ್ಯಂತ ಹೋರಾಟ ಮಾಡಲಿದೆ. ಜನರ ಬೆಂಬಲ ಸರ್ಕಾರದ ಪರವಾಗಿದೆ ಎಂದು ಈಶ್ವರ ಖಂಡ್ರೆ, ತಿಳಿಸಿದ್ದಾರೆ.ರಾಜ್ಯಪಾಲರ ಮುಂದೆ ಹಿಂದಿನ ಸರ್ಕಾರದ ಹಲವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್ ಕೋರಿ ಸಲ್ಲಿಸಿರುವ ಅರ್ಜಿಗಳು ಬಾಕಿ ಇವೆ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿಚಾರದಲ್ಲಿ ತರಾತುರಿಯಿಂದ ಕ್ರಮ ಕೈಗೊಳ್ಳಲಾಗಿದೆ ಇದು ರಾಜಕೀಯ ಪ್ರೇರಿತ ಅಲ್ಲದೆ ಮತ್ತೇನು ಎಂದು ಪ್ರಶ್ನಿಸಿದ್ದಾರೆ.

ರಾಜ್ಯಪಾಲರು ಅನುಸರಿಸಿರುವ ಪಕ್ಷಪಾತ ಧೋರಣೆಗೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು, ಇಲ್ಲವೇ ಇವರನ್ನು ರಾಷ್ಟ್ರಪತಿಗಳು ವಜಾ ಮಾಡಬೇಕು

-ಈಶ್ವರ್ ಖಂಡ್ರೆ, ಸಚಿವರು



## ಸಂವಿಧಾನ ವಿರೋಧಿ ಪತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಕೀಯದಲ್ಲಿ ಮಹತ್ವದ ಬೆಳವಣಿಗೆ ನಡೆದಿದ್ದು, ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡುವ ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಹಿ ಹಾಕಿದ್ದಾರೆ. ಈ ಬಗ್ಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಸುದ್ದಿಗೋಷ್ಠಿ ನಡೆಸಿದ್ದು, ಮುಡಾ ಹಗರಣ ಸಂಬಂಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದಾರೆ. 1.08,2024 ರಲ್ಲಿ ನನ್ನ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ದಾಖಲೆಗಳನ್ನು ಬಿಡುಗಡೆ ಮಾಡಿದ್ದೇವೆ ಎಂದರು.

ನಾವು ಕಾನೂನು ಚೌಕಟ್ಟಿನಲ್ಲಿ ಗಮನದಲ್ಲಿಟ್ಟುಕೊಂಡು ಚರ್ಚೆ ಮಾಡಿದ್ದೇವೆ. ಪ್ರಾಸಿಕ್ಯೂಷನ್ ರಾಜಕೀಯ ಪ್ರೇರಿತವಾಗಿದೆ. ರಾಜ್ಯಪಾಲರು ಸಂವಿಧಾನ ವಿರೋಧಿ ಪತ್ರ ಕೊಟ್ಟಿದ್ದಾರೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕವಾಗಿದೆ ಎಂದು ಹೇಳಿದ್ದಾರೆ.



**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,277/Gram24ct ₹6,670/Gram22ct ಬೆಳ್ಳಿ: ₹86.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಪೀವರ ನಿಮ್ನ... ಚಿತ್ರದೋಲಿರ್ಕು

ನಿಜಗುಣರ ಪರಮಾನುಭವ ಬೋಧೆಯ ಮಾತು. ಇರುವ ಬ್ರಹ್ಮ ನಿರಾಕಾರ ಸರ್ವಾಕಾರ ಒಂದೇ. ಹೀಗಿದ್ದಾಗ್ಯೂ, ಅದು ಪರಬ್ರಹ್ಮ ಅಪರಬ್ರಹ್ಮ ಎಂದು ಎರಡುವಿಧ ಶುದ್ಧ ಅಶುದ್ಧ = ಮಿಶ್ರ ಎಂದು ಹೇಳುವುದು ಹೇಗೆ ಸರಿ? ಎಂದು ಕೇಳಿದರೆ ಇಲ್ಲಿದೆ ವಿವರಣೆ : ತಗ್ಗು ದಿನ್ನೆಗಳಿಲ್ಲದ ಸಮತಟ್ಟಾದ ಗೋಡೆಯ ಮೇಲೆ, ಕಲ್ಲಿನ ಮೇಲೆ, ಹಾಳೆಯ ಮೇಲೆ ಕಲಾವಿದ ಸುಂದರ ಚಿತ್ರ ಬಿಡಿಸುವನು. ವಿವಿಧ ಬಗೆಯ ಬಣ್ಣ ಗೆರೆಗಳು ಚಿತ್ರಿತ ವಸ್ತು ವ್ಯಕ್ತಿಯನ್ನು ಜೀವಂತದಂತೆ ಸೆರೆಹಿಡಿವವು. ಮೊಬೈಲ್ ಕ್ಯಾಮೆರಾದಲ್ಲಿ ಚಿತ್ರ ಯಥಾವತ್ತಾಗಿ, ಮೂಲಕ್ಕಿಂತಲೂ. ಸುಂದರವಾಗಿ ಮೂಡುವುದು. ಈ ಚಿತ್ರಗಳಲ್ಲಿ ನಿಜ ಅಂಗಾಂಗಗಳಲ್ಲಿರುವಂತೆ ಉಬ್ಬು ತಗ್ಗುಗಳು ತೋರುವವು. ಹಾಗೆಂದು ಕಲ್ಲು ಗೋಡೆ ಹಾಳೆ ಮೊದಲಾದದ್ದು ಉಬ್ಬು ತಗ್ಗಾಗಿದೆಯೇ? ಇಲ್ಲ! ಅದರಂತೆ ಬ್ರಹ್ಮ ಅಖಂಡ ಏಕವಾಗಿದ್ದರೂ ಅವಿದ್ಯೆ ಮಾಯೆ ಎಂಬ ಉಪಾಧಿಯಿಂದಾಗಿ ಪರಬ್ರಹ್ಮ ಅಪರಬ್ರಹ್ಮ ಎಂದು, ಶುದ್ಧ ಅಶುದ್ಧ ಎಂಬುದಾಗಿ ತೋರಿದರೂ ವಾಸ್ತವದಲ್ಲಿ ಪರಮಾತ್ಮ ಬ್ರಹ್ಮ ಒಂದೇ ಶುದ್ಧ ಪರಬ್ರಹ್ಮ.

## ರಾಜ್ಯ ರಾಜಕಾರಣದಲ್ಲಿ ಮತ್ತೊಂದು ವಿವಾದ ಸ್ಫೋಟ

### ಭಾನುವಾರವೂ ಸೆಮಿಸ್ಟರ್ ಪರೀಕ್ಷೆ ನಿಗದಿಪಡಿಸಿರುವ ಕ್ರಮದ ವಿರುದ್ಧ ವಿದ್ಯಾರ್ಥಿಗಳು ಸಿಡಿದೆದ್ದಿದ್ದಾರೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಪ್ರತಿಷ್ಠಿತ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಇದೀಗ ವಿವಾದದ ಕೇಂದ್ರಬಿಂದುವಾಗಿದೆ. ಭಾನು ವಾರವೂ ಸೆಮಿಸ್ಟರ್ ಪರೀಕ್ಷೆ ನಿಗದಿಪಡಿಸಿರುವ ಕ್ರಮದ ವಿರುದ್ಧ ವಿದ್ಯಾರ್ಥಿಗಳು ಸಿಡಿದೆದ್ದಾರೆ. ಈ ಬೆಳವಣಿಗೆಯೂ 'ರಾಜಭವನ ಸರ್ಕಾರ' ಎಂಬ ಬೆಳವಣಗೆಗೆ ಕಾರಣವಾಗುವ ಸಾಧ್ಯತೆಗಳಿವೆ.

ಈ ವಿವಾದ ಹಿನ್ನೆಲೆಯಲ್ಲಿ ಕುಲಪತಿ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ವಿದ್ಯಾರ್ಥಿ ಸಂಘಟನೆಯು ರಾಜ್ಯಪಾಲರಿಗೆ ದೂರು ನೀಡಿವೆ. ರಜೆಯ ಹಕ್ಕನ್ನು ಕಸಿದುಕೊಳ್ಳಲಾಗಿದೆ ಎಂದು ಆರೋಪಿಸಿ ವಿದ್ಯಾರ್ಥಿ ಹೋರಾಟಗಾರ ಕ್ರಿಸ್ಟನ್ ಮಿನೇಜಸ್ ಅವರು ರಾಜ್ಯ ಮಾನವ ಹಕ್ಕುಗಳ ಆಯೋಗ ಹಾಗೂ ರಾಜ್ಯ ಮಹಿಳಾ ಆಯೋಗಕ್ಕೂ ದೂರು ನೀಡಿದ್ದಾರೆ. ಸಿಎಂ ಸಿದ್ದರಾಮಯ್ಯ, ವಿಧಾನಸಭೆಯ ಸ್ಪೀಕರ್, ವಿಧಾನ ಪರಿಷತ್ ಸಭಾಪತಿ, ಹಾಗೂ ಉಭಯ ಸದನಗಳ ವಿರೋಧ ಪಕ್ಷಗಳ ನಾಯಕರಿಗೂ ದೂರು ನೀಡಿ,

**ರಾಜ್ಯ ಮಹಿಳಾ ಆಯೋಗಕ್ಕೂ ದೂರು**


ಉದಯವಾಹಿನಿ ಚಿತ್ರ

ಕಾನೂನು ವಿವಿ ಕುಲಪತಿಗಳ ವಿರುದ್ಧ ಸೂಕ್ತ ಕ್ರಮಕ್ಕೆ ಹಾಗೂ ಪರೀಕ್ಷೆಯ ವೇಳಾಪಟ್ಟಿ ಪರಿಷ್ಕರಣೆಗೆ ಮನವಿ ಮಾಡಿದ್ದಾರೆ.

ವಾರಪೂರ್ತಿ ವಿವಿಧ ಕಾಯಕ ಹಾಗೂ ಚಟುವಟಿಕೆಗಳಲ್ಲಿ ಭಾಗಿಯಾಗುವ ವ್ಯಕ್ತಿಗಳಿಗೆ ವಾರಾಂತ್ಯದಲ್ಲಿ ಕನಿಷ್ಠ ಒಂದು ದಿನವಾದರೂ ರಜೆ ನೀಡಬೇಕೆಂಬ ನಿಯಮ ಇದೆ. ಆದರೆ,

**ವಿವಿ ಅಧಿಕಾರಿಗಳ ವಿರುದ್ಧ ಕ್ರಮ**

**ವಾರಾಂತ್ಯದ ರಜೆ ವಿದ್ಯಾರ್ಥಿಗಳ ಮೂಲಭೂತ ಹಕ್ಕು. ಈ ಹಕ್ಕುಗಳಿಗೆ ಅಡ್ಡಿಯಾಗದಂತೆ ಪರೀಕ್ಷಾ ವೇಳಪಟ್ಟಿಯನ್ನು ಪರಿಷ್ಕರಿಸಬೇಕೆಂದು ಹಾಗೂ ಮಾನವ ಹಕ್ಕುಗಳನ್ನು ಗೌರವಿಸದ ಕುಲಪತಿ ಹಾಗೂ ವಿವಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಕ್ರಿಸ್ಟನ್ ಅವರು ರಾಜ್ಯಪಾಲರನ್ನು ಆಗ್ರಹಿಸಿದ್ದಾರೆ.**

ಕಾನೂನು ಕ್ಷೇತ್ರದ ಒಂದು ಭಾಗವಾಗಿರಬೇಕಿರುವ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯವು ಈ ವಿಚಾರದಲ್ಲಿ ನಿಯಮ ಉಲ್ಲಂಘಿಸಿದೆ ಎಂದು ಕ್ರಿಸ್ಟನ್ ಮಿನೇಜಸ್ ಆರೋಪಿಸಿದ್ದಾರೆ.

ಸದರಿ ವಿಶ್ವವಿದ್ಯಾಲಯವು, 5 ಹಾಗೂ 3 ವರ್ಷಗಳ ಪದವಿ ಕೋರ್ಸ್‌ಗಳಿಗೆ ಆಗಸ್ಟ್ ಹಾಗೂ ಸೆಪ್ಟೆಂಬರ್ ತಿಂಗಳಲ್ಲಿ ಪರೀಕ್ಷೆಗೆ ದಿನಾಂಕ ನಿಗದಿಪಡಿಸಿದೆ. 21.08.2024ರಿಂದ 04.09.2024ರ ವರೆಗೆ ಭಾನುವಾರದ ರಜಾದಿನವನ್ನೂ ಲೆಕ್ಕಿಸದೆ ವಾರದ ಎಲ್ಲಾ ದಿನಗಳಲ್ಲಿ ಪರೀಕ್ಷೆ ನಿಗದಿಪಡಿಸಲಾಗಿದೆ. ವಿದ್ಯಾರ್ಥಿಗಳು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿರುವವರೂ ಇದ್ದಾರೆ. ವಿದ್ಯಾರ್ಥಿನಿಯರೂ ತಮ್ಮದೇ ಆದ ಸಮಸ್ಯೆಗಳನ್ನು ಎದುರಿಸುವರು. ಹೀಗಿರುವಾಗ ವಾರಾಂತ್ಯದ ರಜಾ ದಿನಗಳಂದೂ ವಿರಾಮ ನೀಡದೆ, ಪರೀಕ್ಷೆ ನಡೆಸುವ ಅಮಾನವೀಯ ನಡೆ ಸರಿಯಲ್ಲ. ಕಾನೂನು ವಿವಿಯ ಈ ಕ್ರಮದಿಂದ ಮಾನವ ಹಕ್ಕುಗಳ ಉಲ್ಲಂಘನೆ ಮಾತ್ರವಲ್ಲ, ಮಹಿಳೆಯರ ಹಕ್ಕುಗಳೂ ಉಲ್ಲಂಘನೆಯಾಗುತ್ತದೆ ಎಂದು ಕ್ರಿಸ್ಟನ್ ಅವರು ಈ ದೂರಿನಲ್ಲಿ ಗಮನಸೆಳೆದಿದ್ದಾರೆ. ಈ ಪರೀಕ್ಷಾ ದಿನಗಳಂದೇ ಶ್ರೀಕೃಷ್ಣ ಜನ್ಮಾಷ್ಟಮಿ ಸಹಿತ ಹಬ್ಬವೂ ಇರುವುದರಿಂದ ವಿವಿಯ ನಡೆಯು ಪ್ರಮುಖ ಧಾರ್ಮಿಕ ಆಚರಣೆಗಳಿಗೂ ಅಡ್ಡಿಪಡಿಸುವ ಕ್ರಮವಾಗಿದ್ದು ಈ ಬಗ್ಗೆ, ವಿದ್ಯಾರ್ಥಿ ಸಂಘಟನೆಗಳ ಪ್ರಮುಖರು, ವಕೀಲರ ಸಹಿತ ಕಾನೂನು ತಜ್ಞರ ಸಲಹೆಗಳನ್ನಾಧರಿಸಿ, ದಿನಾಂಕ 08.08.2024ರಂದು ಕರ್ನಾಟಕ ವಿಶ್ವವಿದ್ಯಾಲಯದ ಕುಲಪತಿಗಳಿಗೆ ಪತ್ರ ಬರೆದು ಕಾನೂನು ವಿದ್ಯಾರ್ಥಿಗಳ ಸಮಸ್ಯೆ ಬಗ್ಗೆ ಗಮನಸೆಳೆದಿದ್ದರೂ ಪರೀಕ್ಷಾ ವೇಳಾಪಟ್ಟಿ ಪರಿಷ್ಕರಿಸಲು ಕುಲಪತಿಗಳು ಪ್ರಯತ್ನ ಮಾಡಿಲ್ಲ ಎಂದವರು ದೂರಿದ್ದಾರೆ.

### ಶೀಘ್ರವೇ ಒಪಿಎಸ್ ಜಾರಿ ಬಗ್ಗೆ ನಿರ್ಧಾರ: ಸಿಎಂ ಸಿದ್ಧರಾಮಯ್ಯ

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರಿ ನೌಕರರ ಮೊದಲ ಬೇಡಿಕೆಯಾದಂತ 7ನೇ ವೇತನ ಆಯೋಗದಂತೆ ವೇತನ ಜಾರಿಯಾಗಿದೆ. ಇನ್ನೊಂದು ಬೇಡಿಕೆ ಅಂದ್ರೆ ಅದು ಹೊಸ ಪಿಂಚಣಿ ಯೋಜನೆ ರದ್ದುಗೊಳಿಸಿ, ಹಳೆ ಪಿಂಚಣಿ ಯೋಜನೆ ಜಾರಿಗೆ ತರುವುದೇ ಆಗಿದೆ. ಈ ಬಗ್ಗೆಯೂ ಸಿಎಂ ಸಿದ್ಧರಾಮಯ್ಯ ಪಾಸಿಟಿವ್ ಭರವಸೆ ನೀಡಿದ್ದಾರೆ. ಶೀಘ್ರವೇ ಓಪಿಎಸ್ ಜಾರಿಗೊಳಿಸುವ ಬಗ್ಗೆ ಕ್ರಮ ವಹಿಸುವುದಾಗಿ ಹೇಳಿ, ರಾಜ್ಯ ಸರ್ಕಾರಿ ನೌಕರರಿಗೆ ಮತ್ತೊಂದು ಗುಡ್ ನ್ಯೂಸ್ ನೀಡಲು ರೆಡಿಯಾಗಿದ್ದಾರೆ.ಬೆಂಗಳೂರಿನ ಅರಮನೆ ಮೈದಾನದಲ್ಲಿ ರಾಜ್ಯ ಸರ್ಕಾರಿ ನೌಕರರಿಂದ 7ನೇ ವೇತನ ಆಯೋಗ ಜಾರಿಯ ಕಾರಣ ಸಿಎಂ ಸಿದ್ಧರಾಮಯ್ಯ ಅವರಿಗೆ ಅಭಿನಂದನೆಯನ್ನು ಸಲ್ಲಿಸಲಾಯಿತು. ಈ ಸಭೆಯಲ್ಲಿ ಭಾಗಿಯಾಗಿ ಮಾತನಾಡಿದಂತ ಅವರು, ರಾಜ್ಯ ಸರ್ಕಾರಿ ನೌಕರರ ಒಪಿಎಸ್, ಆರೋಗ್ಯ ಸಂಜೀವಿನಿ ಕಾರ್ಯಕ್ರಮ ಅನುಷ್ಠಾನದ ಬಗ್ಗೆ ಶೀಘ್ರವೇ ನಿರ್ಧಾರ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ. ರಾಜ್ಯಕಾಂಗ್ರೆಸ್ ಸರ್ಕಾರವು ಸರ್ಕಾರಿ ನೌಕರರ ಒಳಿತಾಗುವಂತ ಕೆಲಸ ಮಾಡಲಿದೆ. ರಾಜ್ಯ ಸರ್ಕಾರಿ ನೌಕರರ ಜೊತೆಗೆ ಸರ್ಕಾರವಿದೆ. ಸರ್ಕಾರಿ ನೌಕರರ ಹಿತ ಕಾಯಲು ನಾನು ಮತ್ತು ನಮ್ಮ ಸರ್ಕಾರ ಸದಾ ಸಿದ್ಧವಿದೆ ಎಂದರು.

### ಆ.18-19ರ ಈ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ

• **ಉದಯವಾಹಿನಿ, ಬೆಂಗಳೂರು**


ಉದಯವಾಹಿನಿ ಚಿತ್ರ

ನಗರದಲ್ಲಿ ವಿದ್ಯುತ್ ನಿರ್ವಹಣಾ ಕಾಮಗಾರಿಯನ್ನು ಬೆಸ್ಕಾಂನ ವಿವಿಧ ಉಪ ವಿಭಾಗಗಳಿಂದ ಕೈಗೊಳ್ಳಲಾಗುತ್ತಿದೆ. ಈ ಹಿನ್ನಲೆಯಲ್ಲಿ ದಿನಾಂಕ 18-08-2024ರ ನಾಳೆ ಹಾಗೂ ದಿನಾಂಕ 19-08-2024ರ ನಾಡಿದ್ದು ನಗರದ ಕೆಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಈ ಕುರಿತಂತೆ ಬೆಸ್ಕಾಂನಿಂದ ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ಹಂಚಿಕೊಂಡಿದ್ದು, 220/66/11ಕೆವಿ ಎಸ್‌ಆರ್‌ಎಸ್ ಪೀಣ್ಯ ದಿನಾಂಕ 18.08.2024 ರಂದು 09:30 ಗಂಟೆಗಳಿಂದ 15:30ಗಂಟೆಗಳವರೆಗೆ ತ್ರೈಮಾಸಿಕ ನಿರ್ವಹಣೆ. ಆದ್ದರಿಂದ ಈ ಉಪಕೇಂದ್ರದ ವ್ಯಾಪ್ತಿಯಲ್ಲಿ ಬರುವ ಕೆಳಗಿನ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ತಿಳಿಸಿದೆ. ಎಚ್‌ಎಂಟಿ ರಸ್ತೆ, ಆರ್‌ಎನ್‌ಎಸ್ ಅಪಾರ್ಟ್‌ಮೆಂಟ್, ಸಿಎಮ್‌ಟಿಐ, ಬೋರ್ಲಿಂಗಪ್ಪ ಗಾರ್ಡನ್, ಪೀಣ್ಯ ಪೊಲೀಸ್ ಠಾಣೆ ರಸ್ತೆ, ಟೆಲಿಫೋನ್ ಎಕ್ಸ್‌ಚೇಂಜ್, 6ನೇ ಕ್ರಾಸ್, ರಿಲಯನ್ಸ್ ಕಮ್ಯುನಿಕೇಷನ್, ಗಣಪತಿನಗರ ಮುಖ್ಯ ರಸ್ತೆ, ಪೊಲೀಸ್ ಠಾಣೆ ರಸ್ತೆ, ಚಾಮುಂಡಿಪುರ, ಮುನೇಶ್ವರ ದೇವಸ್ಥಾನ ರಸ್ತೆ, ಎಂಇಸಿ ಲೇಔಟ್, ಮಲಯಾಳಿ ಅತಿಥಿ ಗೃಹ ರಸ್ತೆ, ಕೆಎಚ್‌ಬಿ. ರಾಜೇಶ್ವರಿನಗರ, ಆಕಾಶ್ ಥೇಟರ್ ರಸ್ತೆ, ಫ್ರೆಂಡ್ಸ್ ಸರ್ಕಲ್, ವಿಜ್ಞಾನ ಪಬ್ಲಿಕ್ ಸ್ಕೂಲ್ ರಸ್ತೆ. ಭೈರವೇಶ್ವರ ನಗರ, ಬ್ಯಾಂಕ್ ಕಾಲೋನಿ, 6 ನೇ ಮುಖ್ಯ ರಸ್ತೆ, ವಿಭಾಗ ರಸ್ತೆ, 5 ನೇ ಮುಖ್ಯ ರಸ್ತೆ, ಯುಕೊ ಬ್ಯಾಂಕ್ ರಸ್ತೆ, ಥರ್ಲಾಕ್ ರಸ್ತೆ, 7 ನೇ ಮುಖ್ಯ ರಸ್ತೆ, 3 ನೇ ಹಂತ, ರಾಜಗೋಪಾಲ ನಗರ, ಕಸ್ತೂರಿ ಬಡಾವಣೆ, ಜಿಕೆಡಬ್ಲ್ಯು ಲೇಔಟ್, ಬೈರವೇಶ್ವರ ನಗರ, ಇಎಸ್‌ಐ ಆಸ್ಪತ್ರೆ, ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕರೆಂಟ್ ಇರೋದಿಲ್ಲ. 66/11ಕೆವಿ ಅಟ್ಟೂರುಯಲಹಂಕ ಎಂಯು ಎಸ್ ಎಸ್ ದಿನಾಂಕ 19.08.2024 ರಂದು 10:30ಗಂಟೆಗಳಿಂದ 18:00ಗಂಟೆಗಳವರೆಗೆ ತುರ್ತು ನಿರ್ವಹಣೆ ಕೆಲಸ. ಆದ್ದರಿಂದ ಈ ಉಪಕೇಂದ್ರದ ವ್ಯಾಪ್ತಿಯಲ್ಲಿ ಬರುವ ಕೆಳಗಿನ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಕೆ.ಎಂ.ಎಫ್. ಮದರ್ ಡೈರಿ, ಎಸ್.ಎಫ್.ಎಸ್ 208, ಎಸ್.ಎಫ್.ಎಸ್ 407, ಉನ್ನಿಕೃಷ್ಣನ್ ರಸ್ತೆ, ಬಿ ಸೆಕ್ಟರ್, ಎನ್.ಇ.ಎಸ್ ರಸ್ತೆ, ಸಿ.ಎಂ ಎನ್ಕ್ಲೇವ್, ಮಾತೃ ಲೇಔಟ್, ಸೋಮೇಶ್ವರನಗರ, ಕನಕನಗರ, ನ್ಯಾಯಾಂಗ ಬಡಾವಣೆ, ಯಲಹಂಕ ಓಲ್ಡ್ ಟೌನ್, ಗಾಂಧಿ ನಗರ, ಹಳೆಯ ಪಟ್ಟಣ ಬಿಬಿಎಂಪಿ ರಸ್ತೆ, ಕೆರೆ, ಬಿಬಿಎಂಪಿ ರಸ್ತೆ ಕೋಡಿ ರೋಡ್, ಪುರವಂಕರ, ಅಪಾರ್ಟ್ಮೆಂಟ್ ಆರ್.ಎಂ.ಝಡ್ ಮಾಲ್, ಆರ್.ಎಂ.ಝಡ್ ರೆಸಿಡೆನ್ಸಿಯಲ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಪವರ್ ಕಟ್ ಆಗಲಿದೆ.

### ಸಿದ್ದು ರವರೇ ಕೂಡಲೇ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ

• **ಉದಯವಾಹಿನಿ, ಬೆಂಗಳೂರು**

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್ ಗೆ ರಾಜ್ಯಪಾಲರು ಅನುಮತಿ ನೀಡಿರುವ ಕುರಿತು ಬಿಜೆಪಿ ಪ್ರತಿಕ್ರಿಯೆ ನೀಡಿದೆ.ಈ ಕುರಿತು ಟ್ವೀಟ್ ಮಾಡಿರುವ ಬಿಜೆಪಿ, ಉಪ್ಪು ತಿಂದವರು ನೀರು ಕುಡಿಯಲೇ ಬೇಕು.

ದಲಿತರಿಗೆ ದ್ರೋಹ ಬಗೆದು ಅಕ್ರಮವಾಗಿ ಮುಡಾ ಸೈಟುಗಳನ್ನು ಕಬಳಿಸಿರುವ ಭ್ರಷ್ಟ ಸಿಎಂ ಸಿದ್ದರಾಮಯ್ಯನವರೇ ಕೂಡಲೇ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ, ತನಿಖೆ ಎದುರಿಸಿ ಎಂದು ಆಗ್ರಹಿಸಿದೆ.

ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವುದು ಅತ್ಯಂತ ಸ್ವಾಗತಾರ್ಹ. ದಲಿತರ ಭೂಮಿಯನ್ನು ನುಂಗಿ, ಅಕ್ರಮವಾಗಿ ಅತ್ಯಂತ ಬೆಲೆಬಾಳುವ 14 ಸೈಟುಗಳನ್ನು ಕಬಳಿಸಿರುವ ಸಿದ್ದರಾಮಯ್ಯ ಅವರು ಸಿಎಂ ಕುರ್ಚಿಯಲ್ಲಿ ಮುಂದುವರೆಯಲು ಅರ್ಹರಲ್ಲ ಎಂದು ಕೂಡಲೇ ಸಿಎಂ ಸಿದ್ದರಾಮಯ್ಯ ಅವರು ತಮ್ಮ ಹುದ್ದೆಗೆ ರಾಜೀನಾಮೆ ನೀಡಿ, ತನಿಖೆಗೆ ಒಳಗಾಗಲಿ. ಬೃಹತ್ ರಾಜಕೀಯ ಬೆಳವಣಿಗೆಯೊಂದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ಅನುಮತಿ ನೀಡುವ ಕಡತಕ್ಕೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಹಿ ಹಾಕಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಅಡಿಯಲ್ಲಿ ಅವರ ಪತ್ನಿಗೆ ನಿವೇಶನ ಹಂಚಿಕೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

### ಬೆಂಗಳೂರಿನಲ್ಲಿ ಘೋರ ದುರಂತ : ಟಿಪ್ಪರ್ ಹರಿದು ಮಗು ಸೇರಿ ಇಬ್ಬರು ಸಾವು!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ಬೆಳ್ಳಂಬೆಳಗ್ಗೆ ಭೀಕರ ದುರಂತ ನಡೆದಿದ್ದು, ಟಿಪ್ಪರ್ ಹರಿದು ಮಗು ಸೇರಿದಂತೆ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ನಡೆದಿದೆ.ಬೆಂಗಳೂರಿನ ಹೊಸ ಗುಡ್ಡದಹಳ್ಳಿಯಲ್ಲಿ ಬೆಳ್ಳಂಬೆಳಗ್ಗೆ ಟಿಪ್ಪರ್ ಲಾರಿ ಹರಿದ ಪರಿಣಾಮ ಮಗು ಸೇರಿದಂತೆ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ನಡೆದುಕೊಂಡು ಹೋಗುತ್ತಿದ್ದ ವೇಳೆ ಹಿಂದಿನಿಂದ ಬಂದ ಟಿಪ್ಪರ್ ಲಾರಿ ಹರಿದ ಪರಿಣಾಮ ಮಗು ಹಾಗೂ ವ್ಯಕ್ತಿಯೊಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

### ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಡ್‌ನ್ಯೂಸ್ : ಸಿಗಲಿದೆ 6,000ವರೆಗೆ ಸ್ಕಾಲರ್ ಶಿಪ್

• **ಉದಯವಾಹಿನಿ, ಬೆಂಗಳೂರು**

ಭಾರತೀಯ ಅಂಚೆ ಇಲಾಖೆಯು ಶಾಲಾ ಮಕ್ಕಳಲ್ಲಿ ಅಂಚೆ ಚೀಟಿ ಸಂಗ್ರಹಣೆ ಉತ್ತೇಜಿಸಲು 'ದೀನ್ ದಯಾಳ್ ಸ್ಪರ್ಶ್ ಯೋಜನೆ' ಅಡಿಯಲ್ಲಿ ವಿದ್ಯಾರ್ಥಿ ವೇತನವನ್ನು ನೀಡುವುದಕ್ಕಾಗಿ 6 ನೇ ತರಗತಿಯಿಂದ 9 ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಂದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಸ್ಪರ್ಶ್ ಎಂದರೆ ಸ್ಟ್ಯಾಂಪ್‌ಗಳಲ್ಲಿ ಅಭಿರುಚಿ ಮತ್ತು ಸಂಶೋಧನೆಯನ್ನು ಹವ್ಯಾಸವಾಗಿ ಉತ್ತೇಜಿಸಲು ವಿದ್ಯಾರ್ಥಿ ವೇತನ, ಶೈಕ್ಷಣಿಕ ಪಠ್ಯಕ್ರಮ ಬಲಪಡಿಸಲು ಮತ್ತು ಪೂರಕವಾಗಿ ಸಮರ್ಥನೀಯ ರೀತಿಯಲ್ಲಿ, ಚಿಕ್ಕ ವಯಸ್ಸಿನ ಮಕ್ಕಳಲ್ಲಿ ಅಂಚೆ ಚೀಟಿಗಳ ಸಂಗ್ರಹದ ಹವ್ಯಾಸ ಉತ್ತೇಜಿಸುವುದು ವಿದ್ಯಾರ್ಥಿ ವೇತನದ ಉದ್ದೇಶವಾಗಿದೆ. ಈ ಹವ್ಯಾಸವು ಅವರಿಗೆ ವಿಶ್ರಾಂತಿ ಮತ್ತು ಒತ್ತಡ ನಿವಾರಿಸಲು ಸಹಾಯ ಮಾಡುತ್ತದೆ. ಈ ಯೋಜನೆಯಡಿ, 2023-24 ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ಶೇ.60 ಅಂಕಗಳನ್ನು ಹೊಂದಿರುವ ಮತ್ತು ಅಂಚೆ ಚೀಟಿಗಳ ಸಂಗ್ರಹದ ಠೇವಣಿ ಖಾತೆ/ ಫಿಲಾಟೆಲಿಕ್ ಕ್ಲಬ್‌ನ ಸದಸ್ಯರು ಮತ್ತು ಅಂಚೆ ಚೀಟಿ ಸಂಗ್ರಹವನ್ನು ಹವ್ಯಾಸವಾಗಿ ಮುಂದುವರಿಸುವ 6 ನೇ ತರಗತಿಯಿಂದ 9 ನೇ ತರಗತಿಯ ವಿದ್ಯಾರ್ಥಿಗಳಿಗೆ ರೂ. 6 ಸಾವಿರಗಳ ವಿದ್ಯಾರ್ಥಿ ವೇತನ ನೀಡಲಾಗುತ್ತದೆ.

ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಅಂಚೆ ಚೀಟಿಗಳ ಸಂಗ್ರಹದ ರಸಪ್ರಶ್ನೆಯಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ಅಂಚೆ ಇಲಾಖೆಯು ನೀಡುವ


ಉದಯವಾಹಿನಿ ಚಿತ್ರ

ಅಂಚೆ ಚೀಟಿಗಳ ಸಂಗ್ರಹ ಯೋಜನೆಯಲ್ಲಿ ಯಶಸ್ವಿಯಾಗಿ ಸ್ಪರ್ಧಿಸಬೇಕಿದೆ.

**ಅಂಚೆಚೀಟಿಗಳ ಸಂಗ್ರಹದ ರಸಪ್ರಶ್ನೆಯಲ್ಲಿ ಭಾಗವಹಿಸಲು ಅರ್ಜಿ ಸಲ್ಲಿಸಲು ಪೋಸ್ಟ್ ಮಾಡಲು ಆಗಸ್ಟ್, 31 ಕೊನೆಯ ದಿನವಾಗಿದೆ. ಕೊಡಗು ಜಿಲ್ಲೆಯ ಎಲ್ಲಾ ಶಾಲೆಗಳು ತಮ್ಮ ವಿದ್ಯಾರ್ಥಿಗಳನ್ನು ವಿದ್ಯಾರ್ಥಿ ವೇತನದ ಈ ಯೋಜನೆಯಲ್ಲಿ ಭಾಗವಹಿಸಲು ಪ್ರೋತ್ಸಾಹಿಸಲಾಗುತ್ತಿದೆ. ಹೆಚ್ಚಿನ ಮಾಹಿತಿಗೆ ಬಿ.ಎಸ್.ಸುದರ್ಶನ, ಮಾರ್ಕೆಟಿಂಗ್ ಎಕ್ಸಿಕ್ಯೂಟಿವ್, ಕೊಡಗು ಅಂಚೆ ವಿಭಾಗ ದೂ.ಸಂ. 9448291044 ನ್ನು ಸಂಪರ್ಕಿಸಬಹುದು ಎಂದು ಕೊಡಗು ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.**

### ಕರ್ನಾಟಕ ಲೋಕಸೇವಾ ಆಯೋಗ ಮಹತ್ವದ ನಿರ್ಧಾರ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ ಲೋಕಸೇವಾ ಆಯೋಗವು ಮಹತ್ವದ ನಿರ್ಧಾರವೊಂದು ಕೈಗೊಂಡಿದ್ದು, ಇನ್ಮುಂದೆ ಭಾನುವಾರಗಳಂದು ನಡೆಯುವ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳೊಂದಿಗೆ ದಿನಾಂಕ ಘರ್ಷಣೆ ತಪ್ಪಿಸಲು ವಾರದ ದಿನಗಳಂದು ಪರೀಕ್ಷೆ ನಡೆಸಲು ಮುಂದಾಗಿದೆ.ಹೌದು, ಲೋಕಸೇವಾ ಆಯೋಗವು ಅಧಿಸೂಚನೆ ಹೊರಡಿಸಿರುವ 7 ಪರೀಕ್ಷೆಗಳು ಮತ್ತು ಅಧಿಸೂಚನೆ ಹೊರಡಿಸಬೇಕಿರುವ 2 ಪರೀಕ್ಷೆಗಳು ಸೇರಿದಂತೆ ಒಟ್ಟು 9 ಅಧಿಸೂಚನೆಗಳ ಪರೀಕ್ಷಾ ದಿನಾಂಕಗಳನ್ನು ಪ್ರಕಟಿಸಿದೆ.ಸೆಪ್ಟೆಂಬರ್ ನಿಮದ ಡಿಸೆಂಬರ್ ವರೆಗೆ ಒಟ್ಟು 23 ಪರೀಕ್ಷೆಗಳು ನಡೆಯಲಿದ್ದು, ಅದರಲ್ಲಿ 2 ಭಾನುವಾರ ನಿಗದಿಯಾಗಿದ್ದರೆ, ಉಳಿದ ಪರೀಕ್ಷೆಗಳು ಶನಿವಾರ ಹಾಗೂ ಇತರ ವಾರದ ದಿನಗಳಂದು ನಡೆಯಲಿದೆ.

### ಪಶ್ಚಿಮ ಘಟ್ಟದಲ್ಲಿ ಭೂ ಪರಿವರ್ತನೆಗೆ ಕಡಿವಾಣ

• **ಉದಯವಾಹಿನಿ, ಬೆಂಗಳೂರು**

ಕರ್ನಾಟಕ, ಕೇರಳದ ಪಶ್ಚಿಮ ಘಟ್ಟಗಳಲ್ಲಿ ಸರಣಿ ವಿಪತ್ತುಗಳ ಹಿನ್ನೆಲೆಯಲ್ಲಿ, ಬೆಟ್ಟದ ಸ್ಥಿರತೆಯ ಮೇಲೆ ಭೂ ಬದಲಾವಣೆಯ ಪರಿಣಾಮವನ್ನು ಕಡಿಮೆ ಮಾಡಲು ಪಶ್ಚಿಮ ಘಟ್ಟಗಳ ಪ್ರದೇಶಗಳಿಗೆ ವಲಯ ನಿಯಂತ್ರಣ ಮತ್ತು ಮಾಸ್ಟರ್ ಪ್ಲಾನ್ ಗೆ ಅರಣ್ಯ ಇಲಾಖೆ ಕರೆ ನೀಡಿದೆ ಮತ್ತು ಭೂ ಪರಿವರ್ತನೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ಪ್ರಸ್ತಾಪಿಸಿದೆ.

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಅವರು ಭೂ ಬಳಕೆ ಆಡಳಿತದಲ್ಲಿ ತೊಡಗಿರುವ ವಿವಿಧ ಇಲಾಖೆಗಳೊಂದಿಗೆ ಸಮಾಲೋಚನೆ ನಡೆಸಿ ಸರ್ಕಾರಕ್ಕೆ ಪ್ರಸ್ತಾವನೆ ಸಿದ್ಧಪಡಿಸುವಂತೆ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗೆ ನಿರ್ದೇಶನ ನೀಡಿದ್ದಾರೆ. ಪಶ್ಚಿಮ ಘಟ್ಟಗಳ ಪರಿಸರ ಸೂಕ್ಷ್ಮ ಪ್ರದೇಶಕ್ಕಾಗಿ ಕೇಂದ್ರವು ಆರನೇ ಕರಡು ಅಧಿಸೂಚನೆಯನ್ನು ಹೊರಡಿಸಿದ ಕೆಲವು ದಿನಗಳ ನಂತರ, ಹಿಂದಿನ ಕರಡುಗಳನ್ನು ಸೂಚಿಸಲು ರಾಜ್ಯಗಳು ನಿರಾಕರಿಸಿದ್ದರಿಂದ ಈ ಕ್ರಮ ಕೈಗೊಳ್ಳಲಾಗಿದೆ. ಭೂಕುಸಿತಕ್ಕೆ ಸಾಕ್ಷಿಯಾದ ಹಿಮಾಚಲ ಪ್ರದೇಶವು ದುರ್ಬಲ ಪ್ರದೇಶಗಳಲ್ಲಿ ಭೂ ಬಳಕೆ ಬದಲಾವಣೆ ಮತ್ತು ನಿರ್ಮಾಣಕ್ಕಾಗಿ ಪ್ರತ್ಯೇಕ ನಿಯಮಗಳನ್ನು ಪರಿಚಯಿಸಿದೆ ಎಂದು ಸಚಿವರು ಗಮನಿಸಿದರು.

ಕೊಡಗು ಜಿಲ್ಲೆಯಲ್ಲಿ ಭೂಕುಸಿತದಿಂದ ಮಾನವ ಚಟುವಟಿಕೆಗಳು ಅತಿಕ್ರಮಣದಿಂದ ಅಭಿವೃದ್ಧಿ ಚಟುವಟಿಕೆಗಳವರೆಗೆ, ಜೀವಹಾನಿ ಮತ್ತು ಆಸ್ತಿಪಾಸ್ತಿಗಳಿಗೆ ಹಾನಿಯಾಗುವ ವಿಪತ್ತುಗಳಿಗೆ ಸಂಭವನೀಯ ಕಾರಣಗಳಾಗಿವೆ ಎಂದು ತೋರಿಸಿದೆ ಎಂದು ಅವರು ಹೇಳಿದರು.


ಉದಯವಾಹಿನಿ ಚಿತ್ರ

**ಭೂ ಬಳಕೆ ಬದಲಾವಣೆಯ ಬಗ್ಗೆ ವಲಯ ನಿಯಂತ್ರಣ ಮತ್ತು ಮಾಸ್ಟರ್ ಪ್ಲಾನ್ ಸಿದ್ಧಪಡಿಸುವವರೆಗೆ ಪಶ್ಚಿಮ ಘಟ್ಟಗಳಲ್ಲಿನ ಎಲ್ಲಾ ಭೂ ಪರಿವರ್ತನೆ ಪ್ರಸ್ತಾಪಗಳನ್ನು ಸ್ಥಗಿತಗೊಳಿಸಬೇಕು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ ಎಂದು ಖಂಡ್ರೆ ಹೇಳಿದರು.**

### ಬ್ಯಾಂಕ್ ಖಾತೆ ಬಂದ್ ಮಾಡುವ ಆದೇಶಕ್ಕೆ 15 ದಿನ ತಡೆಹಿಡಿದ ರಾಜ್ಯ ಸರ್ಕಾರ

• **ಉದಯವಾಹಿನಿ, ಬೆಂಗಳೂರು**

ಎಸ್ಬಿಐ, ಪಿಎನ್ಬಿ ಜೊತೆಗಿನ ಎಲ್ಲಾ ವ್ಯವಹಾರಗಳನ್ನು 15 ದಿನಗಳ ಕಾಲ ತಡೆಹಿಡಿಯುವಂತೆ ಕರ್ನಾಟಕ ಸರ್ಕಾರ ಸುತ್ತೋಲೆ ಹೊರಡಿಸಿದೆ. ಈ ಮೂಲಕ ಅಕ್ರಮ ಹಣ ವರ್ಗಾವಣೆಗೆ ಬ್ರೇಕ್ ಹಾಕುವಂತ ಮಹತ್ವದ ನಿರ್ಧಾರ ಕೈಗೊಂಡಿದೆ.ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್ಬಿಐ) ಮತ್ತು ಪಂಜಾಬ್ ನ್ಯಾಷನಲ್ ಬ್ಯಾಂಕ್ (ಪಿಎನ್ಬಿ) ಸೇರಿದಂತೆ ಎರಡು ಸಾರ್ವಜನಿಕ ಬ್ಯಾಂಕುಗಳಲ್ಲಿನ ಎಲ್ಲಾ ವಹಿವಾಟುಗಳನ್ನು ಸ್ಥಗಿತಗೊಳಿಸುವ ನಿರ್ಧಾರವನ್ನು ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರ ತಡೆಹಿಡಿದಿದೆ.ಠೇವಣಿ ಹಿಂಪಡೆಯುವ ನಿರ್ಧಾರವನ್ನು ಸಿದ್ದರಾಮಯ್ಯ ಸರ್ಕಾರ 15 ದಿನಗಳ ಕಾಲ ತಡೆಹಿಡಿದಿದೆ.



ಜುಲೈ 2, 2024 ಮತ್ತು ಆಗಸ್ಟ್ 6, 2024 ರಂದು ಸಾರ್ವಜನಿಕ ಲೆಕ್ಕಪತ್ರ ಸಮಿತಿಯು ಮಾಡಿದ ಅವಲೋಕನಗಳು ಮತ್ತು ಕಂಟ್ರೋಲರ್ ಮತ್ತು ಆಡಿಟರ್ ಜನರಲ್ ಅವರ ವರದಿಯಲ್ಲಿ ಸೇರಿಸಲಾದ ಲೆಕ್ಕಪರಿಶೋಧನಾ ಸಂಶೋಧನೆಗಳ ಆಧಾರದ ಮೇಲೆ, ಆಗಸ್ಟ್ 12, 2024 ರಂದು ಎಫ್ಡಿ-ಕ್ಯಾಮ್ / 49/2024 ಎಂಬ ಸುತ್ತೋಲೆಯನ್ನು ಹೊರಡಿಸುವ ನಿರ್ಧಾರವನ್ನು ಸರ್ಕಾರ ತೆಗೆದುಕೊಂಡಿದೆ, ಎಲ್ಲಾ ಇಲಾಖೆಗಳು ತಮ್ಮ ಠೇವಣಿಗಳನ್ನು ಹಿಂತೆಗೆದುಕೊಳ್ಳುವಂತೆ ಮತ್ತು ಪಂಜಾಬ್ ನ್ಯಾಷನಲ್ ಬ್ಯಾಂಕ್ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಎಲ್ಲಾ ಶಾಖೆಗಳಲ್ಲಿ ಹೆಚ್ಚಿನ ಠೇವಣಿಗಳನ್ನು ನಿರ್ಬಂಧಿಸಲು ನಿರ್ದೇಶಿಸಿದೆ ಎಂದು ಸರ್ಕಾರ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್ಪಿಸಿಬಿ) ಮತ್ತು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ (ಕೆಐಎಡಿಬಿ) ಮಾಡಿದ ಸ್ಥಿರ ಠೇವಣಿಗಳನ್ನು ಮರುಪಾವತಿಸದ ಕಾರಣ ಬ್ಯಾಂಕ್ ಶಾಖೆಗಳಲ್ಲಿ ನಡೆದಿದೆ ಎನ್ನಲಾದ ವಂಚನೆಗೆ ಪ್ರತಿಕ್ರಿಯೆಯಾಗಿ ಈ ಕ್ರಮ ಕೈಗೊಳ್ಳಲಾಗಿದೆ. ದೀರ್ಘಕಾಲದ ಪತ್ರವ್ಯವಹಾರ ಮತ್ತು ಸಭೆಗಳ ಹೊರತಾಗಿಯೂ, ಈ ಸಮಸ್ಯೆಗಳು 2012-13 ರಿಂದ ಬಗೆಹರಿಯದೆ ಉಳಿದಿವೆ. ಆಗಸ್ಟ್ 16, 2024 ರಂದು, 2 ಬ್ಯಾಂಕುಗಳು ಸರ್ಕಾರಕ್ಕೆ ಲಿಖಿತ ಪ್ರಾತಿನಿಧ್ಯಗಳನ್ನು ಸಲ್ಲಿಸಿದವು. ಈ ವಿಷಯವನ್ನು ಪರಿಹರಿಸಲು 15 ದಿನಗಳ ಅವಧಿಯನ್ನು ಕೋರಿದವು. ಅದೇ ದಿನ, ಹಿರಿಯ ಬ್ಯಾಂಕ್ ಅಧಿಕಾರಿಗಳು ಹಣಕಾಸು ಇಲಾಖೆಯ ಉನ್ನತ ಅಧಿಕಾರಿಗಳನ್ನು ಭೇಟಿಯಾಗಿ ತಮ್ಮ ಮನವಿಯನ್ನು ಪುನರುಚ್ಚರಿಸಿದರು ಸರ್ಕಾರ ತಿಳಿಸಿದೆ. ಬ್ಯಾಂಕುಗಳ ಮನವಿಯನ್ನು ಪರಿಗಣಿಸಿದ ನಂತರ, ಮಾನ್ಯ ಮುಖ್ಯಮಂತ್ರಿಗಳು ಸುತ್ತೋಲೆಯನ್ನು 15 ದಿನಗಳವರೆಗೆ ತಡೆಹಿಡಿಯುವಂತೆ ಹಣಕಾಸು ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**ಇದು ಸಮಸ್ಯೆಗಳನ್ನು ಪರಿಹರಿಸಲು ಮತ್ತು ಸರ್ಕಾರದ ಕಳವಳಗಳನ್ನು ಪರಿಹರಿಸಲು ಬ್ಯಾಂಕುಗಳಿಗೆ ಸಾಕಷ್ಟು ಸಮಯವನ್ನು ನೀಡುತ್ತದೆ ಎಂದು ಅದು ಹೇಳಿದೆ. ಸರ್ಕಾರವು ತನ್ನ ಎಲ್ಲಾ ವ್ಯವಹಾರಗಳಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಖಚಿತಪಡಿಸಿಕೊಳ್ಳಲು ಬದ್ಧವಾಗಿದೆ. ನಾವು ಪರಿಸ್ಥಿತಿಯನ್ನು ಮೇಲ್ವಿಚಾರಣೆ ಮಾಡುವುದನ್ನು ಮುಂದುವರಿಸುತ್ತೇವೆ ಮತ್ತು ಎಲ್ಲಾ ಮಧ್ಯಸ್ಥಗಾರರ ಹಿತಾಸಕ್ತಿಗಳನ್ನು ರಕ್ಷಿಸಲು ಸೂಕ್ತ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸರ್ಕಾರ ಹೇಳಿದೆ.**

### ರಾಜ್ಯದಲ್ಲಿ ಭಾರೀ ಮಳೆ : 14 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ

• **ಉದಯವಾಹಿನಿ, ಬೆಂಗಳೂರು**

ರಾಜ್ಯದ ಹಲವು ಜಿಲ್ಲೆಗಳಲ್ಲಿ ಮುಂದಿನ 48 ಗಂಟೆಯಲ್ಲಿ ರಾಜ್ಯದ 14 ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆನೀಡಿದೆ.ಹವಾಮಾನ ಇಲಾಖೆಯ ಮುನ್ಸೂಚನೆ ಪ್ರಕಾರ, ರಾಜ್ಯದ 14 ಜಿಲ್ಲೆಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಉಡುಪಿ, ಬಾಗಲಕೋಟೆ, ಬೀದರ್, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು ವಿಜಯಪುರ, ಯಾದಿಗಿರಿ, ಬಳ್ಳಾರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಜಿಲ್ಲೆಗಳಲ್ಲಿ 6ರಿಂದ 12 ಸೆಂ. ಮೀ. ವರೆಗೆ ಮಳೆಯಾಗುವ ಸಾಧ್ಯತೆ ಇದೆ.ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬೆಂಗಳೂರು ಸೇರಿ ಕೆಲವೆಡೆ ಆಗಸ್ಟ್ 21ರವರೆಗೆ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

### ಕೇಂದ್ರ ಸಚಿವ ವಿ.ಸೋಮಣ್ಣ ಕಚೇರಿ ಕಟ್ಟಡ ಹಿಂಪಡೆದ ಸರಕಾರ

• **ಉದಯವಾಹಿನಿ, ಬೆಂಗಳೂರು**

ನಗರದ ಟ್ರಾವೆಲರ್ಸ್ ಬಂಗಲೆ ಆವರಣದಲ್ಲಿರುವ ಸರ್ಕ್ಯೂಟ್ ಹೌಸ್ ಅನ್ನು ತುಮಕೂರು ಸಂಸದ ಮತ್ತು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಅವರ ಕಚೇರಿಯಾಗಿ ಬಳಸಲು ಈ ಹಿಂದೆ ನೀಡಿದ್ದ ಅನುಮತಿಯನ್ನು ರಾಜ್ಯ ಲೋಕೋಪಯೋಗಿ ಇಲಾಖೆ ಹಠಾತ್ತನೆ ರದ್ದುಪಡಿಸಿದೆ.ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಸರ್ಕ್ಯೂಟ್ ಹೌಸ್ ಅನ್ನು ನವೀಕರಿಸಲಾಗಿದ್ದು, ಆಗಸ್ಟ್ 18 ರಂದು ಉದ್ಘಾಟನೆಯಾಗಬೇಕಿತ್ತು.

ಸೋಮಣ್ಣ ಅವರು ಭಾನುವಾರ ದಿಂದಲೇ ತಮ್ಮ ಹೊಸ ಕಚೇರಿಯಿಂದ ಕೆಲಸ ಪ್ರಾರಂಭಿಸಲು ಸಿದ್ಧತೆ ನಡೆಸಿದ್ದರು. ಆದರೆ, ಸೋಮಣ್ಣ ಅವರ ಕಚೇರಿ ಉದ್ದೇಶಕ್ಕಾಗಿ ಟ್ರಾವೆಲರ್ಸ್ ಬಂಗಲೆಯಲ್ಲಿ ಸ್ಥಳಾವಕಾಶ ನೀಡಲು ಸಾಧ್ಯವಿಲ್ಲ ಎಂದು ಪಿಡಬ್ಲ್ಯುಡಿ ಈಗ ತನ್ನ ಆದೇಶವನ್ನು ಹಿಂತೆಗೆದುಕೊಂಡಿದ್ದು, ಬಿಜೆಪಿ ಮತ್ತು ಜೆಡಿಎಸ್ ನಾಯಕರ ಅಸಮಾಧಾನಕ್ಕೆ ಕಾರಣವಾಗಿದೆ.ನಗರದಲ್ಲಿ ಶುಕ್ರವಾರ ಜಂಟಿ ಪತ್ರಿಕಾಗೋಷ್ಠಿ ನಡೆಸಿದ ಬಿಜೆಪಿ ಶಾಸಕರಾದ ಬಿ.ಸುರೇಶ್ ಗೌಡ, ಜಿ.ಬಿ.ಜ್ಯೋತಿಗಣೇಶ್ ಮತ್ತು ಜೆಡಿಎಸ್ ಶಾಸಕ ಸಿ.ಬಿ.ಸುರೇಶ್ ಬಾಬು ಅವರು ರಾಜ್ಯ ಸರ್ಕಾರದ ವಿರುದ್ಧ ಒಕ್ಕೊರಲಿನಿಂದ ವಾಗ್ದಾಳಿ ನಡೆಸಿದರು. ಇದಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಜಿ.ಪರಮೇಶ್ವರ್ ನೇರ ಹೊಣೆ. ಅವರು ಸೇಡಿನ ರಾಜಕೀಯದಲ್ಲಿ ತೊಡಗಿದ್ದಾರೆ ಮತ್ತು ದಬ್ಬಾಳಿಕೆಯ ಮೂಲಕ ಆಳಲು ಪ್ರಯತ್ನಿಸುತ್ತಿದ್ದಾರೆ.

## ಬೈಕ್ ಸವಾರ ಹೆಲ್ಮೆಟ್ ಧರಿಸದಿದ್ದರೂ ಪರಿಹಾರ ಪಡೆಯಲು ಅರ್ಹ

### ಕೆ.ಸೋಮಶೇಖರ್, ನ್ಯಾಯಮೂರ್ತಿ ಚಿಲ್ಲಾಕೂರು ಸುಮಲತಾ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಆದೇಶ

• **ಉದಯವಾಹಿನಿ, ಬೆಂಗಳೂರು**

ಹೆಲ್ಮೆಟ್ ಧರಿಸದಿರುವುದು ಕಾನೂನಿನ ಉಲ್ಲಂಘನೆಯಾಗಿದ್ದು, ಅದು ಸ್ವಯಂಚಾಲಿತವಾಗಿ ಪರಿಹಾರ ಪಡೆಯಲು ಯಾರನ್ನಾದರೂ ಅನರ್ಹಗೊಳಿಸುವುದಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಇತ್ತೀಚಿನ ತೀರ್ಪಿನಲ್ಲಿ ತಿಳಿಸಿದೆ.

ಸಾದತ್ ಅಲಿ ಖಾನ್ ಎಂಬುವವರು ಸಲ್ಲಿಸಿದ್ದ ಮೇಲ್ಮನವಿಗೆ ನ್ಯಾಯಮೂರ್ತಿ ಕೆ.ಸೋಮಶೇಖರ್ ಮತ್ತು ನ್ಯಾಯಮೂರ್ತಿ ಚಿಲ್ಲಾಕೂರು ಸುಮಲತಾ ಅವರಿದ್ದ ವಿಭಾಗೀಯ ನ್ಯಾಯಪೀಠ ಈ ಆದೇಶ ನೀಡಿದೆ.2016ರ ಮಾರ್ಚ್ 5ರಂದು ಬೆಂಗಳೂರು-ಮೈಸೂರು ರಸ್ತೆಯಲ್ಲಿ ಕಾರು ಅಪಘಾತಕ್ಕೀಡಾಗಿತ್ತು. ರಾಮನಗರ ತಾಲ್ಲೂಕಿನ ವಡೇರಹಳ್ಳಿ ಗ್ರಾಮದ ಬಳಿ ಬೈಕ್ ಗೆ ಹಿಂದಿನಿಂದ ಬಂದ ಕಾರು ಡಿಕ್ಕಿ ಹೊಡೆದಿದೆ. ಅವರ ತಲೆ ಮತ್ತು ದೇಹದ ಇತರ ಭಾಗಗಳಿಗೆ ಗಾಯಗಳಾಗಿವೆ. ತನ್ನ ವೈದ್ಯಕೀಯ ಚಿಕಿತ್ಸೆ ಮತ್ತು ಇತರ ಆಕಸ್ಮಿಕ ವೆಚ್ಚಗಳಿಗಾಗಿ 10 ಲಕ್ಷ ರೂ.ಗಳನ್ನು ಖರ್ಚು ಮಾಡಿದ್ದೇನೆ ಎಂದು ಖಾನ್ ಪರಿಹಾರಕ್ಕಾಗಿ ರಾಮನಗರದ ಮೋಟಾರು ಅಪಘಾತ ಕ್ಲೈಮ್ ಟ್ರಿಬ್ಯೂನಲ್ ಅನ್ನು ಸಂಪರ್ಕಿಸಿದ್ದರು. ಸೆಪ್ಟೆಂಬರ್ 24, 2020 ರಂದು, ನ್ಯಾಯಮಂಡಳಿ ಅಪಘಾತದ ಸಮಯದಲ್ಲಿ ಹಕ್ಕುದಾರ ಹೆಲ್ಮೆಟ್ ಧರಿಸಿರಲಿಲ್ಲ ಎಂದು ಗಮನಸೆಳೆದು 5.61 ಲಕ್ಷ ರೂ.ಗಳ ಪರಿಹಾರವನ್ನು ನೀಡಿತು. ಈ ಆದೇಶವನ್ನು ಪ್ರಶ್ನಿಸಿದ ಖಾನ್, ಮರದ ಆಟಿಕೆಗಳ ತಯಾರಿಕೆಯಲ್ಲಿ ತೊಡಗಿಸಿಕೊಂಡಿದ್ದೇನೆ ಮತ್ತು ತಿಂಗಳಿಗೆ 35,000 ರೂ.ಗಳನ್ನು ಕಳೆದುಕೊಂಡಿದ್ದೇನೆ ಎಂದು ಹೇಳಿದ್ದಾರೆ. ಹಕ್ಕುದಾರನು ಹೆಲ್ಮೆಟ್ ಧರಿಸಿರಲಿಲ್ಲ ಮತ್ತು ದೇಹದ ಪ್ರಮುಖ ಭಾಗಗಳಿಗೆ ಗಾಯಗಳಾಗಿವೆ ಎಂದು ನ್ಯಾಯಮಂಡಳಿ ಗಮನಿಸಿದ್ದರೂ, ಅವನು ಪರಿಹಾರಕ್ಕೆ ಅರ್ಹನಾಗಿದ್ದಾನೆ ಎಂದು ವಿಭಾಗೀಯ ಪೀಠ ಹೇಳಿದೆ.

ಮೋಟಾರು ವಾಹನ ಅಪಘಾತಗಳಲ್ಲಿ ಕೊಡುಗೆ ನೀಡುವ ನಿರ್ಲಕ್ಷ್ಯದ ಪರಿಕಲ್ಪನೆಯು ಗಾಯಗೊಂಡ ವ್ಯಕ್ತಿಯ ಸ್ವಂತ ನಿರ್ಲಕ್ಷ್ಯವು ಅಪಘಾತ ಸಂಭವಿಸಲು ಅಥವಾ ಅವರ ಗಾಯಗಳ ತೀವ್ರತೆಗೆ ಕೊಡುಗೆ ನೀಡಿದಾಗ ಸಂಭವಿಸುತ್ತದೆ.

ಅಪಘಾತಕ್ಕೆ ಕಾರಣವಾಗುವಲ್ಲಿ ಪ್ರತಿವಾದಿಯ ನಿರ್ಲಕ್ಷ್ಯ ಮತ್ತು ಒಟ್ಟಾರೆ ಸಂದರ್ಭಗಳನ್ನು ನಿರ್ಣಯಿಸುವಲ್ಲಿ ಪರಿಹಾರವನ್ನು ನಿರ್ಧರಿಸುವಲ್ಲಿ ಪ್ರಾಥಮಿಕ ಗಮನವು ಉಳಿದಿದೆ ಎಂದು ನ್ಯಾಯಾಲಯಗಳು ಸ್ಥಾಪಿಸಿವೆ. ಸುರಕ್ಷತೆಗೆ ಹೆಲ್ಮೆಟ್ ಧರಿಸುವುದು ನಿರ್ಣಾಯಕವಾಗಿದ್ದರೂ, ಪರಿಹಾರವನ್ನು ಕಡಿಮೆ ಮಾಡುವಲ್ಲಿ ಇದು ಏಕೈಕ ಅಂಶವಾಗಬಾರದು. ಹಕ್ಕುದಾರನು ಹೆಲ್ಮೆಟ್ ಧರಿಸಲು ವಿಫಲವಾದಾಗ ಅವರ ಗಾಯಗಳಿಗೆ ಎಷ್ಟರ ಮಟ್ಟಿಗೆ ಕಾರಣವಾಯಿತು ಎಂಬುದನ್ನು ನ್ಯಾಯಾಲಯವು ಮೌಲ್ಯಮಾಪನ ಮಾಡುತ್ತದೆ ಮತ್ತು ಕೊಡುಗೆ ಕಂಡುಬಂದರೆ ಅನುಪಾತದಲ್ಲಿ ಪರಿಹಾರವನ್ನು ಕಡಿಮೆ ಮಾಡಬಹುದು ಎಂದಿದೆ.



**ಗಾಯಗೊಂಡ ಪಕ್ಷಕ್ಕೆ ನೀಡಲಾಗುವ ಪರಿಹಾರವನ್ನು ಅವರ ತಪ್ಪಿನ ಪ್ರಮಾಣಕ್ಕೆ ಅನುಗುಣವಾಗಿ ಕಡಿಮೆ ಮಾಡಬಹುದು. ಮೋಟಾರು ವಾಹನ ಕಾಯ್ದೆ, 1988 ರ ಸೆಕ್ಷನ್ 129 (ಎ) ಮೋಟಾರ್ ಸೈಕಲ್ ಸವಾರಿ ಮಾಡುವಾಗ ರಕ್ಷಣಾತ್ಮಕ ತಲೆಗವಸು ಬಳಸುವುದನ್ನು ಕಡ್ಡಾಯಗೊಳಿಸುತ್ತದೆ. ಹೆಲ್ಮೆಟ್ ಧರಿಸದಿರುವುದು ಕಾನೂನಿನ ಉಲ್ಲಂಘನೆಯಾಗಿದ್ದರೂ, ಪರಿಹಾರ ಪಡೆಯುವುದರಿಂದ ಯಾರನ್ನಾದರೂ ಸ್ವಯಂಚಾಲಿತವಾಗಿ ಅನರ್ಹಗೊಳಿಸುವುದಿಲ್ಲ ಎಂದು ನ್ಯಾಯಪೀಠ ಹೇಳಿದೆ.**

# ರಾಜ್ಯಪಾಲರ ನಡೆಗೆ ಆಕ್ರೋಶ, ವಾಪಸ್ ಕರೆಸಿಕೊಳ್ಳಲು ಆಗ್ರಹ

## ರಾಷ್ಟ್ರಪತಿಗಳು ಕೂಡಲೇ ವಾಪಸ್ ಕರೆಸಿಕೊಳ್ಳಬೇಕು: ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಒತ್ತಾಯ

• ಉದಯವಾಹಿನಿ, ಮೈಸೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ತನಿಖೆಗೆ ಅನುಮತಿ ನೀಡುವ ಮೂಲಕ ರಾಜ್ಯಪಾಲರು ಬಿಜೆಪಿ–ಜೆಡಿಎಸ್‌ನವರ ಏಜೆಂಟರಂತೆ ಹಾಗೂ ಕೈಗೊಂಬೆಯಂತೆ ವರ್ತಿಸಿದ್ದಾರೆ. ಅವರನ್ನು ರಾಷ್ಟ್ರಪತಿಗಳು ಕೂಡಲೇ ವಾಪಸ್ ಕರೆಸಿಕೊಳ್ಳಬೇಕು' ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಒತ್ತಾಯಿಸಿದರು.

ಇಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಬೇಕು ಎನ್ನುವುದು ಬಿಜೆಪಿಯವರ ಹುನ್ನಾರ. ಅವರು ಅಧಿಕಾರ ಸ್ವೀಕರಿಸಿದ ದಿನದಿಂದಲೇ ಇದಕ್ಕಾಗಿ ಯೋಜನೆ ಸಿದ್ಧಪಡಿಸಿದ್ದಾರೆ. ಅವರಿಗೆ ಜೆಡಿಎಸ್‌ನವರು ಕೈಜೋಡಿಸಿದ್ದಾರೆ. ಇದಕ್ಕಾಗಿ ರಾಜಭವನವನ್ನು ತಮ್ಮ ಕಚೇರಿಯನ್ನಾಗಿ ಮಾಡಿಕೊಂಡು ಪ್ರಜಾಪ್ರಭುತ್ವದ ಕಗ್ಗೊಲೆ ಮಾಡಿದ್ದಾರೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಎಚ್‌ಡಿಕೆ ವಿರುದ್ಧ ಪ್ರಕರಣ ದಾಖಲು**

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಪ್ರಕರಣ ದಾಖಲಿಸಲು ಅನುಮತಿ ಕೋರಿ ಕರ್ನಾಟಕ ಲೋಕಾಯುಕ್ತದಿಂದ ಸಲ್ಲಿಕೆಯಾಗಿರುವ ಅರ್ಜಿಯ ವಿಷಯದಲ್ಲಿ ಹತ್ತು ತಿಂಗಳಾದರೂ ರಾಜ್ಯಪಾಲರು ಕ್ರಮ ಕೈಗೊಂಡಿಲ್ಲ. ಬಿಜೆಪಿ ಮಾಜಿ ಸಚಿವರದ ಶಶಿಕಲಾ ಜೊಲ್ಲೆ ಹಾಗೂ ಮುರುಗೇಶ್ ನಿರಾಣಿ ಅವರ ವಿರುದ್ಧದ ಪತ್ರದ ವಿಷಯದಲ್ಲೂ ಕ್ರಮ ಜರುಗಿಸಿಲ್ಲ. ಆದರೆ, ಸಿದ್ದರಾಮಯ್ಯ ಅವರ ವಿರುದ್ಧ ಖಾಸಗಿ ವ್ಯಕ್ತಿಗಳು ನೀಡಿದ ದೂರು ಅರ್ಜಿಯನ್ನು ರಾಜ್ಯಪಾಲರು ತಕ್ಷಣವೇ ಪರಿಗಣಿಸಿದ್ದಾರೆ. ಯಾವ ಸಕ್ಷಮ ಪ್ರಾಧಿಕಾರವು ಸಿದ್ದರಾಮಯ್ಯ ವಿರುದ್ಧ ದೂರುಸಲ್ಲಿಸಿತ್ತು ಎಂಬುದನ್ನು ರಾಜ್ಯಪಾಲರು ಬಹಿರಂಗಪಡಿಸಬೇಕು' ಎಂದು ಒತ್ತಾಯಿಸಿದರು. ಹಿಂದುಳಿದ ವರ್ಗಕ್ಕೆ ಸೇರಿದ ಒಬ್ಬ ನಾಯಕ 2ನೇ ಬಾರಿಗೆ ಮುಖ್ಯಮಂತ್ರಿ ಆಗಿರುವುದನ್ನು ಸಹಿಸಿಕೊಳ್ಳಲಾಗದೆ, ಅವರನ್ನು ಅಧಿಕಾರದಿಂದ ಕೆಳಗಿಳಿಸಲೆಂದು ಎಚ್.ಡಿ.ಕುಮಾರಸ್ವಾಮಿ, ಪ್ರಲ್ಹಾದ ಜೋಶಿ, ಬಿ.ವೈ. ವಿಜಯೇಂದ್ರ, ಹಾಗೂ ಆರ್. ಅಶೋಕ ಬಹಳ ಶ್ರಮಿಸುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಕೇಂದ್ರ ಸಚಿವ ಅಮಿತ್ ಶಾ ಆಣತಿಯಂತೆ ಕೆಲಸ ಮಾಡಿದ್ದಾರೆ. ಇದಕ್ಕೆಲ್ಲಾ ನಮ್ಮ ಮುಖ್ಯಮಂತ್ರಿಯಾಗಲಿ ಅಥವಾ ನಮ್ಮ ಪಕ್ಷವಾಗಲಿ ಹೆದರುವುದಿಲ್ಲ' ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿರುದ್ಧವೂ ಷಡ್ಯಂತ್ರ ಮಾಡಲು ಬಿಜೆಪಿಯವರು ಉದ್ದೇಶಿಸಿದ್ದಾರೆ. ಇದು ಅವರ ಅಧಿಕಾರದ ದಾಹವನ್ನು ತೋರಿಸುತ್ತದೆ.



> ನಗರ ಜಿಲ್ಲಾ ಸಮಿತಿಯ ಅಧ್ಯಕ್ಷ ಆರ್. ಮೂರ್ತಿ ಮಾತನಾಡಿ, 'ಇಡೀ ಪಕ್ಷ ಮುಖ್ಯಮಂತ್ರಿ ಜೊತೆಗಿದೆ. ರಾಜ್ಯಪಾಲರಿಂದ ನಡೆದಿರುವ ಪ್ರಜಾಪ್ರಭುತ್ವ ಕಗ್ಗೊಲೆಯ ಪ್ರಯತ್ನವನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ' ಎಂದು ಹೇಳಿದರು.

ಇದೆಲ್ಲವನ್ನೂ ಜನರು ಅರ್ಥ ಮಾಡಿಕೊಳ್ಳಬೇಕು. ಯಾವುದೇ ತನಿಖಾ ಸಂಸ್ಥೆಯೂ ಅನುಮತಿ ಕೇಳದಿದ್ದರೂ ರಾಜ್ಯಪಾಲರು ಅನುಮತಿ ಕೊಟ್ಟಿದ್ದಾರೆ. ಇಂಥ ರಾಜ್ಯಪಾಲರು ರಾಜ್ಯಕ್ಕೆ ಬೇಕಿಲ್ಲ' ಎಂದರು. ಬಿಜೆಪಿ ಹಾಗೂ ಜೆಡಿಎಸ್‌ನವರ ಹುನ್ನಾರವನ್ನು ಜನರು ಅರ್ಥ ಮಾಡಿಕೊಳ್ಳಬೇಕು' ಎಂದು ಕೋರಿದರು.

ರಾಜ್ಯಪಾಲರ ನಡೆಯ ವಿರುದ್ಧ ಕಾನೂನಾತ್ಮಕ ಹಾಗೂ ರಾಜಕೀಯವಾಗಿ ನಾವು ಹೋರಾಟ ಮಾಡುತ್ತೇವೆ. ಪಕ್ಷದ ನಿರ್ದೇಶನದಂತೆ ಅಧಿಕೃತವಾಗಿ ಪ್ರತಿಭಟನೆ ನಡೆಸುತ್ತೇವೆ.

ಕಾಂಗ್ರೆಸ್ ಹೆಸರು ಹೇಳಿಕೊಂಡು ಯಾರೋ ಪ್ರತಿಭಟಿಸಿ ಆಸ್ತಿಪಾಸ್ತಿ ಹಾನಿ ಮಾಡಿದರೆ ಅದಕ್ಕೆ ನಾವು ಜವಾಬ್ದಾರರಲ್ಲ. ಕಾಂಗ್ರೆಸ್ ಹೆಸರು ಹೇಳಿಕೊಂಡು ಬಿಜೆಪಿಯ ಕಿಡಿಗೇಡಿಗಳೇ ಗಲಾಟೆ ಮಾಡಿದರೆ ಅದಕ್ಕೂ ಪಕ್ಷಕ್ಕೂ ಸಂಬಂಧವಿಲ್ಲ' ಎಂದು ಸ್ಪಷ್ಟಪಡಿಸಿದರು. ಹೋರಾಟ ಯಾವುದೇ ಹಂತಕ್ಕೆ ಹೋದರೂ, ಸಿದ್ದರಾಮಯ್ಯ ಅವರ ರಾಜೀನಾಮೆಯ ಪ್ರಶ್ನೆಯೇ ಬರುವುದಿಲ್ಲ' ಎಂದರು. ನಾಲ್ಕು ದಶಕಗಳ ರಾಜಕಾರಣದಲ್ಲಿ ಸಿದ್ದರಾಮಯ್ಯ ಅವರ ಮೇಲೆ ಯಾವುದೇ ಕಪ್ಪುಚುಕ್ಕೆ ಇಲ್ಲ. ಪ್ರಾಮಾಣಿಕತೆ ವಿಚಾರದಲ್ಲಿ ಅವರು ಎಂದಿಗೂ ರಾಜಿ ಆಗುವುದಿಲ್ಲ. ಕಾರ್ಯಕರ್ತರಾದ ನಾವೆಲ್ಲರೂ ಅವರೊಂದಿಗೆ ಇದ್ದೇವೆ' ಎಂದರು.

> ಪಕ್ಷದ ಗ್ರಾಮಾಂತರ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಜೆ. ವಿಜಯ್‌ಕುಮಾರ್ ಮಾತನಾಡಿ, 'ಪಕ್ಷದ ನಿರ್ದೇಶನದಂತೆ ರಾಜ್ಯಪಾಲರ ವಿರುದ್ಧ ಗೋ ಬ್ಯಾಕ್ ಗವರ್ನರ್ ಚಳವಳಿ ನಡೆಸಲಾಗುವುದು. ಬಿಜೆಪಿಯಲ್ಲಿ ನಡೆಯುತ್ತಿರುವ ಭಿನ್ನಮತೀಯ ಚಟುವಟಿಕೆಗಳು ತಾರಕಕ್ಕೆ ಏರುತ್ತಿರುವುದನ್ನು ತಡೆಯುವುದಕ್ಕಾಗಿಯೇ, ರಾಜ್ಯಪಾಲರನ್ನು ಬಳಸಿಕೊಳ್ಳಲಾಗಿದೆ; ಸಿದ್ದರಾಮಯ್ಯ ಅವರ ವಿರುದ್ಧದ ತನಿಖೆಗೆ ಅನುಮತಿ ಕೊಡಿಸಲಾಗಿದೆ' ಎಂದು ಆರೋಪಿಸಿದರು.

---

# ಉದಯ ವಾಹಿನಿ

## ಪ್ರಾದೇಶಿಕ



## ಮಿನಿ ನ್ಯೂಸ್

### ವಿದ್ಯುತ್ ಅವಘಡ: ಇಬ್ಬರು ಸಾವು

• ಉದಯವಾಹಿನಿ, ಪಾವಗಡ

ತಾಲ್ಲೂಕಿನ ಟಿ.ಎನ್.ಬೆಟ್ಟ ಗ್ರಾಮದ ಬಳಿಯ ಜಮೀನಿನಲ್ಲಿ ಶೇಂಗಾ ಬೆಳೆ ಕಾವಲಿಗೆ ಹೋಗಿದ್ದ ಇಬ್ಬರು ವಿದ್ಯುತ್ ತಗುಲಿ ರಾತ್ರಿ ಮೃತಪಟ್ಟಿದ್ದಾರೆ. ಟಿ.ಎನ್.ಬೆಟ್ಟ ಗ್ರಾಮದ ಅನಿಲ್ (29), ಪುಟ್ಟರಾಜು (34) ಮೃತರು. ರಾತ್ರಿ ಶೇಂಗಾ ಬೆಳೆ ಕಾವಲಿಗಾಗಿ ಜಮೀನಿಗೆ ಹೋಗಿದ್ದಾರೆ. ಕಾಡು ಹಂದಿ, ಕರಡಿ ಬಾರದಂತೆ ಅಳವಡಿಸಿದ್ದ ವಿದ್ಯುತ್ ತಂತಿ ತಗುಲಿ ಪುಟ್ಟರಾಜು ಮೃತಪಟ್ಟಿದ್ದಾರೆ.

ಪುಟ್ಟರಾಜು ಅವರನ್ನು ಕಾಪಾಡಲು ಟ್ರಾನ್ಸ್‌ಫಾರ್ಮರ್ ಕಡೆ ಓಡಿ ಹೋಗುತ್ತಿದ್ದ ಅನಿಲ್ ಅವರಿಗೂ ತಂತಿ ತಗುಲಿ ವಿದ್ಯುತ್ ಪ್ರವಹಿಸಿ ಸಾವನ್ನಪ್ಪಿದ್ದಾರೆ. ಶನಿವಾರ ಬೆಳಗ್ಗೆ ಕೂಲಿ ಕಾರ್ಮಿಕರು ಗಮನಿಸಿ ಗ್ರಾಮಸ್ಥರಿಗೆ ಮಾಹಿತಿ ನೀಡಿದ್ದಾರೆ. ಕುಟುಂಬದವರ ಆಕ್ರಂದನ ಮುಗಿಲು ಮುಗಿಲು ಮುಟ್ಟಿತ್ತು.

### ಸಿದ್ದರಾಮಯ್ಯ ರಾಜೀನಾಮೆ ನೀಡಲಿ: ಪ್ರತಾಪ ಸಿಂಹ

• ಉದಯವಾಹಿನಿ, ಮೈಸೂರು

'ರಾಜ್ಯಪಾಲರು ಅವರ ಸಂವಿಧಾನದತ್ತ ಅಧಿಕಾರ ಚಲಾಯಿಸಿ, ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಅನುಮತಿ ನೀಡಿರುವುದು ಅತ್ಯಂತ ಸ್ವಾಗತಾರ್ಹ' ಎಂದು ಮಾಜಿ ಸಂಸದ ಪ್ರತಾಪ ಸಿಂಹ ಹೇಳಿದ್ದಾರೆ. ಈ ಬಗ್ಗೆ 'ಎಕ್ಸ್' ಮಾಡಿರುವ ಅವರು, ಸಿದ್ದರಾಮಯ್ಯ ಅವರು ಹುದ್ದೆಗೆ ರಾಜೀನಾಮೆ ನೀಡಿ, ತನಿಖೆಗೆ ಒಳಗಾಗಲಿ' ಎಂದು ಒತ್ತಾಯಿಸಿದ್ದಾರೆ

### ಸಿಎಂಗೆ ಪ್ರಾಸಿಕ್ಯೂಷನ್ ನೋಟಿಸ್

• ಉದಯವಾಹಿನಿ, ಮೈಸೂರು

ಕೇಂದ್ರ ಸಚಿವರು, ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ವಿರುದ್ಧ ಗಣಿಗೆ ಸಂಬಂಧಿಸಿದ ಹಗರಣದಲ್ಲಿ ತನಿಖೆ ನಡೆಸಲು ಲೋಕಾಯುಕ್ತ ಸಂಸ್ಥೆ ಅನುಮತಿ ಕೇಳಿ 10 ತಿಂಗಳಾದರೂ ರಾಜ್ಯಪಾಲರು ಸಂಪೂರ್ಣ ಮೌನ ವಹಿಸಿದ್ದಾರೆ' ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ.ಮಹದೇವಪ್ಪ ಆರೋಪಿಸಿದ್ದಾರೆ. ಸಾಮಾಜಿಕ ಜಾಲತಾಣ ಫೇಸ್‌ಬುಕ್‌ನಲ್ಲಿ ಪೋಸ್ಟ್ ಹಾಕಿರುವ ಅವರು, 'ಬಿಜೆಪಿ ಸರ್ಕಾರದಲ್ಲಿ ಸಚಿವೆ ಆಗಿದ್ದ ಶಶಿಕಲಾ ಜೊಲ್ಲೆ ಅವರ ವಿರುದ್ಧದ ತನಿಖೆಗೆ ಅನುಮತಿ ನೀಡಿ ಎಂದು ಕೋರಿದ್ದ ಕಡತವನ್ನೂ ರಾಜ್ಯಪಾಲರು ಮೂಲೆಗೆ ತಳ್ಳಿದ್ದಾರೆ. ಸಾಲದು ಎಂಬಂತೆ ಮುರುಗೇಶ್ ನಿರಾಣಿ ಅವರ ತನಿಖೆಗೆ ಸಂಬಂಧಿಸಿದ ಕಡತವೂ ರಾಜ್ಯಪಾಲರ ಕಚೇರಿಯಲ್ಲಿ ಧೂಳು ಹಿಡಿಯುತ್ತದೆ' ಎಂದು ಟೀಕಿಸಿದ್ದಾರೆ. ಪರಿಸ್ಥಿತಿ ಹೀಗಿರುವಾಗ, ನ್ಯಾಯಾಲಯದಿಂದಲೇ ಛೀಮಾರಿ ಹಾಕಿಸಿಕೊಂಡ ವ್ಯಕ್ತಿಯೊಬ್ಬ ನೀಡಿರುವ ದೂರನ್ನು ಆಧರಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ರಾತ್ರೋರಾತ್ರಿ ನೋಟಿಸ್ ಜಾರಿಗೊಳಿಸಿ ಈಗ ತನಿಖೆಗೆ ಅನುಮತಿ ನೀಡಿರುವ ರಾಜ್ಯಪಾಲರು, ತಾರತಮ್ಯದಿಂದ ಮತ್ತು ಪೂರ್ವಾಗ್ರಹ ಪೀಡಿತರಾಗಿ ಬಿಜೆಪಿಯ ಏಜೆಂಟರಂತೆ ವರ್ತಿಸುತ್ತಿದ್ದಾರೆ. ರಾಜ್ಯಪಾಲರಾಗಿ ಒಂದು ಕ್ಷಣವೂ ಮುಂದುವರೆಯುವ ನೈತಿಕತೆ ಅವರಿಗಿಲ್ಲ. ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ, ರಾಜಕೀಯ ಪಕ್ಷಗಳ ಹಿತಕ್ಕೆ ಪೂರಕವಾಗಿ ಕೆಲಸ ಮಾಡುತ್ತಿರುವ ಅವರನ್ನು ರಾಷ್ಟ್ರಪತಿಗಳು ಕೂಡಲೇ ವಜಾಗೊಳಿಸಬೇಕು' ಎಂದು ಒತ್ತಾಯಿಸಿದ್ದಾರೆ.

### ಬೈಕ್ ಡಿಕ್ಕಿ, ವಿದ್ಯಾರ್ಥಿ ಸಾವು


• ಉದಯವಾಹಿನಿ, ಗುಬ್ಬಿ

ಶಾಲಾ ವಾಹನ ಹಾಗೂ ದ್ವಿಚಕ್ರ ವಾಹನದ ನಡುವೆ ಅಪಘಾತ ಸಂಭವಿಸಿ ವಿದ್ಯಾರ್ಥಿಯೊಬ್ಬ ಸ್ಥಳದಲ್ಲಿಯೇ ಮೃತಪಟ್ಟಿದ್ದಾನೆ.ಶನಿವಾರ ಬೆಳಗ್ಗೆ ಪಟ್ಟಣದ ವಿನಾಯಕನಗರ 3ನೇ ಅಡ್ಡರಸ್ತೆಯಲ್ಲಿ ವಿದ್ಯಾರ್ಥಿಗಳನ್ನು ಕೊಂಡೊಯ್ಯುತ್ತಿದ್ದ ಶುಭೋದಯ ಆಂಗ್ಲಶಾಲೆಯ ಬಸ್ಸಿಗೆ, ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದ ವಿದ್ಯಾರ್ಥಿ ತೇಜಸ್ (14) ಆಕಸ್ಮಿಕವಾಗಿ ಬಿದ್ದು ಬಸ್ಸಿನ ಹಿಂಬದಿ ಚಕ್ರಕ್ಕೆ ಸಿಲುಕಿ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಮೃತ ತೇಜಸ್ ಕೂಡ ಶುಭೋದಯ ಆಂಗ್ಲಶಾಲೆಯಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ. ಅಪಘಾತಕ್ಕೆ ಒಳಗಾದ ವಿದ್ಯಾರ್ಥಿ ತಮ್ಮದೇ ಶಾಲೆಯ ಸಹಪಾಠಿ ಎಂದು ತಿಳಿದು ಬಸ್ಸಿನಲ್ಲಿದ್ದ ವಿಧ್ಯಾರ್ಥಿಗಳು ದುಃಖಿತರಾದರು. ನಂತರ ವಿದ್ಯಾರ್ಥಿಗಳನ್ನು ಮತ್ತೊಂದು ಬಸ್ಸಿನಲ್ಲಿ ಶಾಲೆಗೆ ಕರೆದೊಯ್ಯಲಾಯಿತು. ಅಪಘಾತದ ಬಗ್ಗೆ ತಿಳಿದ ಸಾರ್ವಜನಿಕರು ಅಪಾರಸಂಖ್ಯೆಯಲ್ಲಿ ಸೇರಿದ್ದರು. ಮೃತ ತೇಜಸ್ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು.

### ವ್ಯಕ್ತಿಯ ಸರ್ವತೋಮುಖ ಏಳಿಗೆಗೆ ಕ್ರೀಡೆಯು ಮುಖ್ಯ

• ಉದಯವಾಹಿನಿ,ಶಿಡ್ಲಘಟ್ಟ

ವ್ಯಕ್ತಿಯ ಸರ್ವತೋಮುಖ ಏಳಿಗೆಗೆ ಕ್ರೀಡೆಯು ಮುಖ್ಯವಾಗುತ್ತದೆ, ದೇಹವನ್ನು ಸದೃಡವಾಗಿ ಕಾಪಾಡಿಕೊಳ್ಳಲು ಕ್ರೀಡೆ ಅಗತ್ಯ. ಮುಂದಿನ ದಿನಗಳಲ್ಲಿ ತಾಲ್ಲೂಕಿನಲ್ಲಿ ಒಂದಕ್ಕಿಂತ ಹೆಚ್ಚಿನ ಕ್ರೀಡೋತ್ಸವಗಳು ನಡೆಯುವಂತಾಗಲಿ ಎಂದು ಶಿಕ್ಷಕ ಬಿ.ಎಂ ರಾಧಾಕೃಷ್ಣ ಅಭಿಪ್ರಾಯ ಪಟ್ಟರು. ತಾಲ್ಲೂಕಿನ ಜಯಂತಿಗ್ರಾಮದಲ್ಲಿ ನಡೆದ ಜಿಲ್ಲಾ ಪಂಚಾಯತ್ ಚಿಕ್ಕಬಳ್ಳಾಪುರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಚಿಕ್ಕಬಳ್ಳಾಪುರ ಹಾಗೂ ಭಗತ್ ಸಿಂಗ್ ಅಥ್ಲೆಟಿಕ್ ಅಸೋಸಿಯೇಷನ್, ಜಯಂತಿಗ್ರಾಮ ಹಾಗೂ ಕರ್ನಾಟಕ ರಾಜ್ಯ ಯುವ ಸಂಘ ಸಂಸ್ಥೆಗಳ ಒಕ್ಕೂಟದ ವತಿಯಿಂದ ಆಯೋಜಿಸಿದ್ದ 2024-25 ನೇಸಾಲಿನ ಗ್ರಾಮೀಣ ಕ್ರೀಡೋತ್ಸವದಲ್ಲಿ ಮಾತನಾಡಿದರು. ಗ್ರಾಮೀಣ ಕ್ರೀಡೋತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸಿ ಅಧಿಕ ಬಹುಮಾನಗಳನ್ನು ಗೆಲ್ಲುವ ಮೂಲಕ ಮೇಲುಗೈ ಸಾಧಿಸಿದ್ದಾರೆ ಎಂದರು. ವಿಜೇತ ತಂಡಗಳಿಗೆ ನಗದು ಬಹುಮಾನ ವಿತರಿ ಮಾತನಾಡಿದ ದೈಹಿಕ ಶಿಕ್ಷಕಿ ಸಿ.ಕೆ ಮಂಜುಳಾ, ಕ್ರೀಡೆ ವ್ಯಕ್ತಿಯನ್ನು ಮಾನಸಿಕವಾಗಿ ಹಾಗೂ ದೈಹಿಕವಾಗಿ ಆರೋಗ್ಯವಾಗಿಡುತ್ತದೆ. ಕ್ರೀಡೆಗೆ ವಯೋಮಾನದ ಅಂತರವಿಲ್ಲ. ಪ್ರತಿಯೊಬ್ಬರೂ ಯಾವುದಾದರೂ ಒಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು. ಈ ಸಂದರ್ಭದಲ್ಲಿ ಆಯೋಜಕರಾದ ರಾಷ್ಟ್ರೀಯ ಕ್ರೀಡಾಪಟು ಜಯಂತಿಗ್ರಾಮ ನಾರಾಯಣಸ್ವಾಮಿ, ಯುವ ಮುಖಂಡರಾದ ರವೀಂದ್ರ, ಗಂಗಾಧರ, ಶಿಕ್ಷಕರಾದ ಗಾಯಿತ್ರಿ, ಮೆಹಬೂಬ ಪಾಷ, ಇನ್ನಿತರರು ಉಪಸ್ಥಿತರಿದ್ದರು.




ಉದಯವಾಹಿನಿ ಚಿತ್ರ

---

## ಅಭಿಮಾನದ ಅಭಿನಂದನಾ ಸಮಾರಂಭಕ್ಕೆ ಶಿಡ್ಲಘಟ್ಟದಿಂದ ಹೊರಟ ನೌಕರರು

• ಉದಯವಾಹಿನಿ,ಶಿಡ್ಲಘಟ್ಟ

ರಾಜ್ಯ ಸರ್ಕಾರಿ ನೌಕರರಿಗೆ ಸರ್ಕಾರ 7ನೇ ವೇತನ ಆಯೋಗ ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರನ್ನು ಗೌರವಿಸಲು ಬೆಂಗಳೂರಿನಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಅಭಿಮಾನದ ಅಭಿನಂದನಾ ಸಮಾರಂಭವನ್ನು ಹಮ್ಮಿಕೊಂಡಿದ್ದು, ಈ ಕಾರ್ಯಕ್ರಮಕ್ಕೆ ಶಿಡ್ಲಘಟ್ಟ ತಾಲ್ಲೂಕಿನಿಂದ ಸರ್ಕಾರಿ ನೌಕರರು ಬಸ್‌ಗಳ ಮೂಲಕ ಬೆಂಗಳೂರಿಗೆ ತೆರಳಿದರು.



ಉದಯವಾಹಿನಿ ಚಿತ್ರ

**7ನೇ ವೇತನ ಆಯೋಗ ಜಾರಿ**

ಈ ಸಂದರ್ಭದಲ್ಲಿ ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸುಬ್ಬಾರೆಡ್ಡಿ ಮಾತನಾಡಿ, ಸರ್ಕಾರಿ ನೌಕರರ ಸಂಘ ಮತ್ತು ಎಲ್ಲಾ ವೃಂದ ಸಂಘಗಳ ಒತ್ತಾಯದ ಮೇರೆಗೆ ರಾಜ್ಯ ಸರ್ಕಾರ 7 ನೇ ವೇತನ ಆಯೋಗ 01 ಆಗಸ್ಟ್ 2024 ರಿಂದ ಅನ್ವಯಿಸುವಂತೆ ಮಂಜೂರಾತಿಯಾಗಿ ಮಾಡಿರುವುದರಿಂದ ಅದರ ಭಾಗವಾಗಿ ಈ ದಿನ ಬೆಂಗಳೂರಿನಲ್ಲಿ ಮುಖ್ಯಮಂತ್ರಿಗಳಿಗೂ ಮತ್ತು ಉಪಮುಖ್ಯಮಂತ್ರಿಗಳಿಗೂ ನಮ್ಮ ಅಭಿಮಾನದ ಅಭಿನಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಈ ಸಮಾರಂಭಕ್ಕೆ ನಮ್ಮ ತಾಲ್ಲೂಕಿನಿಂದ ಎಲ್ಲಾ ವೃಂದ ಸಂಘಗಳ ಅಧ್ಯಕ್ಷರು ,ಪದಾಧಿಕಾರಿಗಳ ಸಹಕಾರದೊಂದಿಗೆ ಸುಮಾರು 300 ಕ್ಕೂ ಜನ ಬಸ್‌ಗಳ ಮೂಲಕ ಬೆಂಗಳೂರಿಗೆ ತೆರಳಿ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕ.ರಾ.ನೌ.ಸಂಘದ ತಾಲ್ಲೂಕು ಕಾರ್ಯದರ್ಶಿ ಅಕ್ಕಲರೆಡ್ಡಿ,ರಾಜ್ಯ ಪರಿಷತ್ತಿನ ಸದಸ್ಯ ಟಿ.ಟಿ ನರಸಿಂಹಪ್ಪ,ಮತ್ತು ಪದಾಧಿಕಾರಿಗಳು, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಬಿ ಆರ್ ನಾರಾಯಣಸ್ವಾಮಿ,ಗೌರವಾಧ್ಯಕ್ಷ ಎ.ವಿ ವೆಂಕಟನರಸಪ್ಪ, ಕಾರ್ಯದರ್ಶಿ ಸೀನಪ್ಪ, ಖಜಾಂಚಿ ಸುಂದರಾಚಾರಿ ಮತ್ತು ಪದಾಧಿಕಾರಿಗಳು ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ಎಲ್ ವೆಂಕಟರೆಡ್ಡಿ, ಕಾರ್ಯದರ್ಶಿ ರುದ್ರೇಶಮೂರ್ತಿ, ಎನ್ ಪಿ ಎಸ್ ಅಧ್ಯಕ್ಷ ಗಜೇಂದ್ರ ಎಲ್ಲಾ ವೃಂದ ಸಂಘಗಳ ಅಧ್ಯಕ್ಷರು,ಪದಾಧಿಕಾರಿಗಳು ಭಾಗವಹಿಸಿದ್ದರು.

## ಪಠ್ಯಕ್ಕೂ ಸೈ, ಸಹಪಠ್ಯಕ್ಕೂ ಜೈ

• ಉದಯವಾಹಿನಿ, ನಾಪೋಕ್ಲು

ಹೊದ್ದೂರು ಗ್ರಾಮ ಪಂ. ವ್ಯಾಪ್ತಿಯ ವಾಟೆಕಾಡು ಪೈಸಾರಿ ನಿವಾಸಿಗಳ ಸ್ಥಳ. ಇಲ್ಲಿನ ಕೂಲಿ ಕಾರ್ಮಿಕರ ಮಕ್ಕಳು ವ್ಯಾಸಂಗ ಮಾಡುತ್ತಿರುವುದು ಸಮೀಪದ ವಾಟೆಕಾಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ. ಈ ಶೈಕ್ಷಣಿಕ ವರ್ಷದಲ್ಲಿ 85 ಮಕ್ಕಳು ಇಲ್ಲಿಗೆ ಸೇರಿದ್ದಾರೆ. ಈ ಸರ್ಕಾರಿ ಶಾಲೆ ಮಡಿಕೇರಿಯಿಂದ 20 ಕಿಲೋಮೀಟರ್ ದೂರದಲ್ಲಿದೆ. ಇವರಿಗೆ ಬೋಧಿಸಲು 7 ಮಂದಿ ಶಿಕ್ಷಕರಿದ್ದಾರೆ. ಶಾಲೆಯ ಹೊರನೋಟ ಎಲ್ಲರನ್ನು ಆಕರ್ಷಿಸುತ್ತದೆ. 4 ಎಕರೆ ವಿಸ್ತೀರ್ಣದ ಶಾಲಾ ಕಟ್ಟಡದ ಮಾದರಿ ರೈಲನ್ನು ಹೋಲುತ್ತದೆ. ಹಡಗು, ವಿಮಾನದ ಚಿತ್ರಗಳು ಗೋಡೆಯಲ್ಲಿ ರಾರಾಜಿಸುತ್ತಿವೆ. ಪಠ್ಯ ಚಟುವಟಿಕೆಗಳ ಜೊತೆಯಲ್ಲಿ ಸಹಪಠ್ಯ ಚಟುವಟಿಕೆಗಳಲ್ಲಿ ಇಲ್ಲಿನ ವಿದ್ಯಾರ್ಥಿಗಳು ಸದಾ ಮುಂದು. ಕ್ರೀಡೆಯಲ್ಲಿ, ಪರಿಸರ ಚಟುವಟಿಕೆಗಳಲ್ಲಿ, ಕಂಪ್ಯೂಟರ್ ಕಲಿಕೆಯಲ್ಲಿ ಹಾಗೂ ಇನ್ನಿತರ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಕ್ಕಳು ತಾ ಮುಂದು ತಾ ಮುಂದು ಎಂದು ಭಾಗವಹಿಸುತ್ತಿದ್ದು, ಹಲವು ಪ್ರಶಸ್ತಿಗಳನ್ನು ಮಡಿಲಿಗೆ ಹಾಕಿಕೊಂಡಿದ್ದಾರೆ. ಸ್ಥಳೀಯ ಗ್ರಾಮ ಪಂಚಾಯಿತಿಯ ಸಂಪೂರ್ಣ ಸಹಕಾರದೊಂದಿಗೆ ಈ ಶಾಲೆಯ ಯಶೋಗಾಥೆ ಇದೆ.

2007ರಲ್ಲಿ ಶಾಲೆ ಆರಂಭವಾದಾಗ ಕೇವಲ 20 ವಿದ್ಯಾರ್ಥಿಗಳಿದ್ದರು. ಇಬ್ಬರು ಶಿಕ್ಷಕರು ಈಗ 1ರಿಂದ 7ರವರೆಗೆ 85 ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ. ಚಟುವಟಿಕೆ ಮೂಲಕ ಶಿಕ್ಷಣ ಪಡೆಯುವತ್ತ ಇಲ್ಲಿ ಗಮನ ಹರಿಸಲಾಗುತ್ತಿದೆ. ಅಂತೆಯೇ ಪರಿಸರ ಸಂಬಂಧಿ ಚಟುವಟಿಕೆಗಳಿಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ವಿದ್ಯಾರ್ಥಿಗಳು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಲಿಕೆಯಲ್ಲಿ ಪ್ರಗತಿ ಸಾಧಿಸಿದ್ದಾರೆ. ಪ್ರತಿಭಾ ಕಾರಂಜಿ ಸ್ಪರ್ಧೆಗಳಲ್ಲಿ ಹುಮ್ಮಸ್ಸಿನಿಂದ ಪಾಲ್ಗೊಳ್ಳುತ್ತಾರೆ. ಗ್ರಾಮ ಪಂಚಾಯಿತಿಯ ಡಿಜಿಟಲ್ ಗ್ರಂಥಾಲಯ ಹಾಗೂ ಕಂಪ್ಯೂಟರ್ ಸದ್ಬಳಕೆ ಮಾಡಿಕೊಳ್ಳುತ್ತಿದ್ದಾರೆ.

## 6 ವರ್ಷವಾದರೂ ಸಿದ್ಧವಾಗದ ಶಾಲೆ

• ಉದಯವಾಹಿನಿ, ನುಗ್ಗೇಹಳ್ಳಿ

ಹೋಬಳಿಯ ಸೋಮವಾರ ಸಂತೆ ರಾಷ್ಟ್ರೀಯ ಹೆದ್ದಾರಿ ಬಳಿ ನಿರ್ಮಾಣ ಹಂತದಲ್ಲಿರುವ ಮೊರಾರ್ಜಿ ವಸತಿ ಶಾಲೆ ಕಟ್ಟಡ ಕಾಮಗಾರಿ ಪೂರ್ಣಗೊಳ್ಳದೇ ಅನೈತಿಕ ಚಟುವಟಿಕೆ ತಾಣವಾಗಿದೆ. ನುಗ್ಗೇಹಳ್ಳಿ ಹೋಬಳಿ ಮೊರಾರ್ಜಿ ವಸತಿ ಶಾಲೆಯ ಬಾಲಕಿಯರ ಹಾಗೂ ಬಾಲಕರ ನೂತನ ಕಟ್ಟಡ ನಿರ್ಮಾಣಕ್ಕೆ 2018ರಲ್ಲಿ ಭೂಮಿಪೂಜೆ ನೆರವೇರಿಸಲಾಗಿತ್ತು.

ಸುಮಾರು ?14 ಕೋಟಿ ಅನುದಾನ ಬಿಡುಗಡೆಯಾಗಿತ್ತು. ಆದರೆ ಗುತ್ತಿಗೆದಾರರ ಬೇಜವಾಬ್ದಾರಿಯಿಂದ 6 ವರ್ಷ ಕಳೆದರೂ ಇನ್ನೂ ಕಾಮಗಾರಿ ಪೂರ್ಣಗೊಂಡಿಲ್ಲ. ಇದರ ನಡುವೆ ಕಟ್ಟಡದಲ್ಲಿ ಅಕ್ರಮ ಚಟುವಟಿಕೆ ನಡೆಯುತ್ತಿದ್ದು, ಕಟ್ಟಡದ ಒಳಗೆ ಹಾಗೂ ಸುತ್ತ ಮದ್ಯದ ಬಾಟಲಿಗಳು, ಸಿಗರೇಟ್ ಪ್ಯಾಕ್ ಎಲ್ಲೆಂದರಲ್ಲಿ ಬಿದ್ದಿವೆ ಎಂದು ಜನರು ದೂರುತ್ತಿದ್ದಾರೆ.

**ವಸತಿ ನಿಲಯದ ಮಕ್ಕಳಿಗೆ ನಿತ್ಯ ಕಿರಿಕಿರಿ:** ನುಗ್ಗೇಹಳ್ಳಿ ಮೊರಾಜಿ ವಸತಿ ಶಾಲೆಯಲ್ಲಿ ಬಾಲಕಿಯರು ಹಾಗೂ ಬಾಲಕರು ಸೇರಿ ಸುಮಾರು 250 ಮಕ್ಕಳು ವ್ಯಾಸಂಗ ಮಾಡುತ್ತಿದ್ದಾರೆ.

ಸದ್ಯ ನೂತನ ಕಟ್ಟಡ ಉದ್ಘಾಟನೆ ಆಗದಿರುವುದರಿಂದ ಚನ್ನರಾಯಪಟ್ಟಣ ಬಳಿ ಇರುವ ಗೊರಮಾರನಹಳ್ಳಿ ಮೊರಾರ್ಜಿ ವಸತಿ ಶಾಲೆಯಲ್ಲಿ ವಸತಿ ಹಾಗೂ ಶಿಕ್ಷಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಇದರಿಂದ ನಿತ್ಯ ಮಕ್ಕಳಿಗೆ ರಾತ್ರಿ ಮಲಗಲು ಹಾಗೂ ಶೌಚಾಲಯದ ಸಮಸ್ಯೆ ಎದುರಾಗಿದೆ.





ಉದಯವಾಹಿನಿ ಚಿತ್ರ

**ಪೋಷಕರು ಒತ್ತಾಯ**

ಒಂದು ಕೊಠಡಿಯಲ್ಲಿ 10 ವಿದ್ಯಾರ್ಥಿಗಳು ಮಾತ್ರ ಮಲಗಲು ನಿಯಮವಿದೆ. ಆದರೆ 2 ವಸತಿ ಶಾಲೆಗಳ ಮಕ್ಕಳು ಒಂದೇ ಕಡೆ ಇರುವುದರಿಂದ 1 ಕೊಠಡಿಯಲ್ಲಿ 30 ರಿಂದ 35 ವಿದ್ಯಾರ್ಥಿಗಳಿಗೆ ಮಲಗಲು ಅವಕಾಶ ಕಲ್ಪಿಸಲಾಗಿದೆ. ಇದರಿಂದ ಮಕ್ಕಳ ಶೈಕ್ಷಣಿಕ ಗುಣಮಟ್ಟದ ಮೇಲೆ ಹೆಚ್ಚು ಪರಿಣಾಮ ಬೀರುತ್ತಿದೆ. ಈ ಬಗ್ಗೆ ಸ್ಥಳೀಯ ಶಾಸಕರು ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಗಮನ ಹರಿಸಬೇಕು ಎಂದು ಪೋಷಕರು ಒತ್ತಾಯಿಸುತ್ತಿದ್ದಾರೆ.

## ವಿದ್ಯಾರ್ಥಿನಿ ಕೊಲೆಗೆ ಖಂಡನೆ: ಮೋಂಬತ್ತಿ ಮೆರವಣಿಗೆ

• ಉದಯವಾಹಿನಿ, ಮಡಿಕೇರಿ

ಕೋಲ್ಕತ್ತಾದಲ್ಲಿ ಈಚೆಗೆ ನಡೆದ ವೈದ್ಯಕೀಯ ವಿದ್ಯಾರ್ಥಿನಿಯ ಕೊಲೆ ಖಂಡಿಸಿ ಹಾಗೂ ಮಹಿಳೆಯ ರಕ್ಷಣೆಗೆ ಒತ್ತಾಯಿಸಿ ಬಿಜೆಪಿ ಜಿಲ್ಲಾ ಮತ್ತು ನಗರ ಮಹಿಳಾ ಮೋರ್ಚಾ ನೇತೃತ್ವದಲ್ಲಿ ಮಹಿಳೆಯರು ಮೋಂಬತ್ತಿ ಮೆರವಣಿಗೆ ನಡೆಸಿದರು. ಇಲ್ಲಿನ ಜನರಲ್ ತಿಮ್ಮಯ್ಯ ವೃತ್ತದಲ್ಲಿ ಸೇರಿದ ಪ್ರತಿಭಟನಕಾರರು ಮೋಂಬತ್ತಿ ಬೆಳಗಿಸಿ ಮೌನ ಪ್ರತಿಭಟನೆ ನಡೆಸಿದರು.


ಬಿಜೆಪಿಯ ಹಿರಿಯ ಮುಖಂಡ ಕೆ.ಜಿ.ಬೋಪಯ್ಯ ಮಾತನಾಡಿ, 'ಪಶ್ಚಿಮ ಬಂಗಾಳದಲ್ಲಿ ನಡೆದಿರುವ ಘಟನೆ ನಿಜಕ್ಕೂ ಆತಂಕ ಮೂಡಿಸಿದೆ. ಮಹಿಳೆಯೊಬ್ಬರು ಮುಖ್ಯಮಂತ್ರಿಯಾಗಿರುವ ರಾಜ್ಯದಲ್ಲಿ ಮಹಿಳೆಯರಿಗೆ ರಕ್ಷಣೆ ಇಲ್ಲದಂತಾಗಿದೆ' ಎಂದು ಘಟನೆಯನ್ನು ಖಂಡಿಸಿದರು. ಮಹಿಳಾ ಮೋರ್ಚಾದ ಜಿಲ್ಲಾಧ್ಯಕ್ಷೆ ಅನಿತಾ ಪೂವಯ್ಯ ಮಾತನಾಡಿ, 'ಇದೊಂದು ಅತ್ಯಂತ ಕರಾಳ ಘಟನೆ. ಇತ್ತೀಚೆಗಷ್ಟೇ ಮಹಿಳೆಯರು ಪಶ್ಚಿಮ ಬಂಗಾಳದಲ್ಲಿ ರಕ್ಷಣೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದರು. ಆದರೂ, ಮತ್ತೆ ಅಂತದ್ದೇ ಘಟನೆ ನಡೆದಿದೆ. ಅಲ್ಲಿನ ಸರ್ಕಾರ ಮಹಿಳೆಯರಿಗೆ ರಕ್ಷಣೆ ಕೊಡುವಲ್ಲಿ ಸೋತಿದೆ' ಎಂದು ಕಿಡಿಕಾರಿದರು. ಬಿಜೆಪಿ ಜಿಲ್ಲಾಧ್ಯಕ್ಷ ರವಿ ಕಾಳಪ್ಪ, ನಗರಸಭೆ ಸದಸ್ಯರು ಹಾಗೂ ಬಿಜೆಪಿ ಮಹಿಳಾ ಮೋರ್ಚಾದ ಪದಾಧಿಕಾರಿಗಳು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಹೂಳು ತುಂಬಿದ ತಾಲ್ಲೂಕಿನ ಹೆಬ್ಬಾಳ್ಳ ನಾಲೆ!

• ಉದಯವಾಹಿನಿ, ಎಚ್.ಡಿ.ಕೋಟೆ

ತಡೆಗೋಡೆ ಕಾಣದಂತೆ ಬೆಳೆದು ನಿಂತಿರುವ ದೊಡ್ಡ ಗಿಡಗಳು, ಅಲ್ಲಲ್ಲಿ ರಾಶಿಬಿದ್ದ ಹೂಳು, ಕಾಂಕ್ರಿಟ್ ದುಸ್ಥಿತಿ. ಇದು ತಾಲ್ಲೂಕಿನ ಹೆಬ್ಬಾಳ್ಳ ನಾಲೆಯ ಸ್ಥಿತಿ. ನಾಲೆ ಸ್ವಚ್ಛಗೊಳಿಸದ ಕಾರಣ ಕೊನೆ ಭಾಗದ ರೈತರಿಗೂ ನೀರು ತಲುಪುವುದು ಮರಿಚೀಕೆಯಾಗಿದೆ.

ನಾಲೆಗಳಲ್ಲಿ ಗಿಡಗಂಟೆಗಳು ಬೆಳೆದು ನಿಂತಿವೆ. ಹೂಳು ತುಂಬಿದೆ. ನೀರು ಸರಾಗವಾಗಿ ಹರಿಯುತ್ತಿಲ್ಲ. ಅಲ್ಲಲ್ಲಿಯೇ ನೀರು ನಿಲ್ಲುವಂತಾಗಿದ್ದು, ಜಲಾಶಯದಿಂದ ಹರಿಸಿದ ನೀರು ವ್ಯರ್ಥವಾಗಲಿದೆ. ಅಲ್ಲದೆ, ಹೈರಿಗೆ ಭಾಗದ ರೈತರಿಗೆ ಯಥೇಚ್ಛವಾಗಿ ನೀರು ಹರಿದು ಫಸಲು ಹಾಳಾಗುವ ಭೀತಿಯೂ ಎದುರಾಗಿದೆ. ತಾಲ್ಲೂಕಿನ ಹೆಬ್ಬಾಳ್ಳ ಜಲಾಶಯ ಅತಿ ದೊಡ್ಡ ಕೆರೆಗಳಲ್ಲಿ ಒಂದಾಗಿದೆ. ಈ ಕೆರೆಯ ನೀರಿನಿಂದ ಸುಮಾರು 3.05 ಸಾವಿರ ಎಕರೆ ಪ್ರದೇಶದ ರೈತರು ಭತ್ತದ ಬೆಳೆ ಬೆಳೆಯುತ್ತಾರೆ. 28 ಕಿ.ಮೀ ಹರಿದು ರೈತರ ಜೀವನಾಡಿಯಾಗಿ ಪರಿಣಮಿಸಿದೆ. ಕಾಲುವೆಗಳಲ್ಲಿ ನೀರು ಸರಾಗವಾಗಿ ಹರಿದು ಬಂದರೆ ಜಮೀನಿಗೆ ಹರಿಯುತ್ತದೆ. ಬೇಸಾಯ ಮಾಡಲು ಅನುಕೂಲವಾಗುತ್ತದೆ. ಉಪ ಕಾಲುವೆಗಳು ಮುಚ್ಚಿ ಹೋಗಿದೆ. ಇವುಗಳನ್ನು ದುರಸ್ತಿಪಡಿಸಿ ಕೊಡುವಂತೆ ಹಲವು ಬಾರಿ ಮನವಿ ಮಾಡಿದರೂ ಯಾವುದೇ ಪ್ರಯೋಜನವಾಗಿಲ್ಲ. ಇದರಿಂದ ಜಲಾಶಯದ ನೀರು ನಂಬಿರುವ ರೈತರಿಗೆ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ' ಎಂದು ಹೈರಿಗೆ ರೈತ ಪ್ರಕಾಶ ಅಳಲು ತೋಡಿಕೊಂಡರು. ಕಾಲುವೆಯಲ್ಲಿ ಹೂಳು ತೆಗೆಯದಿರುವುದ ರಿಂದ ಕೊನೆಯ ಭಾಗದ ರೈತರಿಗೆ ನೀರು ಬರುವುದಿಲ್ಲ ಎಂಬ ಆತಂಕ ಒಂದೆಡೆಯಾದರೆ, ನೀರು ಹರಿದು ಫಸಲು ಹಾಳಾಗುವ ಭೀತಿ ಇನ್ನೊಂದೆಡೆ. ಇದಕ್ಕೆ ಸೂಕ್ತ ಕ್ರಮ ಕೈಗೊಳ್ಳದಿದ್ದರೆ ರೈತರೆಲ್ಲರೂ ಸೇರಿ ಹೋರಾಟ ಮಾಡುತ್ತೇವೆ' ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

> ಜೆಸಿಬಿ ಮೂಲಕ ಅಲ್ಲಲ್ಲಿ ಅಗೆದು ಬೇಕಾಬಿಟ್ಟಿ ಕೆಲಸ ಮಾಡಿ ಬಿಲ್ ಮಾಡಿಕೊಳ್ಳುತ್ತಾರೆ. ಅಧಿಕಾರಿಗಳು ನಿಂತು ಜವಾಬ್ದಾರಿಯಿಂದ ಕೆಲಸ ಮಾಡಿಸಬೇಕು' ಎಂದು ತೋಟದ ಬೆಳೆಗಾರರ ಸಂಘದ ಮಾದಾಪುರ ನಂದೀಶ ಹೇಳಿದರು.

## ಅರಣ್ಯ ಇಲಾಖೆಯಲ್ಲಿ ಅಧಿಕಾರಿ ಸಿಬ್ಬಂದಿ ಕೊರತೆ

• ಉದಯವಾಹಿನಿ, ಹನೂರು

ಒಟ್ಟು ಭೂಭಾಗದಲ್ಲಿ ಶೇ 70ರಷ್ಟು ಅರಣ್ಯ ಪ್ರದೇಶವನ್ನೇ ಹೊಂದಿದೆ ಹನೂರು ತಾಲ್ಲೂಕು. ಅತಿ ಹೆಚ್ಚು ಅರಣ್ಯ ಪ್ರದೇಶ ಹೊಂದಿದ್ದರೂ ತಾಲ್ಲೂಕಿನ ವನ್ಯಧಾಮಗಳಲ್ಲಿ ಅರಣ್ಯ ಸಿಬ್ಬಂದಿ ಹಾಗೂ ಅದಿಕಾರಿಗಳ ಕೊರತೆ ಹೆಚ್ಚಾಗಿದೆ. ಪರಿಣಾಮ ಅರಣ್ಯ ಸಂಪತ್ತು ಹಾಗೂ ವನ್ಯಜೀವಿಗಳ ಕಳ್ಳಬೇಟೆ, ಮಾನವ ಹಾಗೂ ಪ್ರಾಣಿ ಸಂಘರ್ಷ ತಡೆಯಲು ಲಭ್ಯವಿರುವ ಸಿಬ್ಬಂದಿ ಪ್ರಯಾಸ ಪಡುವಂತಾಗಿದೆ.

ನಿತ್ಯವೂ ಹೆಚ್ಚುವರಿ ಜವಾಬ್ದಾರಿಗಳನ್ನು ನಿಭಾಯಿಸಿ ಅರಣ್ಯ ಇಲಾಖೆ ಸಿಬ್ಬಂದಿ ಹೈರಾಣಾಗುತ್ತಿದ್ದಾರೆ.

ಹನೂರು ತಾಲ್ಲೂಕು ಮಲೆ ಮಹದೇಶ್ವರ ಹಾಗೂ ಕಾವೇರಿ ವನ್ಯಧಾಮಗಳನ್ನು ಒಡಲೊಳಗೆ ಇರಿಸಿಕೊಂಡಿದ್ದು ಅಪಾರ ವನ್ಯ ಸಂಪತ್ತು ಹಾಗೂ ಅಪರೂಪದ ವನ್ಯಜೀವಿಗಳಿಗೆ ಆಶ್ರಯ ತಾಣವಾಗಿದೆ. ಮುಖ್ಯವಾಗಿ ತಾಲ್ಲೂಕಿನ ವನ್ಯಧಾಮಗಳು ನೆರೆಯ ತಮಿಳುನಾಡು ರಾಜ್ಯದೊಂದಿಗೆ ಗಡಿ ಹಂಚಿಕೊಂಡಿದ್ದು ಸಾರಿಗೆ ಸಂಪರ್ಕವೂ ಇರುವುದರಿಂದ ರಾಜ್ಯದ ವನ್ಯಸಂಪತ್ತು ಹಾಗೂ ವನ್ಯಜೀವಿಗಳ ರಕ್ಷಣೆ ಬಹುದೊಡ್ಡ ಹೊಣೆಗಾರಿಕೆಯಾಗಿದ್ದು ಇದನ್ನು ನಿಭಾಯಿಸಲು ಇಲಾಖೆಗೆ ಅಗತ್ಯ ಪ್ರಮಾಣದ ಸಿಬ್ಬಂದಿ ಇಲ್ಲದಂತಾಗಿದೆ. ಇದರಿಂದ ಆತಂಕವೂ ಶುರುವಾಗಿದೆ. ಮಲೆಮಹದೇಶ್ವರ ವನ್ಯಧಾಮವು ಕೊಳ್ಳೇಗಾಲ, ಹನೂರು ಹಾಗೂ ಮಹದೇಶ್ವರ ಬೆಟ್ಟ ಸೇರಿದಂತೆ ಮೂರು ಉಪ ವಿಭಾಗಗಳನ್ನು ಹೊಂದಿದೆ. ಕೊಳ್ಳೇಗಾಲ ಬಿಟ್ಟರೆ ಉಳಿದ ಎರಡು ಕಡೆಗಳಲ್ಲಿ ಎಸಿಎಫ್ ದರ್ಜೆಯ ಹುದ್ದೆಗಳು ಖಾಲಿ ಇವೆ. ಏಳು ವಲಯಗಳ ಪೈಕಿ ಪಾಲಾರ್, ಮಹದೇಶ್ವರ ಬೆಟ್ಟ, ಹೂಗ್ಯಂ ಹಾಗೂ ಪಿ.ಜಿ ಪಾಳ್ಯ ವಲಯಗಳಲ್ಲಿ ಆರ್‌ಎಫ್‌ಒ ಹುದ್ದೆಗಳು ಖಾಲಿ ಇವೆ.



ಉದಯವಾಹಿನಿ ಚಿತ್ರ

**ಕಾವೇರಿ ವನ್ಯಧಾಮದ ಹನೂರು ಉಪ ವಿಭಾಗದಲ್ಲಿ ಎಸಿಎಫ್ ಹಾಗೂ ಗೋಪಿನಾಥಂ ವಲಯದಲ್ಲಿ ಆರ್‌ಎಫ್‌ಒ ಹುದ್ದೆಗಳು ಖಾಲಿ ಇದೆ. ಮುಂದೆ ಇನ್ನೂ ಕೆಲವು ವಲಯಗಳಲ್ಲಿ ಪ್ರಮುಖ ಹುದ್ದೆಗಳು ತೆರವಾಗುವ ಸಂಭವಗಳು ಹೆಚ್ಚಾಗಿವೆ. ಇದರ ಜತೆ ಡಿಆರ್‌ಎಫ್‌ಒ ಹಾಗೂ ಗಾರ್ಡ್‌ಗಳ ಕೊರತೆಯೂ ಅತಿಯಾಗಿ ಕಾಡುತ್ತಿದೆ.**

# ಸರ್ಕಾರಿ ಶಾಲೆ: ಶಿಕ್ಷಣದಲ್ಲಿ ಮುಂದೆ, ಸೌಲಭ್ಯದಲ್ಲಿ ಹಿಂದೆ


## ಶಾಲೆಗೆ ತಡೆಗೋಡೆ ಇಲ್ಲದೆ, ಪೀಠೋಪಕರಣ, ಡಿಜಿಟಲ್ ಉಪಕರಣ ಇಲ್ಲ ವಿದ್ಯಾರ್ಥಿಗಳಿಗೆ ಕಲಿಕೆ ತೊಂದರೆ ಆಗುತ್ತಿದೆ

• ಉದಯವಾಹಿನಿ, ಚಿಂತಾಮಣಿ

ನಗರದ ಹೊರವಲಯದಲ್ಲಿರುವ ಗೋಪಸಂದ್ರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು ಶೈಕ್ಷಣಿಕವಾಗಿ ಮುಂಚೂಣಿಯಲ್ಲಿದ್ದರೂ ಮೂಲ ಸೌಕರ್ಯ ಕಲ್ಪಿಸುವಲ್ಲಿ ಹಿಂದೆ ಬಿದ್ದಿದೆ. ಶಾಲೆಗೆ ತಡೆಗೋಡೆ ಇಲ್ಲದೆ, ಪೀಠೋಪಕರಣ ಮತ್ತು ಡಿಜಿಟಲ್ ಉಪಕರಣ ಇಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಕಲಿಕೆ ತೊಂದರೆ ಆಗುತ್ತಿದೆ. ಶಾಲೆಯ ಮದ್ಯದಲ್ಲಿ ಚರಂಡಿ ಹರಿಯುತ್ತಿದ್ದು, ಗಬ್ಬು ನಾರುತ್ತಿರುತಿದೆ. ದುರ್ನಾತಯೊಂದಿಗೆ ಪಾಠ ಕೇಳುತ್ತಿದ್ದಾರೆ ವಿದ್ಯಾರ್ಥಿಗಳು.

ಇಂತಹ ಹಲವು ಸಮಸ್ಯೆಗಳ ನಡುವೆಯೂ ಶಾಲೆಯಲ್ಲಿ ಉತ್ತಮ ದಾಖಲಾತಿ ಇದೆ. ಮಕ್ಕಳು ಉತ್ಸವದಿಂದ ಕಲಿಯುತ್ತಿದ್ದಾರೆ. 1ರಿಂದ 7ನೇ ತರಗತಿಯವರೆಗೆ 65 ಮಕ್ಕಳು ಓದುತ್ತಿದ್ದಾರೆ. ನಾಲ್ವರು ಶಿಕ್ಷಕರ ಬದ್ಧತೆಯಿಂದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡುತ್ತಿದ್ದಾರೆ. ಶಿಕ್ಷಕರು ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ. ಪ್ರತಿ ಶುಕ್ರವಾರ ಪ್ರಬಂಧ, ರಸಪ್ರಶ್ನೆ, ಭಾಷಣ, ಚರ್ಚಾ ಸ್ಪರ್ಧೆ ಸೇರಿದಂತೆ ಹಲವು ಶೈಕ್ಷಣಿಕ ಚಟುವಟಿಕೆ ನಡೆಸಲಾಗುತ್ತದೆ. ತಿಂಗಳಿಗೊಮ್ಮೆ ಯೋಗ, ಧ್ಯಾನ ತರಬೇತಿ ನೀಡಲಾಗುತ್ತದೆ.ತಡೆಗೋಡೆ ಇಲ್ಲದಿರುವುದರಿಂದ ಶಾಲಾ ಅವಧಿ ಬಳಿಕ ಶಾಲಾ ಆವರಣ ಪ್ರವೇಶಿಸುವ ಜನ ಗಲಿಜು ಮಾಡುತ್ತಾರೆ. ರಾತ್ರಿ ಸಮಯದಲ್ಲಿ ಕುಡುಕರು, ಅನೈತಿಕ ಚಟುವಟಿಕೆಗಳ ತಾಣವಾಗುತ್ತದೆ. ದನ,ಕರು ನುಗ್ಗಿ ಗಿಡಗಳನ್ನು ನಾಶಪಡಿಸುತ್ತವೆ. ಪ್ರತಿ ದಿನ ಬೆಳಿಗ್ಗೆ ಬಂದ ಕೂಡಲೇ ಸ್ವಚ್ಛಗೊಳಿಸುವುದೇ ದೊಡ್ಡ ಕೆಲಸವಾಗುತ್ತದೆ ಎಂದು ಶಿಕ್ಷಕರು ಅಸಮದಾನ ವ್ಯಕ್ತಪಡಿಸುತ್ತಾರೆ.

ತಡೆಗೋಡೆ ನಿರ್ಮಿಸಿಕೊಡಿ ಎಂದು ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ. ಶಾಲೆಯ ಹಳೆಯ ವಿದ್ಯಾರ್ಥಿ ಅನಿಲ್ ಕುಮಾರ್ ಶಾಲೆಗೆ ಟಿ.ವಿ ಯನ್ನು ಕೊಡುಗೆಯಾಗಿ ನೀಡಿದ್ದಾರೆ. ತಾಂತ್ರಿಕ ಯುಗಕ್ಕೆ ತಕ್ಕಂತೆ ಡಿಜಿಟಲ್ ತರಗತಿಗಳ ಮೂಲಕ ಪರಿಣಾಮಕಾರಿಯಾಗಿ ಬೋಧನೆ ಮಾಡಲು ಪ್ರೊಜೆಕ್ಟರ್ ಮತ್ತಿತರ ಡಿಜಿಟಲ್ ಉಪಕರಣ ಅಗತ್ಯವಿದೆ. ಶಾಲೆಯಲ್ಲಿ ಕಲಿತು ಹೊರಹೋಗಿರುವ ಹಳೆಯ ವಿದ್ಯಾರ್ಥಿಗಳು ಹಾಗೂ ದಾನಿಗಳು ಮುಂದೆ ಬಂದು ಸಹಾಯ ಮಾಡಿದರೆ ಅನುಕೂಲವಾಗುತ್ತದೆ ಎಂದು ಎನ್ನುತ್ತಾರೆ ಶಿಕ್ಷಕರು. ಬೆಂಗಳೂರಿನಲ್ಲಿ ನೆಲೆಸಿರುವ ಗ್ರಾಮದ ನಿವಾಸಿ ಹೈಕೋರ್ಟ್ ವಕೀಲ ಶ್ರೀರಾಮರೆಡ್ಡಿ ಪ್ರತಿವರ್ಷ ಮಕ್ಕಳಿಗೆ ಲೇಖನ ಸಾಮಗ್ರಿ ಮತ್ತು ಸಮವಸ್ತ್ರ ನೀಡುತ್ತಾರೆ. ವರ್ಷಪೂರ್ತಿ ಆಗುವಷ್ಟು ಲೇಖನ ಸಾಮಗ್ರಿವನ್ನು ಪ್ರತಿವರ್ಷ ಶಾಲೆಯ ಆರಂಭದಲ್ಲೇ ವಿತರಿಸುತ್ತಾರೆ. ಇದೇ ರೀತಿಯಲ್ಲಿ ದಾನಿಗಳ ಸಹಾಯ ಹಸ್ತ ಚಾಚಿದರೆ ಅನುಕೂಲ ಆಗುತ್ತದೆ ಎಂದು ಶಿಕ್ಷಕರು ಕೋರಿದ್ದಾರೆ.



ಉದಯವಾಹಿನಿ ಚಿತ್ರ

> ತರಗತಿಗೆ ನುಗ್ಗುವ ಹಾವು ಶಾಲೆಯ ಮದ್ಯದಲ್ಲಿ ಇರುವ ಚರಂಡಿಯಲ್ಲಿ ನೀರು ಸರಾಗವಾಗಿ ಹರಿಯದೆ ಕೊಚ್ಚೆಯಾಗಿ ದುರ್ವಾಸನೆ ಬೀರುತ್ತಿದೆ. ಚರಂಡಿಯಲ್ಲಿ ಗಿಡಗೆಂಟಿ ಬೆಳೆದಿರುವುದರಿಂದ ಹಾವುಗಳ ಕಾಟ ವಿಪರೀತವಾಗಿದೆ. 2-3 ಬಾರಿ ತರಗತಿಯ ಕೊಠಡಿಗಳಿಗೆ ಹಾವುಗಳು ನುಗ್ಗಿದ್ದವು. ಮಕ್ಕಳ ಸುರಕ್ಷತೆ ದೃಷ್ಟಿಯಿಂದ ಚರಂಡಿಯನ್ನು ಬೇರೆ ಕಡೆ ತಿರುಗಿಸಬೇಕು. ಸದ್ಯಕ್ಕೆ ತುರ್ತಾಗಿ ಚರಂಡಿ ನೀರು ನಿಲ್ಲದಂತೆ ಸರಾಗವಾಗಿ ಹರಿದುಹೋಗುವಂತೆ ಕ್ರಮಕೈಗೊಳ್ಳಬೇಕು ಎಂದು ವಿದ್ಯಾರ್ಥಿಗಳು ಮನವಿ ಮಾಡಿದ್ದಾರೆ.

> ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗದ ಮಕ್ಕಳು ಮಾತ್ರ ನಮ್ಮ ಶಾಲೆಗೆ ದಾಖಲಾಗುತ್ತಾರೆ. ಆ ಮಕ್ಕಳಿಗೆ ಗ್ರಾಮಸ್ಥರ ಸಹಕಾರದಿಂದ ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡಲು ಶ್ರಮಿಸುತ್ತಿದ್ದೇವೆ ಪ್ರಮೀಳಾ ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತ ಶಿಕ್ಷಕಿಗೋಪಸಂದ್ರ, ಸರ್ಕಾರಿ ಶಾಲೆಯು ಮೊದಲಿನಿಂದಲೂ ಕ್ಲಸ್ಟರ್ ನಲ್ಲಿ ಪ್ರಥಮ ಸ್ಥಾನದಲ್ಲಿದೆ. ಮಕ್ಕಳಿಗೆ ಖಾಸಗಿ ಗುಣಮಟ್ಟದ ಶಿಕ್ಷಣ ನೀಡುವುದು ನಮ್ಮ ಗುರಿ. ಸುಹಾಸ್ ವಿದ್ಯಾರ್ಥಿಶಾಲೆಗೆ ತಡೆಗೋಡೆ ಇಲ್ಲದೆ ಶಾಲಾ ಆವರಣದಲ್ಲಿ ಗಿಡಮರ ಬೆಳೆಸಲು ಸಾಧ್ಯವಾಗುತ್ತಿಲ್ಲ. ಬೇಗೆ ತಡೆಗೋಡೆ ನಿರ್ಮಿಸಿಕೊಡಬೇಕು. ಶಾಲೆಯ ಆವರಣದಲ್ಲಿರುವ ಚರಂಡಿಯನ್ನು ಬೇರೆ ಕಡೆಗೆ ತಿರುಗಿಸಬೇಕು.

ಅಂತರಾಳದಿಂದ.. EDITORIAL

# ವಕ್ಫ್ ತಿದ್ದುಪಡಿ ಮಸೂದೆ: ಶಂಕೆ ನಿವಾರಿಸಿ, ಮನವರಿಕೆ ಮಾಡಿಕೊಡಿ

ದೇಶದ ವಕ್ಸ್ ಮಂಡಳಿಗಳ ನಿರ್ವಹಣೆಯಲ್ಲಿ ಅಮೂಲಾಗ್ರ ಬದಲಾವಣೆಗಳನ್ನು ತರಲು ಉದ್ದೇಶಿಸಿರುವ ವಕ್ಸ್ (ತಿದ್ದುಪಡಿ) ಮಸೂದೆಯು ಮುಸ್ಲಿಂ ಸಮುದಾಯದಿಂದ ಹಾಗೂ ವಿರೋಧ ಪಕ್ಷಗಳಿಂದ ತೀವ್ರ ಟೀಕೆಗಳಿಗೆ ಗುರಿಯಾಗಿದೆ. ಸೆಕ್ಸ್ ಎಂಬುದು ಇಸ್ಲಾಂ ಧರ್ಮದ ವಿಶಿಷ್ಟವಾದ ದತ್ತಿ ವ್ಯವಸ್ಥೆಗಳಲ್ಲಿ ಒಂದು. ಈ ಮಸೂದೆಯನ್ನು ಈಚೆಗೆ ಮುಕ್ತಾಯಗೊಂಡ ಸಂಸತ್ ಅಧಿವೇಶನದಲ್ಲಿ ಮಂಡಿಸಲಾಗಿದೆ. ಈಗ ಮಸೂದೆಯನ್ನು ಜಂಟಿ ಸಂಸದೀಯ ಸಮಿತಿಗೆ (ಜೆಪಿಸಿ) ಒಪ್ಪಿಸಲಾಗಿದೆ. ಈ ಮಸೂದೆಯು ಅಸಾಂವಿಧಾನಿಕ, ಅಲ್ಪಸಂಖ್ಯಾತ ಸಮುದಾಯದ ವಿರೋಧಿ ಹಾಗೂ ವಿಭಜನಕಾರಿ ಎಂದು ವಿರೋಧ ಪಕ್ಷಗಳು ಆಕ್ಷೇಪ ವ್ಯಕ್ತಪಡಿಸಿವೆ. ಮುಸ್ಲಿಂ ಸಮುದಾಯದ ಧಾರ್ಮಿಕ, ಸಾಮಾಜಿಕ ಮತ್ತು ಆರ್ಥಿಕ ಜೀವನದಲ್ಲಿ ವಕ್ಸ್‌ಗೆ ಬಹಳ ಮುಖ್ಯವಾದ ಪಾತ್ರ ಇದೆ. ವಕ್ಫ್ ಅಂದರೆ ಮುಸ್ಲಿಮರು ಧಾರ್ಮಿಕ ಹಾಗೂ ದತ್ತಿ ಉದ್ದೇಶಕ್ಕಾಗಿ ನೀಡಿರುವ ಆಸ್ತಿಗಳು, ಇಂತಹ ಆಸ್ತಿಗಳ ಒಟ್ಟು ವಿಸ್ತೀರ್ಣವು 9.4 ಲಕ್ಷ ಎಕರೆ ಎಂದು ಅಂದಾಜಿಸಲಾಗಿದೆ. ಇವುಗಳ ಮೌಲ್ಯ ಅಂದಾಜು 21.2 ಲಕ್ಷ ಕೋಟಿ ಆಗಬಹುದು. ಈ ಆಸ್ತಿಗಳು ವಕ್ಸ್ ಮಂಡಳಿಗಳ ನಿಯಂತ್ರಣದಲ್ಲಿ ಇವೆ. ಮಂಡಳಿಗೆ ಚುನಾವಣೆ ನಡೆಸುವ ಬದಲು, ಅಲ್ಲಿಗೆ ವ್ಯಕ್ತಿಗಳನ್ನು ನಾಮನಿರ್ದೇಶನದ ಮೂಲಕ ನೇಮಿಸಲು ಅವಕಾಶ ಆಗುತ್ತದೆ. ವಕ್ಸ್ ಜಮೀನುಗಳ ಸರ್ವೆ ಅಧಿಕಾರಿಯಾಗಿ ಜಿಲ್ಲಾಧಿಕಾರಿಯನ್ನು ನೇಮಿಸಲು ಅವಕಾಶ ಇರುತ್ತದೆ. ವಿವಾದ ಉಂಟಾದಲ್ಲಿ ಜಮೀನಿನ ಕುರಿತು ತೀರ್ಮಾನ ಕೈಗೊಳ್ಳುವ ಅಧಿಕಾರವು ಜಿಲ್ಲಾಧಿಕಾರಿಯ ಕೈಯಲ್ಲಿರುತ್ತದೆ. ವಕ್ಫ್ ಆಸ್ತಿಗಳು ಮುಸ್ಲಿಮರಿಗೆ ಸೇರಿದವು. ಆದರೆ, ವಕ್ಫ್ ಮಂಡಳಿಗಳಿಗೆ ಮುಸ್ಲಿಮೇತರರನ್ನು ಕೂಡ ನೇಮಕ ಮಾಡಲು ಮಸೂದೆಯು ಅವಕಾಶ ನೀಡುತ್ತದೆ. ಯಾವುದೇ ವಕ್ಸ್‌ನ ಲೆಕ್ಕಪರಿಶೋಧನೆ ನಡೆಸುವಂತೆ ಮಹಾಲೇಖಪಾಲರಿಗೆ (ಸಿಎಜಿ) ಸೂಚಿಸುವ ಅಧಿಕಾರವು ಸರ್ಕಾರಕ್ಕೆ ದೊರೆಯುತ್ತದೆ. ಎಲ್ಲಾ ತಿದ್ದುಪಡಿಗಳ ಪರಿಣಾಮವಾಗಿ ವಕ್ಸ್ ಆಸ್ತಿಗಳ ಆಡಳಿತವು ಮುಸ್ಲಿಂ ಸಮುದಾಯದ ನಿಯಂತ್ರಣವಿರುವ ಮಂಡಳಿಗಳು ಹಾಗೂ ನ್ಯಾಯಮಂಡಳಿಗಳಿಂದ ಸರ್ಕಾರದ ಕೈಗೆ ಸಿಗುತ್ತದೆ. ಬಹಳ ದೊಡ್ಡ ಮಟ್ಟದಲ್ಲಿ ಇರುವ ವಕ್ಸ್ ಆಸ್ತಿಗಳನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳುವುದು ಈ ತಿದ್ದುಪಡಿಗಳ ಉದ್ದೇಶ ಎಂಬ ಟೀಕೆಯೂ ಇದೆ. ಮುಸ್ಲಿಂ ಸಮುದಾಯಕ್ಕೆ ಸೇರಿದ ಬಹಳ ಮುಖ್ಯವಾದ ಸಂಸ್ಥೆಯೊಂದರ ಸ್ವರೂಪದಲ್ಲಿ ಮಹತ್ವದ ಬದಲಾವಣೆಗಳನ್ನು ತರುವ ಉದ್ದೇಶವಿರುವ ಮಸೂದೆಯನ್ನು ಆ ಸಮುದಾಯದ ಜೊತೆ ವ್ಯಾಪಕ ಸಮಾಲೋಚನೆ ನಡೆಸದೆಯೇ ರೂಪಿಸಿರುವುದು ಆಶ್ಚರ್ಯ ಮೂಡಿಸುವಂಥದ್ದು ಮಸೂದೆಯಲ್ಲಿನ ಅಂಶಗಳ ಬಗ್ಗೆ ಸಂಬಂಧಪಟ್ಟ ಎಲ್ಲರ ಜೊತೆಯೂ ಮಾತುಕತೆ ನಡೆಸುವ ಕೆಲಸವು ಸರ್ಕಾರದ ಕಡೆಯಿಂದ ಆಗಬೇಕಿತ್ತು. ಮಸೂದೆಯಲ್ಲಿನ ಕೆಲವು ಅಂಶಗಳ ಬಗ್ಗೆ ಬಿಜೆಪಿಯ ಮಿತ್ರಪಕ್ಷಗಳಿಗೆ ತಮ್ಮದೇ ಆದ ಅನುಮಾನಗಳು, ಪ್ರಶ್ನೆಗಳು ಇವೆ. ಸಂವಿಧಾನದ 25 ಹಾಗೂ 26ನೇ ವಿಧಿಗಳು ಧಾರ್ಮಿಕ ಅಲ್ಪಸಂಖ್ಯಾತ ರಿಗೆ ನೀಡಿರುವ ಮೂಲಭೂತ ಹಕ್ಕುಗಳನ್ನು ಈ ಮಸೂದೆಯು ಉಲ್ಲಂಘಿಸುತ್ತದೆ ಎಂಬ ಕಳವಳಗಳು ವ್ಯಕ್ತವಾಗಿವೆ. ಆದರೆ, ಈ ಮಸೂದೆಯು ಮುಸ್ಲಿಂ ಸಮುದಾಯದ ಹಿತವನ್ನು ಕಾಯುವ ಕೆಲಸವನ್ನು ಮಾಡುತ್ತದೆ ಎಂದು ಕೇಂದ್ರ ಸರ್ಕಾರ ಹಾಗೂ ಆಡಳಿತಾರೂಢ ಬಿಜೆಪಿ ಹೇಳಿವೆ. ಅದು ನಿಜವೇ ಆಗಿದ್ದರೆ, ಆ ವಿಚಾರವನ್ನು ಮುಸ್ಲಿಂ ಸಮುದಾಯದವರಿಗೆ ಮನವರಿಕೆ ಮಾಡಿಕೊಡುವ ಕೆಲಸ ಆಗಬೇಕು.

**ವಕ್ಫ್ ಮಂಡಳಿಗಳು ಆಸ್ತಿ ನಿರ್ವಹಣೆಯನ್ನು ಸರಿಯಾಗಿ ಮಾಡುತ್ತಿಲ್ಲ. ಅಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ. ಮಂಡಳಿಗಳ ಕಾರ್ಯನಿರ್ವಹಣೆ ದಕ್ಷವಾಗಿಲ್ಲ ಎಂಬ ಟೀಕೆಗಳು ಇವೆ. ಮಂಡಳಿಗಳು ದಕ್ಷವಾಗಿ ಕೆಲಸ ನಿರ್ವಹಿಸುವಂತೆ ಮಾಡುವುದು ಈ ಮಸೂದೆಯ ಘೋಷಿತ ಉದ್ದೇಶ. ಆದರೆ, ಈ ಉದ್ದೇಶವನ್ನು ಸೂಕ್ಷ್ಮವಲ್ಲದ ರೀತಿಯಲ್ಲಿ ಈಡೇರಿಸಿಕೊಳ್ಳಲು ಸರ್ಕಾರವು ಮುಂದಾಗಿದೆ.ಮಸೂದೆಯಲ್ಲಿ ಇರುವ ತಿದ್ದುಪಡಿಗಳು ಕಾನೂನಿನ ರೂಪ ಪಡೆದು ಜಾರಿಗೆ ಬಂದಲ್ಲಿ, ರಾಜ್ಯ ಮಟ್ಟದ ವಕ್ಸ್ ಮಂಡಳಿಗಳ ಬಹುತೇಕ ಅಧಿಕಾರ ಇನ್ನಿಲ್ಲವಾಗುತ್ತದೆ.**

## ಸಚಿವರ ನಿಯೋಗದ ಭೇಟಿಗೆ ರಾಜ್ಯಪಾಲರ ನಿರಾಕರಣೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಸಚಿವ ಸಂಪುಟದ ಸದಸ್ಯರ ನಿಯೋಗವನ್ನು ಭೇಟಿ ಮಾಡಲು ರಾಜ್ಯಪಾಲರು ಅನುಮತಿ ನಿರಾಕರಿಸಿರುವ ಬೆಳವಣಿಗೆ ನಡೆದಿದೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟದ ಸದಸ್ಯರ ನಿಯೋಗ ಭೇಟಿ ಮಾಡಿ ಮುಡಾ ಪ್ರಕರಣದಲ್ಲಿ ಅಭಿಯೋಜನೆಗೆ ನೀಡಿರುವ ಪೂರ್ವಾನುಮತಿಯ ಬಗ್ಗೆ ಸಮಾಲೋಚನೆ ನಡೆಸಲು ಮುಂದಾಗಿತ್ತು.

ಆದರೆ ನಿಯೋಗಕ್ಕೆ ಸಮಯ ನೀಡಲು ರಾಜ್ಯಪಾಲರು ನಿರಾಕರಿಸಿದರು. ಹೀಗಾಗಿ ಡಿ.ಕೆ.ಶಿವಕುಮಾರ್ ಅವರು ಮಧ್ಯಾಹ್ನ ತುರ್ತು ಪತ್ರಿಕಾಗೋಷ್ಠಿ ನಡೆಸಿ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಹುನ್ನಾರ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪೂರ್ವಾನುಮತಿಯ ಸೂಚನೆಗಳು ಬಹಿರಂಗಗೊಳ್ಳುತ್ತಿದ್ದಂತೆ ಹೊರ ಜಿಲ್ಲೆಗಳಲ್ಲಿ ಪ್ರವಾಸದಲ್ಲಿದ್ದ ಸಚಿವರನ್ನು ಬೆಂಗಳೂರಿಗೆ ಆಗಮಿಸುವಂತೆ ತುರ್ತು ಸಂದೇಶ ರವಾನೆ ಮಾಡಲಾಗಿದೆ. ಹಬ್ಬದ ಸಲುವಾಗಿ ಊರಿಗೆ ತೆರಳಿದ್ದ ಸಚಿವರು ತುರ್ತು ಕರೆಯ ಮೇರೆಗೆ ಎದ್ದುಬಿದ್ದು ಬೆಂಗಳೂರಿನತ್ತ ಧಾವಿಸಿಬಂದರು.

## ಮಹಾಭಾರತ — ಅಶ್ವಮೇಧಿಕಪರ್ವ



• ಹಿಂದಿನ ಸಂಚಿಕೆಯಿಂದ


ಮುಂದಿನದೆಲ್ಲ ನಡೆದದ್ದು ಬೇಗ ಬೇಗ: ದುರ್ಯೋಧನನು ಶಕುನಿಯನ್ನು ಮುಂದಿಟ್ಟುಕೊಂಡು ದ್ಯೂತವಾಡಿದ್ದು; ದ್ರೌಪದಿಯನ್ನು ಸಭೆಯಲ್ಲಿ ಅಪಮಾನಿಸಿದ್ದು; ಇದೇ ಘೋರದುರಂತದ ಆರಂಭವೆನ್ನಬಹುದು. ಪ್ರತಿಜ್ಞೆಗಳನ್ನೆಲ್ಲ ಮಾಡಿದ್ದು ಆವಾಗಲೇ; ಉಳಿದದ್ದು ಅವುಗಳನ್ನು ಪೂರೈಸಿಕೊಂಡದ್ದಷ್ಟೇ. ದ್ವಾರಕೆಯಲ್ಲಿ ಅರ್ಜುನ ದುರ್ಯೋಧನರು ಕೃಷ್ಣನ ಸಹಾಯ ಕೇಳುವುದಕ್ಕೆ ಹೋದ ಘಟನೆ, ಆಗ ಅರ್ಜುನನು ಅಕ್ಷೌಹಿಣಿ ಸೈನ್ಯವನ್ನು ಬಿಟ್ಟು ಕೃಷ್ಣನನ್ನೇ ಆರಿಸಿಕೊಂಡದ್ದು ಅವರೆಲ್ಲರ ಭವಿಷ್ಯವನ್ನೂ ನಿರ್ಧರಿಸಿಬಿಟ್ಟಿತು. ಕೊನೆಯದೇ ಭೀಷ್ಮ ದ್ರೋಣ ರಾಧೇಯ ಅಭಿಮನ್ಯು ಮುಂತಾದ ಮಹಾಮಹಿಮರನ್ನು ಬಲಿ ತೆಗೆದುಕೊಂಡ ಘೋರವಾದ ಮಹಾಯುದ್ಧ. ಶಕುನಿಯ ಸಾವಿನೊಂದಿಗೆ ಈ ನಾಟಕದ ಮುಕ್ತಾಯ. ದುರ್ಯೋಧನನ ಸಾವು ಅದರ ಭರತವಾಕ್ಯ. ಅನೇಕ ವರ್ಷಗಳಷ್ಟು ದೀರ್ಘಕಾಲ ನಡೆದ ನಾಟಕ ಈಗ ಕಾಲದಲ್ಲಿ ಸ್ವಲ್ಪದೂರ ಬಂದು ಹಿಂದಿರುಗಿ ನೋಡಿದಾಗ ಅಬ್ಬಾ, ಈ ಮಹಾನಾಟಕದಲ್ಲಿ ನಾವೂ ನಟಿಸಿದೆವೇ ಎನ್ನಿಸುತ್ತಿದೆ . ಮುಂದಿನದೆಲ್ಲ ನಡೆದದ್ದು ಬೇಗ ಬೇಗ: ದುರ್ಯೋಧನನು ಶಕುನಿಯನ್ನು ಮುಂದಿಟ್ಟುಕೊಂಡು ದ್ಯೂತವಾಡಿದ್ದು; ದ್ರೌಪದಿಯನ್ನು ಸಭೆಯಲ್ಲಿ ಅಪಮಾನಿಸಿದ್ದು; ಇದೇ ಘೋರದುರಂತದ ಆರಂಭವೆನ್ನಬಹುದು. ಪ್ರತಿಜ್ಞೆಗಳನ್ನೆಲ್ಲ ಮಾಡಿದ್ದು ಆವಾಗಲೇ; ಉಳಿದದ್ದು ಅವುಗಳನ್ನು ಪೂರೈಸಿಕೊಂಡದ್ದಷ್ಟೇ. ದ್ವಾರಕೆಯಲ್ಲಿ ಅರ್ಜುನ ದುರ್ಯೋಧನರು ಕೃಷ್ಣನ ಸಹಾಯ ಕೇಳುವುದಕ್ಕೆ ಹೋದ ಘಟನೆ, ಆಗ ಅರ್ಜುನನು ಅಕ್ಷೌಹಿಣಿ ಸೈನ್ಯವನ್ನು ಬಿಟ್ಟು ಕೃಷ್ಣನನ್ನೇ ಆರಿಸಿಕೊಂಡದ್ದು ಅವರೆಲ್ಲರ ಭವಿಷ್ಯವನ್ನೂ ನಿರ್ಧರಿಸಿಬಿಟ್ಟಿತು. ಕೊನೆಯದೇ ಭೀಷ್ಮ ದ್ರೋಣ ರಾಧೇಯ ಅಭಿಮನ್ಯು ಮುಂತಾದ ಮಹಾಮಹಿಮರನ್ನು ಬಲಿ ತೆಗೆದುಕೊಂಡ ಘೋರವಾದ ಮಹಾಯುದ್ಧ. ಶಕುನಿಯ ಸಾವಿನೊಂದಿಗೆ ಈ ನಾಟಕದ ಮುಕ್ತಾಯ. ದುರ್ಯೋಧನನ ಸಾವು ಅದರ ಭರತವಾಕ್ಯ. ಅನೇಕ ವರ್ಷಗಳಷ್ಟು ದೀರ್ಘಕಾಲ ನಡೆದ ನಾಟಕ ಈಗ ಕಾಲದಲ್ಲಿ ಸ್ವಲ್ಪದೂರ ಬಂದು ಹಿಂದಿರುಗಿ ನೋಡಿದಾಗ ಅಬ್ಬಾ, ಈ ಮಹಾನಾಟಕದಲ್ಲಿ ನಾವೂ ನಟಿಸಿದೆವೇ ಎನ್ನಿಸುತ್ತಿದೆ! ಕೃಷಣ ನು, ''ಅರ್ಜುನ, ಮಹಾಯುದ್ಧ ಮುಗಿಯಿತು. ನಿನ್ನ ಶತ್ರುಗಳೆಲ್ಲರೂ ಸತ್ತರು. ಯುಧಿಷ್ಠಿರನು ಕುರುರಾಜ್ಯದ ಸಾಮ್ರಾಟನಾದನು. ನಾನು ಜವಾಬ್ದಾರಿಯಿಂದ ಹೊತ್ತುಕೊಂಡಿದ್ದ ಈ ಕೆಲಸವನ್ನು ಮುಗಿಸಿಕೊಟ್ಟಿದ್ದೇನೆ. ಈಗ ನನ್ನ ತಂದೆತಾಯಿಗಳನ್ನು ನೋಡಲು ದ್ವಾರಕೆಗೆ ಹೋಗಬೇಕು ಎನ್ನಿಸುತ್ತಿದೆ. ನಿನ್ನಣ್ಣನನ್ನು ಕೇಳುವ ಮೊದಲು ನನಗೆ ಅನುಜ್ಞೆ ಕೊಡಬೇಕು, ಅರ್ಜುನ, ಅನಂತರ ನೀನೇ ಅವನಿಗೆ ಹೇಳು. ಅವನು ಒಪ್ಪಿದರೆ, ನಾನು ದ್ವಾರಕೆಗೆ ಹೊರಡುತ್ತೇನೆ. ಇಲ್ಲವಾದರೆ ಇಲ್ಲಿಯೇ ಉಳಿಯುತ್ತೇನೆ. ನನ್ನ ಇಷ್ಟಕ್ಕಿಂತ ಅವನ ಇಷ್ಟವೇ ನನಗೆ ಮುಖ್ಯ. ಅವನಿಗೆ ಸಹಾಯ ಮಾಡಲು ನೀವೆಲ್ಲ ಇದ್ದೀರಿ.

ಮುಂದುವರಿಯುವುದು...

# ರಾಯರ ಮಠದಲ್ಲಿ ಗುರುಗಳ ಆರಾಧನಾ ಸಪ್ತರಾತ್ರೋತ್ಸವ

## ರಾಯರ ಪಾದಪೂಜೆ, ಕನಕಾಭಿಷೇಕ, ಮಹಾಮಂಗಳಾರತಿ, ಪ್ರಸಾದ ವಿತರಣೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಶ್ರೀ ಪಾದಂಗಳವರಿಂದ ಸಪ್ತರಾತ್ರೋತ್ಸವದ ಉದ್ಘಾಟನೆ**

ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 108 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಆಗಸ್ಟ್ 18 ರಿಂದ 24ರ ವರೆಗೆ ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ ಆರಾಧನಾ ಸಪ್ತರಾತ್ರೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿದೆ. ಆರಾಧನೆಯ ಎಲ್ಲಾ ದಿನಗಳಲ್ಲೂ ಪ್ರತಿದಿನ ಬೆಳಗ್ಗೆ ಗುರುಗಳ ಬೃಂದಾವನಕ್ಕೆ ಅಷ್ಟೋತ್ತರ ಪಾರಾಯಣ ಸಹಿತ ಪಂಚಾಮೃತ ಅಭಿಷೇಕ, ರಾಯರ ಪಾದಪೂಜೆ, ಕನಕಾಭಿಷೇಕ, ಮಹಾಮಂಗಳಾರತಿ, ಪ್ರಸಾದ ವಿತರಣೆಯಿರುತ್ತದೆ.

ಕಾರ್ಯಕ್ರಮಗಳು : ಆಗಸ್ಟ್ 18 , ಭಾನುವಾರ : ಸಂಜೆ 6-30ಕ್ಕೆ ಕಾಣಿಯೂರು ಮಠಾಧೀಶರಾದ ಪರಮಪೂಜ್ಯ ಶ್ರೀ 108 ಶ್ರೀ ವಿದ್ಯಾವಲ್ಲಭತೀರ್ಥ ಶ್ರೀಪಾದಂಗಳವರಿಂದ ಸಪ್ತರಾತ್ರೋತ್ಸವದ ಉದ್ಘಾಟನೆ, ಗೋಪೂಜೆ, ಧನ-ಧಾನ್ಯ ಪೂಜೆ ಆಗಸ್ಟ್ 19 , ಸೋಮವಾರ : ಬೆಳಗ್ಗೆ ಋಗ್ವೇದ, ಯಜುರ್ವೇದ ಮತ್ತು ನಿತ್ಯ ನೂತನ ಉಪಾಕರ್ಮ ನಂತರ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ. ಸಂಜೆ 7-00ಕ್ಕೆ ವಿದುಷಿ ಶ್ರೀಮತಿ ಮೇಘಾ ಶಿವಕುಮಾರ್ ಮತ್ತು ವೃಂದದವರಿಂದ ದಾಸವಾಣಿ. ಆಗಸ್ಟ್ 20 , ಮಂಗಳವಾರ : ಸಂಜೆ 7-00ಕ್ಕೆ ವಿದ್ವಾನ್ ಪ್ರಾದೇಶಾಚಾರ್ ಮತ್ತು ಸಂಗಡಿಗರಿಂದ ದಾಸಲಹರಿ. ಆಗಸ್ಟ್ 21 , ಬುಧವಾರ : ಸಂಜೆ 7-00ಕ್ಕೆ ಬೆಂಗಳೂರು ಸಹೋದರರಾದ ವಿದ್ವಾನ್ ಹರಿಹರನ್ ಎಂ.ಬಿ., ವಿದ್ವಾನ್ ಎಸ್. ಅಶೋಕ್ ಮತ್ತು ಸಂಗಡಿಗರು ದಾಸತರಂಗಿಣಿ. ಆಗಸ್ಟ್ 22 , ಗುರುವಾರ ; ಬೆಳಗ್ಗೆ 8-00ಕ್ಕೆ ಜಯನಗರದ ರಾಜಬೀದಿಯಲ್ಲಿ ಶ್ರೀ ಗುರುರಾಜರ ಮಹಾ ರಥೋತ್ಸವ, ಸಂಜೆ 6-30ಕ್ಕೆ ವಿದ್ವಾನ್ ಜಯತೀರ್ಥ ಮೇವುಂಡಿ ಮತ್ತು ಸಂಗಡಿಗರಿಂದ ದಾಸ ಝೇಂಕಾರ. ಆಗಸ್ಟ್ 23 , ಶುಕ್ರವಾರ : ಸಂಜೆ 7-00ಕ್ಕೆ ವಿದ್ವಾನ್ ಜನಾರ್ಧನ್ ಮತ್ತು ಸಂಗಡಿಗರಿಂದ ಸ್ಯಾಕ್ಸೋಫೋನ್ ವಾದನ. ಆಗಸ್ಟ್ 24 , ಶನಿವಾರ : ವಿದುಷಿ ಶ್ರೀಮತಿ ದರ್ಶಿನಿ ಮಂಜುನಾಥ್ ಅವರ ನಿರ್ದೇಶನದಲ್ಲಿ ನೃತ್ಯ ದಿಶಾ ಟ್ರಸ್ಟ್‌ನ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ . ಆರಾಧನೆಯ ಎಲ್ಲಾ ದಿನಗಳಲ್ಲೂ ಪ್ರತಿದಿನ ಸಂಜೆ 5-30ಕ್ಕೆ ವಿದ್ವಾನ್ ಜಗನ್ನಾಥಾಚಾರ್ಯ ರಾಯಚೂರು ಇವರಿಂದ ಶ್ರೀ ಗುರುಗುಣಸ್ತವನ ವಿಷಯವಾಗಿ ಧಾರ್ಮಿಕ ಪ್ರವಚನ ಜರುಗುತ್ತದೆ. ಈ ಆರಾಧನಾ ಮಹೋತ್ಸವದಲ್ಲಿ ಅಂದಾಜು 50,000ಕ್ಕೂ ಮಿಗಿಲಾಗಿ ಭಕ್ತ ಜನರಿಗೆ ಅನ್ನ ಸಂತರ್ಪಣೆ ಕಾರ್ಯಕ್ರಮವು ನೆರವೇರಲಿದೆ. ಈ ಸುಸಂದರ್ಭದಲ್ಲಿ ಶ್ರೀ ಗುರುರಾಯರಿಗೆ ಸೇವೆಯನ್ನು ಮಾಡಿಸುವಂತಹ ಭಕ್ತರು ವಾಟ್ಸಪ್ ಈ ನಂಬರ್ 9449133929 ಆನ್ಲೈನ್ ಮುಖಾಂತರ ಸೇವೆ ಸಲ್ಲಿಸಿ ಗುರುರಾಯರ ಅನುಗ್ರಹಕ್ಕೆ ಪಾತ್ರರಾಗಬಹುದು. ಸೇವೆಯನ್ನು ಸಲ್ಲಿಸಿದ ಭಕ್ತರಿಗೆ ಶೇಷವಸ್ತ್ರ, ಫಲ ಮಂತ್ರಾಕ್ಷತೆ, ಪರಿಮಳ ಮಹಾಪ್ರಸಾದ, ಕೊಡಲಾಗುವುದು ಎಂದು ಶ್ರೀ ನಂದಕಿಶೋರ್ ಆಚಾರ್ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 08022443962 -9945429129-9449133929-8660349906

# ಉದಯೋನ್ಮುಖ ಗ್ರಾಮೀಣ ನೃತ್ಯಪ್ರತಿಭೆ ಖುಷಿ ದೇವರಾಜ್ ರಂಗಪ್ರವೇಶ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು



**ನೃತ್ಯ ಶಾಲೆಯನ್ನು ಯಶಸ್ವಿ**


ಗ್ರಾಮೀಣ ಪ್ರತಿಭೆಯಾಗಿ ಉತ್ತಮ ಹೆಸರು ಗಳಿಸಿರುವ ಅಂತರರಾಷ್ಟ್ರೀಯ ನೃತ್ಯಪಟು-ಗುರು ವಿದ್ವಾನ್ ಕೋಲಾರ ರಮೇಶ್, ದೇಶ-ವಿದೇಶಗಳಲ್ಲಿ ಪ್ರತಿಷ್ಠಿತ ವೇದಿಕೆಗಳಲ್ಲಿ, ಅಸಂಖ್ಯಾತ ನೃತ್ಯಪ್ರದರ್ಶನಗಳನ್ನು ಮತ್ತು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಸಮ್ಮುಖ ಶಿಷ್ಯರ ನೃತ್ಯಪ್ರದರ್ಶನ ಪ್ರಸ್ತುತಪಡಿಸಿ ಪ್ರಶಂಸೆ ಪಡೆದವರು ಎಂಬುದು ವಿಶೇಷ ಸಂಗತಿ. ಹೊಸಕೋಟೆಯಲ್ಲಿ ನೃತ್ಯಶಾಲೆಯನ್ನು ಯಶಸ್ವಿಯಾಗಿ ಮುನ್ನಡೆಸುತ್ತಿರುವ ರಮೇಶ ಅವರ ಸಮರ್ಥ ಮಾರ್ಗದರ್ಶನದಲ್ಲಿ ತಯಾರಾದ ನೃತ್ಯಕುಸುಮಗಳು ಅಸಂಖ್ಯಾತ ಮತ್ತು ನೃತ್ಯನೈಪುಣ್ಯ ಪಡೆದು ರಂಗಪ್ರವೇಶ ಮಾಡಿದ ಪ್ರತಿಭೆಗಳು ಅನೇಕಾನೇಕ. ಪ್ರಸ್ತುತ ಇವರ ನೇತೃತ್ವದ 'ಶ್ರೀ ನವಚೇತನ ನೃತ್ಯಕಲಾ ಅಕಾಡೆಮಿ'ಯ 45 ನೇ ರಂಗಪ್ರವೇಶವಾಗಿದೆ. ಇವರ ನುರಿತ ಗರಡಿಯಲ್ಲಿ ರೂಪುತಳೆದ ನೃತ್ಯಶಿಲ್ಪ ಕು. ಖುಷಿ ದೇವರಾಜ್ ಶ್ರೀಮತಿ ಸುಜಾತ ಮತ್ತು ದೇವರಾಜ್ ಅವರ ಪುತ್ರಿಯಾಗಿದ್ದು ಈಗಾಗಲೇ ದೆಹಲಿಯೂ ಸೇರಿದಂತೆ ನಾಡಿನಾದ್ಯಂತ ನೃತ್ಯಪ್ರದರ್ಶನಗಳನ್ನು ನೀಡಿದ್ದಾಳೆ. ಈ ಭರವಸೆಯ ಪ್ರತಿಭೆ- ತನ್ನ ನೃತ್ಯದ ವಿವಿಧ ಆಯಾಮಗಳನ್ನು ಪ್ರದರ್ಶಿಸಲು ಇದೇ ತಿಂಗಳ 23 ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ರವೀಂದ್ರ ಕಲಾಕ್ಷೇತ್ರದಲ್ಲಿ ವಿದ್ಯುಕ್ತವಾಗಿ ತನ್ನ 'ರಂಗಪ್ರವೇಶ' ನೆರವೇರಿಸಿಕೊಳ್ಳಲಿದ್ದಾಳೆ. ಈಕೆಯ ನೃತ್ಯ ಕಲಾಸೊಬಗನ್ನು ಕಣ್ತುಂಬಿಕೊಳ್ಳಲು ಸರ್ವರಿಗೂ ಆದರದ ಸ್ವಾಗತ. ಕು. ಖುಷಿಗೆ ನೃತ್ಯ ಬಾಲ್ಯದ ಒಲವು. ಪುಟ್ಟಹುಡುಗಿಯಾಗಿದ್ದಾಗಲೇ ನೃತ್ಯ ಕಲಿಯಲಾರಂಭಿಸಿದಳು. ಈ ಹದಿನೆಂಟರ ಬಾಲೆ ಕಳೆದ 5 ವರ್ಷಗಳಿಂದ ವಿ. ರಮೇಶ್ ಅವರಲ್ಲಿ ಬಹು ಆಸಕ್ತಿ-ಬದ್ಧತೆಗಳಿಂದ ಕಲಿಯುತ್ತ 'ಮಾರ್ಗಂ' ಸಂಪ್ರದಾಯದ ಎಲ್ಲ ಕೃತಿಗಳನ್ನೂ ಚೆನ್ನಾಗಿ ಅಭ್ಯಾಸ ಮಾಡಿದ್ದಾಳೆ. ಕರ್ನಾಟಕ ಸರ್ಕಾರ ನಡೆಸುವ ಜ್ಯೂನಿಯರ್ ನೃತ್ಯಪರೀಕ್ಷೆಯಲ್ಲಿ ಪ್ರಥಮ ರ್‍ಯಾಂಕ್ ಪಡೆದ ಅಗ್ಗಳಿಕೆ ಇವಳದು. ಓದಿನಲ್ಲೂ ಬುದ್ಧಿವಂತೆ. ಹೊಸಕೋಟೆಯ ಮಹದೇವ ಕಾಲೇಜಿನಿಂದ 12 ನೇ ತರಗತಿಯಲ್ಲಿ ಉತ್ತಮಾಂಕಗಳಿಂದ ತೇರ್ಗಡೆಯಾಗಿ ಇದೀಗ 'ಆಕಾಶ್ ಗ್ರೂಪ್ ಆಫ್ ಇನ್ಸ್ಟಿಟ್ಯೂಶನ್ಸ್' ದೇವನಹಳ್ಳಿಯಲ್ಲಿ ಪ್ರಥಮ ವರ್ಷದ ಇಂಜಿನಿಯರಿಂಗ್ ಅಭ್ಯಾಸ ಮಾಡುತ್ತಿರುವ ಖುಷಿಗೆ ನೃತ್ಯದ ಬಗ್ಗೆ ಪ್ರೀತಿ ಅಪಾರ.

ಈ ಗ್ರಾಮೀಣ ನೃತ್ಯಪ್ರತಿಭೆ ಖುಷಿಯ ವೈಶಿಷ್ಟ್ಯವೆಂದರೆ ಹಳ್ಳಿಯಿಂದ ದಿಲ್ಲಿಯವರೆಗೆ ನೂರಾರು ನೃತ್ಯ ಕಾರ್ಯಕ್ರಮಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಗಳಿಸಿರುವುದು. ದೆಹಲಿ ಕರ್ನಾಟಕ ಸಂಘದ ಅಮೃತ ಮಹೋತ್ಸವದಲ್ಲಿ ಇವಳು ನೀಡಿರುವ ನೃತ್ಯ ಪ್ರದರ್ಶನ ಚಿರಸ್ಮರಣೀಯ. ಉತ್ತಮ ಇಂಜಿನಿಯರಾಗಿ ನಾಡಿಗೆ ಸೇವೆ ಸಲ್ಲಿಸುವ ಆಶಯದೊಂದಿಗೆ ಖುಷಿಗೆ ನೃತ್ಯರಂಗದಲ್ಲಿ ಅಪಾರ ಸಾಧನೆಗೈವ ಆಕಾಂಕ್ಷೆಯೂ ಇದೆ.

## ರಾಜ್ಯಪಾಲರ ನಡೆ ಪ್ರಜಾಪ್ರಭುತ್ವ ವಿರೋಧಿ: ಸಿಎಂ

• ಉದಯವಾಹಿನಿ, ಬೆಂಗಳೂರು

ಸಾಂವಿಧಾನಿಕ ಹುದ್ದೆಯಲ್ಲಿರುವ ರಾಜ್ಯಪಾಲರು ರಾಜಕೀಯ ಪಕ್ಷದ ಏಜೆಂಟರಂತೆ ವರ್ತಿಸುತ್ತಿರುವುದು ಅಕ್ಷಮ್ಯ. ಇವರನ್ನು ರಾಷ್ಟ್ರಪತಿಗಳು ತಕ್ಷಣವೇ ವಜಾ ಮಾಡಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಬಿಜೆಪಿ ರಾಜಕೀಯ ಪ್ರೇರಿತವಾಗಿ ಮಾಡಿರುವ ಆರೋಪವನ್ನೇ ಆಧಾರವಾಗಿಟ್ಟುಕೊಂಡು, ರಾಜಕೀಯ ದ್ವೇಷ ಮತ್ತು ಒತ್ತಡಕ್ಕೆ ಮಣಿದು ಪ್ರಾಸಿಕ್ಯೂಷನ್‌ಗೆ ರಾಜ್ಯಪಾಲರು ಅನುಮತಿ ನೀಡಿರುವುದು ಸರಿಯಾದ ಕ್ರಮವಲ್ಲ.


ಉದಯವಾಹಿನಿ ಚಿತ್ರ

ಇದು ಪ್ರಜಾಪ್ರಭುತ್ವ ವಿರೋಧಿ ನಡೆ. ಇದು ಸರ್ಕಾರವನ್ನು ಅಸ್ಥಿರಗೊಳಿಸುವ ಹುನ್ನಾರ ಎಂದು ಡಾ. ಮುಖ್ಯಮಂತ್ರಿ ಚಂದ್ರು ಕಿಡಿಕಾರಿದ್ದಾರೆ. ದೆಹಲಿ, ಜಾರ್ಖಂಡ್ ಮತ್ತಿತರ ರಾಜ್ಯಗಳಲ್ಲಿ ಬಿಜೆಪಿ ಹೂಡಿದ ಕುತಂತ್ರವನ್ನೇ ಕರ್ನಾಟಕದಲ್ಲೂ ಹೂಡಲು ಮುಂದಾಗಿದೆ. ರಾಜ್ಯಪಾಲರ ಮೂಲಕ ರಾಜ್ಯ ಸರ್ಕಾರವನ್ನು ಅಸ್ಥಿರ ಗೊಳಿಸಲು ಯತ್ನಿಸುತ್ತಿದೆ. ಯಾರೋ ಖಾಸಗಿ ವ್ಯಕ್ತಿಯ ದೂರನ್ನು ಆಧರಿಸಿ ತಮ್ಮ ಹುದ್ದೆಯ ಗೌರವವನ್ನೂ ಲೆಕ್ಕಿಸದೆ ಬಿಜೆಪಿಗರ ಒತ್ತಡಕ್ಕೆ ರಾಜ್ಯಪಾಲರು ಮಣಿದಿದ್ದು ದುರ್ದೈವದ ಸಂಗತಿ ಎಂದು ಬೆಳಗಾವಿ ಮಹಾಂತ ಭವನದಲ್ಲಿ ನಡೆದ ಆಮ್ ಆದ್ಮಿ ಪಾರ್ಟಿಯ ರಾಜ್ಯ ಕಾರ್ಯಕಾರಿಣಿ ಸಮಿತಿ ಸಭೆಯಲ್ಲಿ ಆರೋಪಿಸಿದರು. ಬಿಜೆಪಿ, ಮಿತ್ರಪಕ್ಷದ ಹಗರಣಗಳ ತನಿಖೆಗೆ ಅನುಮತಿ ಕೋರಿರುವ ಕಡತಗಳು ರಾಜಭವನದಲ್ಲಿ ವರ್ಷಗಳಿಂದ ಬಾಕಿ ಉಳಿದಿದ್ದರೂ ರಾಜ್ಯಪಾಲರು ಯಾಕೆ ತಲೆ ಕೆಡಿಸಿಕೊಂಡಿಲ್ಲ ಪ್ರಶ್ನಿಸಿದರು. ಎಚ್‌ಡಿಕೆ ಣಿ ಹಗರಣದ ತನಿಖೆಗೆ ಲೋಕಾಯುಕ್ತ ಸಂಸ್ಥೆಯೇ ಅನುಮತಿ ಕೇಳಿದ್ದರೂ ರಾಜ್ಯಪಾಲರು ಕಳೆದ 10 ತಿಂಗಳಿಂದ ಕಡತವನ್ನು ಮೂಲೆಗೆ ತಳ್ಳಿ ಕೂತಿದ್ದಾರೆ. ಶಶಿಕಲಾ ಜೊಲ್ಲೆಯ ಮೊಟ್ಟೆ ಹಗರಣದ ವಿರುದ್ಧದ ತನಿಖೆಗೆ ಅನುಮತಿ ಕೋರಿದ ಕಡತವನ್ನು ಸಹ ಸುಮಾರು 2 ವರ್ಷಗಳಿಂದ ರಾಜ್ಯಪಾಲರು ಬಾಕಿ ಉಳಿಸಿಕೊಂಡಿದ್ದಾರೆ. ಮುರುಗೇಶ್ ನಿರಾಣಿ ಮಂತ್ರಿಯಾಗಿದ್ದಾಗ ಬೃಹತ್ ಕೈಗಾರಿಕೆ ಇಲಾಖೆ ವ್ಯಾಪ್ತಿಯಡಿ ಬರುವ ಮಾರ್ಕೆಟಿಂಗ್, ಜಾಹೀರಾತು ಮತ್ತು ಪ್ರಚಾರ ಸಂಸ್ಥೆಯಲ್ಲಿ 2011-15ರ ನಡುವೆ ನಡೆದ ಅಕ್ರಮ ನೇಮಕಾತಿಯ ತನಿಖೆಗೆ ಅನುಮತಿ ಕೋರಿರುವ ಕಡತ ನಿದ್ರಾವಸ್ಥೆಯಲ್ಲಿದೆ.

## 3ನೇ ಹಂತಕ್ಕೆ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

• ಉದಯವಾಹಿನಿ, ಬೆಂಗಳೂರು



ಬೆಂಗಳೂರಿನ ನಮ್ಮ ಮೆಟ್ರೋ 3ನೇ ಹಂತದ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. ಹೀಗಾಗಿ ಬೆಂಗಳೂರಲ್ಲಿ 2ನೇ ಹಂತದ ಮೆಟ್ರೋದ ನಂತ್ರ, 3ನೇ ಹಂತದ ಕಾಮಗಾರಿಯೂ ಆರಂಭಗೊಳ್ಳಲಿದೆ. ಈ ಕುರಿತಂತೆ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಅವರು ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಮಾಹಿತಿ ಹಂಚಿಕೊಂಡಿದ್ದು, ಬಹು ನಿರೀಕ್ಷಿತ ರೂ 15,611 ಕೋಟಿ ವೆಚ್ಚದ ಬೆಂಗಳೂರು ಮೆಟ್ರೋ ರೈಲು ಯೋಜನೆ ಹಂತ-3ರ ಎರಡು ಪಥಗಳ ಯೋಜನೆಗೆ ಕೇಂದ್ರ ಸಂಪುಟ ಅನುಮೋದನೆ ನೀಡಿದ್ದು, ಇದಕ್ಕಾಗಿ ನಾನು ಗೌರವಾನ್ವಿತ ಪ್ರಧಾನಿಗಳಾದ ನರೇಂದ್ರ ಮೋದಿ ಅವರನ್ನು ಅಭಿನಂದಿಸುತ್ತೇನೆ ಎಂದಿದ್ದಾರೆ.

ಕೇಂದ್ರ ಸರಕಾರವು ಬೆಂಗಳೂರು ನಗರದ ಜನತೆಗೆ ನೀಡಿರುವ ವರ ಮಹಾಲಕ್ಷ್ಮೀ ಹಬ್ಬದ ಉಡುಗೊರೆ ಎಂದೇ ನಾನು ಭಾವಿಸಿದ್ದೇನೆ. ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಸಾಕಷ್ಟು ಉತ್ತೇಜನ ನೀಡುತ್ತಿರುವ ಮಾನ್ಯ ಪ್ರಧಾನಿಗಳಿಗೆ ನನ್ನ ಧನ್ಯವಾದಗಳನ್ನು ತಿಳಿಸಿದ್ದಾರೆ.

## ಕಾಂಗ್ರೆಸ್ ಪಕ್ಷ, ಸರ್ಕಾರ ಸಿಎಂ ಬೆನ್ನಿಗೆ ನಿಲ್ಲುತ್ತದೆ: ಡಿಸಿಎಂ ಡಿಕೆಶಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯಪಾಲರ ಕಚೇರಿ ದುರ್ಬಳಕೆ ಮಾಡಿಕೊಂಡು ಸುಳ್ಳು ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸಿಲುಕಿಸಿ ಸರ್ಕಾರ ಅಸ್ಥಿರಗೊಳಿಸುವ ಷಡ್ಯಂತ್ರ ನಡೆಯುತ್ತಿದೆ. ಇಡೀಕಾಂಗ್ರೆಸ್ ಪಕ್ಷ ಹಾಗೂ ಸರ್ಕಾರ ಸಿದ್ದರಾಮಯ್ಯ ಅವರ ಬೆನ್ನಿಗೆ ನಿಲ್ಲುತ್ತದೆ, ಅವರು ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಖಡಕ್ಕಾಗಿ ತಿಳಿಸಿದರು.

ಮುಡಾ ಹಗರಣ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧದ ತನಿಖೆಗೆ ರಾಜ್ಯಪಾಲರು ಅನುಮತಿ ನೀಡಿರುವ ಬಗ್ಗೆ ಶಿವಕುಮಾರ್ ಅವರು ವಿಧಾನಸೌಧದಲ್ಲಿ ಸಂಪುಟ ಸಹೋದ್ಯೋಗಿಗಳ ಜತೆ ಶನಿವಾರ ಮಾಧ್ಯಮಗೋಷ್ಠಿ ನಡೆಸಿದರು.

ಸಿದ್ದರಾಮಯ್ಯ ಅವರು ನಮ್ಮ ಮುಖ್ಯಮಂತ್ರಿಗಳು, ಅವರು ಮುಖ್ಯಮಂತ್ರಿಗಳಾಗಿ ಮುಂದುವರೆಯುತ್ತಾರೆ.

ನಮ್ಮ ಮುಖ್ಯಮಂತ್ರಿಗಳು ಈ ಯಾವುದೇ ಒತ್ತಡಕ್ಕೆ ಮಣಿ ಯುವುದಿಲ್ಲ. ಅವರು ನಮ್ಮ ಮುಖ್ಯಮಂತ್ರಿಗಳಾಗಿ ಮುಂದುವರಿಯಲಿದ್ದು, ನಾವು ಒಟ್ಟಾಗಿ ರಾಜ್ಯದ ಜನರ ಸೇವೆ ಮುಂದುವರಿಸುತ್ತೇವೆ. ಕೇವಲ ಕಾಂಗ್ರೆಸ್ ಪಕ್ಷ ಮಾತ್ರವಲ್ಲ ಇಡೀ ಇಂಡಿಯಾ ಒಕ್ಕೂಟ ನಮ್ಮ ಮುಖ್ಯಮಂತ್ರಿಗಳ ಬೆನ್ನಿಗೆ ನಿಲ್ಲಲಿದೆ. ಮುಖ್ಯಮಂತ್ರಿಗಳ ವಿರುದ್ಧ ಸುಳ್ಳು ಪ್ರಕರಣ ಸೃಷ್ಟಿಸಲಾಗಿದೆ. ಹೀಗಾಗಿ ಕಾನೂನು ಚೌಕಟ್ಟಿನಲ್ಲಿ ಹೋರಾಟ ಮುಂದುವರಿಸುತ್ತೇವೆ. ಇದರ ಜತೆಗೆ ರಾಜಕೀಯವಾಗಿಯೂ ಜನರ ಮಧ್ಯೆ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು. ರಾಜ್ಯಪಾಲರ ಕಚೇರಿಯನ್ನು ಬಿಜೆಪಿ ಕಚೇರಿಯಾಗಿ ಪರಿವರ್ತನೆ ಮಾಡಿಕೊಳ್ಳಲು ನಡೆಯುತ್ತಿರುವ ಹುನ್ನಾರದ ವಿರುದ್ಧ ಹೋರಾಟ ಮಾಡುತ್ತೇವೆ. ಪ್ರಜಾಪ್ರಭುತ್ವ ಹಾಗೂ ಸಂವಿಧಾನ ರಕ್ಷಣೆ ಮಾಡಬೇಕಿದೆ. ಮುಖ್ಯಮಂತ್ರಿಗಳ ವಿರುದ್ಧ ಕಾನೂನು ಬಾಹಿರವಾಗಿ ವಿಚಾರಣೆಗೆ ಅನುಮತಿ ನೀಡಲಾಗಿದೆ. ನಾವು ಕಾನೂನು ಗೌರವಿಸುತ್ತೇವೆ. ದೇಶದ ಕಾನೂನು ನಮಗೆ ರಕ್ಷಣೆ ನೀಡಲಿದೆ ಎಂಬ ವಿಶ್ವಾಸವಿದೆ. ನ್ಯಾಯ ಪೀಠದಿಂದ ಅನ್ಯಾಯ ಆಗುವುದಿಲ್ಲ ಎಂಬ ನಂಬಿಕೆ ಇದೆ. ಹೀಗಾಗಿ ಕಾನೂನು ಸಮರಕ್ಕೆ ನಾವು ಸಜ್ಜಾಗಿದ್ದೇವೆ ಎಂದು ತಿಳಿಸಿದರು. ಹಲವು ಬಾರಿ ಇಂತಹ ಪ್ರಕರಣಗಳಲ್ಲಿ ರಾಜ್ಯಪಾಲರು ಯಾವ ರೀತಿ ನಡೆದುಕೊಳ್ಳಬೇಕು ಎಂದು ನ್ಯಾಯಾಲಯಗಳಲ್ಲಿ ಮಾರ್ಗದರ್ಶನ ನೀಡಲಾಗಿದೆ. ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು, ಜಾರ್ಖಂಡ್, ತೆಲಂಗಾಣ, ಪಂಜಾಬ್ ಸೇರಿದಂತೆ ಬೇರೆ ಬೇರೆ ರಾಜ್ಯಗಳಲ್ಲಿನ ಪ್ರಕರಣಗಳು ಇದಕ್ಕೆ ಉದಾಹರಣೆಗಳಾಗಿವೆ ಎಂದರು.

**ಐತಿಹಾಸಿಕ ಯೋಜನೆಗಳನ್ನು ಜಾರಿ**

**ಹಿಂದುಳಿದ ವರ್ಗದ ನಾಯಕ ರಾಜ್ಯದಲ್ಲಿ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಿ ಬೆಳೆಯುತ್ತಿರುವುದನ್ನು ಸಹಿಸಲಾಗದೇ ಕೇಂದ್ರ, ಬಿಜೆಪಿ ಸರ್ಕಾರ ದೊಡ್ಡ ಪಿತೂರಿ ನಡೆಸಿದೆ. ಇದನ್ನು ಧಿಕ್ಕರಿಸಿ ನಾವು ಹೋರಾಟ ಮಾಡುತ್ತೇವೆ. ರಾಜ್ಯಪಾಲರ ಕಚೇರಿ ಬಿಜೆಪಿ ಪಕ್ಷದ ಕೈಗೊಂಬೆಯಾಗಬಾರದು. ನಮ್ಮ ಸರ್ಕಾರ ಪ್ರತಿ ವರ್ಷ 56 ಸಾವಿರ ಕೋಟಿ ಹಣವನ್ನು ಬಡವರಿಗಾಗಿ ಹಂಚುತ್ತಿದೆ. ಇಂತಹ ಐತಿಹಾಸಿಕ ಯೋಜನೆಗಳನ್ನು ಜಾರಿಗೆ ತಂದಿರುವ ಸರ್ಕಾರದ ವಿರುದ್ಧ ಈ ಷಡ್ಯಂತ್ರ ನಡೆಸಲಾಗುತ್ತಿದೆ. ಈ ಸರ್ಕಾರ ತೆಗೆಯುವ ಹುನ್ನಾರ ನಡೆಯುತ್ತಿದ್ದು, ಇದು ಯಾವುದೇ ಕಾರಣಕ್ಕೂ ಸಾಧ್ಯವಿಲ್ಲ ಎಂದು ಕಿಡಿಕಾರಿದರು.**

### ಜನರು ಆರಿಸಿರುವ ಸರ್ಕಾರಕ್ಕೆ ಮನ್ನಣೆ

**ರಾಜ್ಯಪಾಲರು ಸಂವಿಧಾನ ವಿರೋಧಿ ಹಾಗೂ ಪ್ರಜಾಪ್ರಭುತ್ವಕ್ಕೆ ಮಾರಕವಾದಿ ತೀರ್ಮಾನ ಮಾಡಿದ್ದಾರೆ. 26-7-2024ರಂದು ರಾಜ್ಯಪಾಲರು ನೀಡಿದ ನೋಟೀಸ್ ಗೆ ನಾವು 1-8-2024 ರಂದು ವಿವರವಾದ ಉತ್ತರ ನೀಡಿದ್ದೆವು. ಅಲ್ಲದೆ ಸಚಿವ ಸಂಪುಟ ಸಭೆ ಮಾಡಿ ದ್ವೇಷದ ಪಿತೂರಿಯ ಈ ದೂರನ್ನು ತಿರಸ್ಕರಿಸುವಂತೆ ಮನವಿ ಮಾಡಿದ್ದೆವು. ಈ ಪ್ರಕರಣದ ಮೂರು ದೂರಿನಲ್ಲಿಯೂ ತಿರುಳಿಲ್ಲ. ಸಂವಿಧಾನ ಹಾಗೂ ಕಾನೂನಿನಲ್ಲಿರುವ ಅಂಶವನ್ನು ವಿವರಿಸಿ ಇದು ರಾಜಕೀಯ ಪ್ರೇರಿತ ದೂರು, ಇದನ್ನು ಪರಿಗಣಿಸಬೇಡಿ. ಜನರು ಆರಿಸಿರುವ ಸರ್ಕಾರಕ್ಕೆ ಮನ್ನಣೆ ಸಿಗಬೇಕು. ನಮ್ಮ ಮುಖ್ಯಮಂತ್ರಿಗಳು ಅಧಿಕಾರ ದುರುಪಯೋಗ ಮಾಡಿಲ್ಲ, ಯಾವುದೇ ಲೋಪದೋಷ ಆಗಿಲ್ಲ ಎಂದು ಸ್ಪಷ್ಟವಾಗಿ ರಾಜ್ಯಪಾಲರಿಗೆ ಹಾಗೂ ಜನರಿಗೆ ತಿಳಿಸಿದ್ದೇವೆ ಎಂದು ತಿಳಿಸಿದರು.**

# ಭಾರತದ ರಾಯಭಾರಿ, ರಾಜ್ಯಪಾಲರಾಗಿದ್ದ ವಿಜಯಲಕ್ಷ್ಮಿ ಪಂಡಿತ್ ರವರ 124ನೇ ವರ್ಷದ ಜನ್ಮಜಯಂತಿ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ


ಉದಯವಾಹಿನಿ ಚಿತ್ರ

**ಗಾಂಧೀಜಿ ಅವರಿಂದ ಪ್ರಾರಂಭ**

ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು 1900 ಆಗಸ್ಟ್ 18 ರಂದು ಪ್ರಯಾಗಂಜ್ ಎಂಬಲ್ಲಿ ಜನಿಸಿದರು. ತಂದೆ ಮೋತಿಲಾಲ್ ನೆಹರು, ತಾಯಿ ಸ್ವರೂಪರಾಣಿ, ಅಣ್ಣ ಜವಾಹರ್ಲಾಲ್ ನೆಹರು. ತಂದೆಯ ಆಶ್ರಯದಲ್ಲಿ ಗುಣಮಟ್ಟದ ಶಿಕ್ಷಣ ಪಡೆದು ಬಾಲ್ಯದಿಂದಲೇ ಸ್ವಾತಂತ್ರ್ಯ ಹೋರಾಟದಲ್ಲಿ ಆಸಕ್ತಿಯನ್ನು ಮೂಡಿಸಿ ಕೊಂಡು ಸ್ವಾತಂತ್ರ್ಯ ಚಳುವಳಿಗೆ ಧುಮುಕಿ ದರು. ಅನೇಕಸಲ ಸೆರೆಮನೆ ವಾಸವನ್ನು ಅನುಭವಿಸಿದರು. ದೇಶಪ್ರೇಮಿ ವಿದ್ವಾಂಸ ಸೀತಾರಾಮ್ ಪಂಡಿತ್ ರವರೊಂದಿಗೆ ವಿವಾಹವಾಗಿ, ನಯನ ಸಹಗಲ್ ಎಂಬ ಮಗಳು. 1930 ರಲ್ಲಿ ನಡೆದ ಅಸಹಕಾರ ಚಳುವಳಿಯಲ್ಲಿ ವಿಜಯಲಕ್ಷ್ಮಿ ಪಂಡಿತ್ ಅವರು ಭಾಗವಹಿಸಿದ್ದರು. ಗಾಂಧೀಜಿ ಅವರಿಂದ ಪ್ರಾರಂಭವಾದ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಭಾಗವಹಿಸಿ ನಾಡಿನ ಸ್ವಾತಂತ್ರ್ಯಕ್ಕಾಗಿ ತಮ್ಮ ಕಾಣಿಕೆ ಸಲ್ಲಿಸಿದರು. ಸ್ವಾತಂತ್ರ್ಯಪೂರ್ವ 1937 ರಲ್ಲಿ ಪ್ರಾಂತ ಮಟ್ಟದಲ್ಲಿ ಸರ್ಕಾರ ರಚಿಸಿದಾಗ ವಿಜಯಲಕ್ಷ್ಮಿ ಪಂಡಿತ್ ರವರು ಸಂಯುಕ್ತ ಪ್ರಾಂತದ ಸಾರ್ವಜನಿಕ ಆರೋಗ್ಯ ಮತ್ತು ಸ್ಥಳೀಯ ಸ್ವಯಂ ಆಡಳಿತ ಖಾತೆಯ ಮಂತ್ರಿಯಾಗಿದ್ದರು. ಭಾರತಕ್ಕೆ ಸ್ವಾತಂತ್ರ್ಯ ಬಂದ ಮೇಲೆ ಇವರು ಅನೇಕ ಉನ್ನತ ಹುದ್ದೆಗಳನ್ನು ನಿರ್ವಹಿಸಿದರು. ಇಂಗ್ಲೆಂಡಿನಲ್ಲಿ ಭಾರತದ ಪ್ರಥಮ ಹೈಕಮಿಷನರ್ ಆಗಿ ನೇಮಕಗೊಂಡರು. ಬಳಿಕ ವಿಶ್ವಸಂಸ್ಥೆಯಲ್ಲಿ ಹಲವು ವರ್ಷಗಳ ಕಾಲ ಭಾರತದ ಪ್ರತಿನಿಧಿಯಾಗಿದ್ದರು.

ಹಾಗೂ ವಿಶ್ವಸಂಸ್ಥೆಯ ಮಹಾಸಭೆಯ ಅಧ್ಯಕ್ಷರಾಗಿದ್ದರು. ರಷ್ಯಾ ,ಅಮೆರಿಕ ಮತ್ತು ಮೆಕ್ಸಿಕೋ ದೇಶಗಳಲ್ಲಿ ಭಾರತದ ರಾಯಭಾರಿಯಾಗಿದ್ದರು. ಅತ್ಯಂತ ದಕ್ಷತೆ ಮತ್ತು ಸಾಮರ್ಥ್ಯದಿಂದ ಗುರುತರವಾದ ಹೊಣೆಗಾರಿಕೆಯನ್ನು ನಿರ್ವಹಿಸಿದ ಕೀರ್ತಿ ಅವರದು. 1962-1964 ಈ ಅವಧಿಯಲ್ಲಿ ಮಹಾರಾಷ್ಟ್ರದಲ್ಲಿ ಗೌರ್ನರ್ ಆಗಿದ್ದರು. ಅಖಿಲ ಭಾರತ ಮಹಿಳಾ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಅಂತರಾಷ್ಟ್ರೀಯ ಶಾಂತಿ ಮತ್ತು ಸ್ವಾತಂತ್ರ್ಯ ಸಾಧನೆಗಾಗಿ ಸ್ಥಾಪಿತವಾದ ಮಹಿಳಾ ಸಂಘದ ಉಪಾಧ್ಯಕ್ಷರಾಗಿದ್ದರು.

1945 ರಲ್ಲಿ ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ವಿಶ್ವಸಂಸ್ಥೆಯ ಸ್ಥಾಪನೆಗಾಗಿ ಸಮ್ಮೇಳನ ನಡೆದಾಗ ಭಾರತದ ಪ್ರತಿನಿಧಿಯಾಗಿ ವಿಜಯಲಕ್ಷ್ಮಿ ಪಂಡಿತ್ ಅವರು ಭಾಗವಹಿಸಿದ್ದರು.

ಪ್ರಜಾಪ್ರಭುತ್ವದ ಹಿತರಕ್ಷಣೆಗಾಗಿ ಸರ್ವಾಧಿಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದೇವೆ ಎನ್ನುವ ಬ್ರಿಟನ್ನಿಗೆ ಭಾರತವನ್ನು ದಾಸ್ಯದಲ್ಲಿಡಲು ಏನು ಅಧಿಕಾರ ಎಂದು ಭಾಷಣ ಮಾಡಿದ ಧೀರ ಮಹಿಳೆ. ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು ಲೇಖಕಿಯೂ ಆಗಿದ್ದು, ಮಂತ್ರಿಯಾಗಿದ್ದಾಗ ತನ್ನ ಅನುಭವಗಳನ್ನು ನಾನೂ ಮಂತ್ರಿಯಾದೆ ಎಂಬ ಕೃತಿಯನ್ನು ಸರಳ ಸುಂದರವಾಗಿ ಚಿತ್ರಿಸಿದ್ದಾರೆ.

ಶ್ರೀಮತಿ ವಿಜಯಲಕ್ಷ್ಮಿ ಪಂಡಿತ್ ರವರು ವಯೋಸಹಜದ ಮೇರೆಗೆ 1990 ಡಿಸೆಂಬರ್ 01 ರಂದು ತನ್ನ 90ನೇ ವಯಸ್ಸಿನಲ್ಲಿ ತೀರಿಕೊಂಡರು. ಇಂದು ಅವರ 124 ನೇ ವರ್ಷದ ಜನ್ಮಜಯಂತಿ ದಿನದಂದು ಅವರನ್ನು ಸ್ಮರಿಸಿ,ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಭಾರತೀಯರಾದ ನಾವೆಲ್ಲರೂ ಆ ಭಗವಂತನಲ್ಲಿ ಪ್ರಾರ್ಥಿಸೋಣ.

# ಸ್ಟೈಲ್ ಗುರು ರಕ್ಷಿತ್‌ಗೆ ಅಮೃತಾ ನಾಯಕಿ

**ಪ್ರೇಮ್ ಪುತ್ರಿ 2ನೇ ಸಿನಿಮಾ**

ಟಗರು ಪಲ್ಯ ಸಿನಿಮಾ ಮೂಲಕ ಕನ್ನಡ ಚಿತ್ರರಂಗಕ್ಕೆ ಬಲಗಾಲಿಟ್ಟಿದ್ದ ಲವ್ಲಿಸ್ಟಾರ್ ಪ್ರೇಮ್ ಮುದ್ದಿನ ಗೊಂಬೆ ಅಮೃತಾ ಪ್ರೇಮ್. ಚೊಚ್ಚಲ ಚಿತ್ರದಲ್ಲಿಯೇ ಭರವಸೆ ಮೂಡಿಸಿದ್ದ ಈ ಸೂರ್ಯಕಾಂತಿ ಮುಂದಿನ ಸಿನಿಮಾ ಯಾವುದು ಎಂದು ಸಿನಿಮಾ ಪ್ರೇಮಿಗಳು ಎದುರು ನೋಡುತ್ತಿದ್ದರು. ಈಗ ಅದಕ್ಕೆ ಉತ್ತರ ಸಿಕ್ಕಿದೆ. ಅಮೃತಾ ಮತ್ತೊಂದು ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ಅಳೆದು ತೂಗಿ ಕಥೆ ಆಯ್ಕೆ ಮಾಡಿಕೊಂಡು ನಿರ್ದೇಶಕ ಮಹೇಶ್ ಬಾಬು ಚಿತ್ರದಲ್ಲಿ ನಾಯಕಿಯಾಗಿ ನಟಿಸಲು ಸಮ್ಮತಿ ಸೂಚಿಸಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ಸುಸಂದರ್ಭದಲ್ಲಿ ಚಿತ್ರತಂಡ ಅಮೃತಾ ಪ್ರೇಮ್ ಅವರನ್ನು ಸ್ವಾಗತಿಸಿದೆ. ಸ್ಟೈಲ್ ಗುರು ರಕ್ಷಿತ್‌ಗೆ ಜೋಡಿಯಾಗಿ ಅಮೃತಾ ಸಾಥ್ ಕೊಡುತ್ತಿದ್ದಾರೆ. ನಿರ್ದೇಶಕ ಮಹೇಶ್ ಬಾಬು ಸಾರಥ್ಯದಲ್ಲಿ ನಡೆದ 15 ದಿನಗಳ ವರ್ಕ್ ಶಾಪ್ ನಲ್ಲಿ ನಾಯಕ ರಕ್ಷಿತ್, ನಾಯಕಿ ಅಮೃತಾ ಪ್ರೇಮ್ ಸೇರಿದಂತೆ ಇಡೀ ತಂಡ ಭಾಗಿಯಾಗಿದೆ. ಇನ್ನೂ ಅಮೃತಾ ಪ್ರೇಮ್ ತಮ್ಮ ಪಾತ್ರಕ್ಕೆ ಬೇಕಾದ ಕಸರತ್ತಿನೊಂದಿಗೆ ಶೀಘ್ರದಲ್ಲಿಯೇ ಚಿತ್ರತಂಡ ಸೇರಿಕೊಳ್ಳಲಿದ್ದಾರೆ.

ಅಮೃತಾ ಪ್ರೇಮ್ ನಾಯಕಿಯಾಗಿ ಅಭಿನಯಿಸಿದ್ದ ಟಗರು ಪಲ್ಯ ಸಿನಿಮಾ ವಿಶೇಷವಾಗಿಯೇ ಇತ್ತು. ಹಳ್ಳಿ ಹುಡುಗಿಯಾಗಿಯೆ ಅಮೃತಾ ಪ್ರೇಮ್ ತುಂಬಾನೆ ಹೆಚ್ಚು ಗಮನ ಸೆಳೆದಿದ್ದರು. ಮೊದಲ ಚಿತ್ರದಲ್ಲಿಯೇ ದೊಡ್ಡ ಕಲಾವಿದರ ಮುಂದೆ ಅಭಿನಯಿಸಿ ಸೈ ಎನಿಸಿಕೊಂಡಿದ್ದರು. ಚಿತ್ರದ ಮೂಲಕವೇ ಸೌತ್ ಫಿಲ್ಮಂ ಫೇರ್ ಪ್ರಶಸ್ತಿಯನ್ನ ಪಡೆದುಕೊಂಡಿದ್ದಾರೆ. ದಕ್ಷಿಣದ ವಿವಿಧ ಭಾಷೆಯ ಸಿನಿಮಾಗಳಿಗೆ ವಿವಿಧ ವಿಭಾಗದಲ್ಲಿಯೇ ಪ್ರಶಸ್ತಿಯನ್ನ ಕೊಡಲಾಗುತ್ತದೆ. ಆ ರೀತಿ ಕನ್ನಡದ ಟಗರು ಪಲ್ಯದ ಚಿತ್ರದಲ್ಲಿ ನಟಿಸಿರೋ ನಟಿ ಅಮೃತಾ ಪ್ರೇಮ್, ಅತ್ಯುತ್ತಮ ಡೆಬ್ಯು ಪ್ರಶಸ್ತಿ ಪಡೆದುಕೊಂಡಿದ್ದಾರೆ. ಕಿರುಚಿತ್ರ, ಧಾರಾವಾಹಿ, ರಿಯಾಲಿಟಿ ಶೋ ಅಂತಿದ್ದ ಸ್ಟೈಲ್ ಗುರು ರಕ್ಷಿತ್ ನಾಯಕನಾಗಿ ಇಂಡಸ್ಟ್ರಿಗೆ ಮೊದಲ ಹೆಜ್ಜೆ ಇಡುತ್ತಿದ್ದಾರೆ. ಇವರ ಚೊಚ್ಚಲ ಸಿನಿಮಾಗೆ 'ಆಕಾಶ್', 'ಅರಸು' ಅಂತಹ ಬ್ಲಾಕ್ ಬಸ್ಟರ್ ಸಿನಿಮಾಗಳನ್ನು ನೀಡಿರುವ ಮಹೇಶ್ ಬಾಬು ಆಕ್ಷನ್ ಕಟ್ ಹೇಳುತ್ತಿದ್ದಾರೆ.

ಕನ್ನಡ ಚಿತ್ರರಂಗಕ್ಕೆ ಸದಭಿರುಚಿಯ ಸಿನಿಮಾ ಕೊಡಬೇಕು ಎಂಬ ಉದ್ದೇಶದಿಂದ ಎಂಎಂಎಂ ಪಿಕ್ಚರ್ಸ್ ಹಾಗೂ ಎ ಕ್ಲಾಸ್ ಸಿನಿ ಫಿಲ್ಮಂಸ್ ಜಂಟಿಯಾಗಿ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದೆ. ಈ ನಿರ್ಮಾಣ ಸಂಸ್ಥೆಯಡಿ ಅನುರಾಗ್ ಆರ್ ಹಾಗೂ ಮಿಥುನ್ ಕೆ.ಎಸ್ ಸೇರಿ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಅನೂಪ್ ಸೀಳಿನ್ ಸಂಗೀತ ನಿರ್ದೇಶನ ಮಾಡುತ್ತಿದ್ದರೆ, ಸತ್ಯ ಅವರು ಛಾಯಾಗ್ರಹಣ ನಿರ್ವಹಿಸಲಿದ್ದಾರೆ. ಸತೀಶ್ ಚಂದ್ರಯ್ಯ ಅವರ ಸಂಕಲನ ಈ ಚಿತ್ರಕ್ಕಿರಲಿದೆ.



# ರಕ್ಕಸಪುರದೋಳ್ ರಾಜ್ ಬಿ ಶೆಟ್ಟಿ ಆರ್ಭಟ

ಸಾಹಸ ನಿರ್ದೇಶಕರಾಗಿ ಭಾರತದಾದ್ಯಂತ ಜನಪ್ರಿಯರಾಗಿರುವ ಕನ್ನಡದ ಹೆಮ್ಮೆಯ ಸಾಹಸ ನಿರ್ದೇಶಕ ಕೆ.ರವಿವರ್ಮ ಅವರ ಪ್ರಥಮ ನಿರ್ಮಾಣದ, ರವಿ ಸಾರಂಗ ಚೊಚ್ಚಲ ನಿರ್ದೇಶನದ ಹಾಗೂ ತಮ್ಮ ಅಮೋಘ ಅಭಿನಯದ ಮೂಲಕ ಖ್ಯಾತರಾಗಿರುವ ರಾಜ್ ಬಿ ಶೆಟ್ಟಿ ನಾಯಕರಾಗಿ ನಟಿಸುತ್ತಿರುವ 'ರಕ್ಕಸಪುರದೋಳ್' ಚಿತ್ರದ ಮುಹೂರ್ತ ಸಮಾರಂಭ ನೆಟಕಲ್ಲಪ್ಪ ಸರ್ಕಲ್ ನಲ್ಲಿರುವ ವರಸಿದ್ಧಿ ವಿನಾಯಕ ದೇವಸ್ಥಾನದಲ್ಲಿ ವರಮಹಾಲಕ್ಷ್ಮೀ ಹಬ್ಬದಂದು ಅದ್ದೂರಿಯಾಗಿ ನೆರವೇರಿತು. ನಟಿ ರಕ್ಷಿತ ಹಾಗೂ ನಿರ್ದೇಶಕ ಪ್ರೇಮ್ ಚಿತ್ರದ ಮೊದಲ ಸನ್ನಿವೇಶಕ್ಕೆ ಚಾಲನೆ ನೀಡಿ, ಶೀರ್ಷಿಕೆ ಅನಾವರಣ ಮಾಡಿದರು. ಕೆ.ವಿ.ಎನ್ ಸಂಸ್ಥೆಯ ಸುಪ್ರೀತ್ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಸಾಹಸ ನಿರ್ದೇಶಕರಾಗಿ ಜನಪ್ರಿರಾಗಿರುವ ರವಿವರ್ಮ ಅವರು ಈ ಚಿತ್ರದ ಮೂಲಕ ನಿರ್ಮಾಪಕರಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ದಿ ವಿಲನ್, ಏಕ್ ಲವ್ ಯಾ, ಕೆಡಿ ಮುಂತಾದ ಚಿತ್ರಗಳಿಗೆ ಅಸಿಸ್ಟೆಂಟ್ ಡೈರೆಕ್ಟರ್ ಆಗಿದ್ದ ರವಿ ಸಾರಂಗ ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗುತ್ತಿದ್ದಾರೆ.

ಜನಪ್ರಿಯ ನಟ ರಾಜ್ ಬಿ ಶೆಟ್ಟಿ ನಾಯಕರಾಗಿ ನಟಿಸುತ್ತಿದ್ದಾರೆ. ರಕ್ಕಸಪುರದೋಳ್ ಚಿತ್ರ ಚಂದನವನದಲ್ಲಿ ಭರ್ಜರಿ ಯಶಸ್ಸು ಕಾಣಲಿ ಎಂದು ರಕ್ಷಿತ ಪ್ರೇಮ್ ದಂಪತಿ ಹಾರೈಸಿದರು.





# ಸೆಟ್ಟೇರಿತು ತೀರ್ಥರೂಪ ತಂದೆಯವರಿಗೆ

ಹೊಂದಿಸಿ ಬರೆಯಿರಿ ಸಿನಿಮಾ ಮೂಲಕ ಬದುಕು ಬಂದಂತೆ ಸ್ವೀಕರಿಸಿ ಎಂಬ ಸ್ವೀಟ್ ಸಂದೇಶ ಕೊಟ್ಟು ಫ್ಯಾಮಿಲಿ ಪ್ರೇಕ್ಷಕ ಪ್ರಭುವಿನಿಂದ ಚಪ್ಪಾಳೆ ಪಡೆದಿದ್ದ ರಾಮೇನಹಳ್ಳಿ ಜಗನ್ನಾಥ ಈಗ ಮತ್ತೊಂದು ಸಿನಿಮಾ ಕೈಗೆತ್ತಿಕೊಂಡಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ದಿನವಾದ ಇಂದು ಬೆಂಗಳೂರಿನ ಬಂಡೆ ಮಹಾಕಾಳಿ ದೇಗುಲದಲ್ಲಿ ಚಿತ್ರ ಸೆಟ್ಟೇರಿದೆ. ನಿರ್ದೇಶಕ ರಾಮೇನಹಳ್ಳಿ ಜಗನ್ನಾಥ ಅವರ ಪುತ್ರಿ ಸಿನಿಮಾಗೆ ಕ್ಲ್ಯಾಪ್ ಮಾಡಿದರೆ, ನವೀನ್ ಶಂಕರ್ ಹಾಗೂ ಅರ್ಚನಾ ಜೋಯಿಸ್ ಕ್ಯಾಮೆರಾಗೆ ಚಾಲನೆ ನೀಡಿದರು. ಜಗನ್ನಾಥ ಅವರ ಹೊಸ ಪ್ರಯತ್ನಕ್ಕೆ ತೀರ್ಥರೂಪ ತಂದೆಯವರಿಗೆ ಎಂಬ ಆಕರ್ಷಕ ಟೈಟಲ್ ಇಡಲಾಗಿದೆ.

ತೆಲುಗಿನಲ್ಲಿ ಗುಪ್ಪೆಡಂತ ಮನಸು ಸೀರಿಯಲ್ ಮೂಲಕ ಕಿರುತೆರೆ ಪ್ರೇಕ್ಷಕರ ಪ್ರೀತಿ ಪಡೆದಿರುವ ನಿಹಾರ್ ಮುಖೇಶ್ ತೀರ್ಥರೂಪ ತಂದೆಯವರಿಗೆ ಸಿನಿಮಾ ಮೂಲಕ ನಾಯಕನಾಗಿ ಕನ್ನಡ ಪ್ರೇಕ್ಷಕರ ಎದುರು ಬರುತ್ತಿದ್ದಾರೆ. ಸದ್ಯ ಮುಖೇಶ್ ಹೀರೋ ಆಗಿ ಬಣ್ಣ ಹಚ್ಚಿರುವ ಗೀತಾ ಶಂಕರಂ ಸಿನಿಮಾ ಬಿಡುಗಡೆ ಹೊಸ್ತಿಲಿನಲ್ಲಿದೆ. ಇದರ ಬೆನ್ನಲ್ಲೇ ನಿಹಾರ್ ಮುಖೇಶ್ ತೀರ್ಥರೂಪ ತಂದೆಯವರಿಗೆ ಚಿತ್ರಕ್ಕೆ ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ. ಕನ್ನಡ ಹಾಗೂ ತೆಲುಗು ಎರಡು ಭಾಷೆಯಲ್ಲಿ ಚಿತ್ರ ಮೂಡಿ ಬರುತ್ತಿದೆ. ತೆಲುಗಿನಲ್ಲಿ ಪ್ರಿಯಮೈನ ನಾನ್ನಕು ಎಂಬ ಶೀರ್ಷಿಕೆ ಇಡಲಾಗಿದೆ. ಜೈ ಚಾಮುಂಡೇಶ್ವರಿ ಪ್ರೊಡಕ್ಷನ್ಸ್ ನಡಿ ತೀರ್ಥರೂಪ ತಂದೆಯವರಿಗೆ ಸಿನಿಮಾ ನಿರ್ಮಾಣವಾಗುತ್ತಿದ್ದು, ರಾಮೇನಹಳ್ಳಿ ಜಗನ್ನಾಥ ಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಹೊಂದಿಸಿ ಬರೆಯಿರಿ ಚಿತ್ರ ನಿರ್ಮಾಣ ಮಾಡಿದ್ದ ಸಂಡೇ ಸಿನಿಮಾಸ್ ಈ ಸಿನಿಮಾವನ್ನು ಪ್ರೆಸೆಂಟ್ ಮಾಡುತ್ತಿದೆ. ಬ್ಲಿಂಕ್ ಸಿನಿಮಾ ಖ್ಯಾತಿಯ ರವಿಚಂದ್ರ ಎ.ಜೆ ತೀರ್ಥರೂಪ ತಂದೆಯವರಿಗೆ ಚಿತ್ರಕ್ಕೆ ಎಕ್ಸಿಕ್ಯುಟಿವ್ ಪ್ರೊಡ್ಯೂಸರ್ ಆಗಿ ಸಾಥ್ ಕೊಟ್ಟಿದ್ದಾರೆ. ಕೌಟುಂಬಿಕ ಹಿನ್ನೆಲೆ ಕಥೆಯುಳ್ಳ ಸಿನಿಮಾಗೆ ದೀಪಕ್ ಯರಗೇರಾ ಛಾಯಾಗ್ರಹಣ, ಪ್ರಶಾಂತ್ ರಾಜಪ್ಪ ಸಂಭಾಷಣೆ ಇರಲಿದೆ.



# ತೆರೆಯ ಮೇಲೆ ಮಂಕುತಿಮ್ಮನ ಕಗ್ಗ

ಹೆಸರಾಂತ ಸಾಹಿತಿ ಡಿ.ವಿ.ಗುಂಡಪ್ಪ ಅವರ ಜನಪ್ರಿಯ ಪದ್ಯ ಪುಸ್ತಕ ''ಮಂಕುತಿಮ್ಮನ ಕಗ್ಗ''. ಕನ್ನಡದಲ್ಲಿ ಈಗಾಗಲೇ ಕೆಲವು ಜನಪ್ರಿಯ ಚಿತ್ರಗಳನ್ನು ನಿರ್ದೇಶಿಸಿರುವ ರಾಜ ರವಿಶಂಕರ್ (ವಿ.ರವಿ), ಡಿ.ವಿ.ಜಿ ಅವರ ''ಮಂಕುತಿಮ್ಮನ ಕಗ್ಗ''ವನ್ನು ಚಿತ್ರದ ಮೂಲಕ ತೆರೆಗೆ ತರುತ್ತಿದ್ದಾರೆ. ಎನ್ ಎ ಶಿವಕುಮಾರ್ ಅವರು ನಿರ್ಮಿಸಿರುವ ಹಾಗೂ ಮೀನಾ ಶಿವಕುಮಾರ್ ಸಹ ನಿರ್ಮಾಣವಿರುವ ಈ ಚಿತ್ರದ ''ಸ್ವಾಮಿದೇವನೇ'' ಹಾಡು ವರಮಹಾಲಕ್ಷ್ಮೀ ಹಬ್ಬದಂದು ಬಿಡುಗಡೆಯಾಗಿದೆ. ಹಲವು ವರ್ಷಗಳ ಹಿಂದೆ ಸೋಸಲೆ ಅಯ್ಯ ಶಾಸ್ತ್ರಿಗಳು ಬರೆದಿದ್ದ ಈ ಗೀತೆಯನ್ನು ''ಮಂಕುತಿಮ್ಮನ ಕಗ್ಗ'' ಚಿತ್ರದಲ್ಲಿ ಬಳಸಿಕೊಳ್ಳಲಾಗಿದೆ. ಎ.ಟಿ.ರವೀಶ್ ಸಂಗೀತ ನಿರ್ದೇಶನ ಮಾಡಿದ್ದಾರೆ. ಈ ಚಿತ್ರದಲ್ಲಿ ಡಿ.ವಿ.ಜಿ ಅವರ ಬಾಲ್ಯದ ದಿನಗಳ ಬಗ್ಗೆ ತೋರಿಸಲಾಗಿದೆ. ತಿಮ್ಮಣ್ಣ ಮೇಷ್ಟ್ರು ಪಾತ್ರದಲ್ಲಿ ಹಿರಿಯ ನಟ ರಾಮಕೃಷ್ಣ, ಬಾಲಕ ಸೋಮಿ(ಡಿ.ವಿ.ಜಿ) ಅವರ ಪಾತ್ರದಲ್ಲಿ ಮಾಸ್ಟರ್ ರಣವೀರ್, ಅಲಮೇಲು ಪಾತ್ರದಲ್ಲಿ ಭವ್ಯಶ್ರೀ ರೈ, ವೆಂಕರಮಣಯ್ಯ ಪಾತ್ರದಲ್ಲಿ ರವಿನಾರಾಯಣ್ ಹಾಗೂ ಅಜ್ಜಿಯ ಪಾತ್ರದಲ್ಲಿ ಲಕ್ಷ್ಮೀ ನಾಡಗೌಡ ಅಭಿನಯಿಸಿದ್ದಾರೆ. ಸಾಯಿಪ್ರಕಾಶ್, ನರಸೇಗೌಡ, ಶ್ರೀನಿವಾಸ್ ಕೆಮ್ತೂರ್ ಮುಂತಾದವರು ತಾರಾಬಳಗದಲ್ಲಿದ್ದಾರೆ. ಕಥೆ ವಿಸ್ತರಣೆ, ಚಿತ್ರಕಥೆ ಹಾಗೂ ಸಂಭಾಷಣೆ ನಿರ್ದೇಶಕ ರಾಜ ರವಿಶಂಕರ್ ಅವರದು.




# ನಾಗಭೂಷಣ್ ಬರ್ತಡೇಗೆ ಡಾಲಿ ತಂಡದ ಸ್ಪೆಷಲ್ ಗಿಫ್ಟ್

ಡಾಲಿ ಪಿಕ್ಚರ್ಸ್ ಕನ್ನಡ ಚಿತ್ರಪ್ರೇಮಿಗಳಿಗೆ ಸದಾಭಿರುಚಿ ಸಿನಿಮಾಗಳನ್ನು ಉಣಬಡಿಸುತ್ತಿದೆ. ಕಳೆದ ವರ್ಷ ಟಗರು ಪಲ್ಯದಂತಹ ಫ್ಯಾಮಿಲಿ ಕಥೆಯನ್ನು ಪ್ರೇಕ್ಷಕರಿಗೆ ನೀಡಿದ್ದ ಈ ಸಂಸ್ಥೆ ಈಗ ವಿದ್ಯಾಪತಿ ಎಂಬ ಹೊಸ ಚಿತ್ರವನ್ನು ನಿರ್ಮಾಣ ಮಾಡುತ್ತಿದೆ. ವಿದ್ಯಾಪತಿಯ ಮೇಕಿಂಗ್, ಫೋಟೋಗಳು ಈಗಾಗಲೇ ನಿರೀಕ್ಷೆ ಹೆಚ್ಚಿಸಿವೆ. ಇದೀಗ ಚಿತ್ರತಂಡ ವಿದ್ಯಾಪತಿಯ ಕಿತಾಪತಿ ಝಲಕ್ ಬಿಟ್ಟು ಮತ್ತಷ್ಟು ಥ್ರಿಲ್ ಹೆಚ್ಚಿಸಿದೆ.

ವಿದ್ಯಾಪತಿಯಾಗಿ ಟಗರು ಪಲ್ಯ ನಾಯಕ ನಾಗಭೂಷಣ್ ಬಣ್ಣ ಹಚ್ಚಿದ್ದಾರೆ. ಅವರ ಹುಟ್ಟುಹಬ್ಬದ ವಿಶೇಷವಾಗಿ ಚಿತ್ರತಂಡ ವಿದ್ಯಾಪತಿ ಚಿತ್ರದ ಪ್ರೋಮೋ ಅನಾವರಣ ಮಾಡಿದೆ.

ಜೇಬು ತುಂಬ ಕಾಸಿರೋನು ಕೊಟ್ಯಾಧಿಪತಿ.. ನಿಮ್ಮನ್ನೆಲ್ಲ ಹೊಟ್ಟೆತುಂಬ ನಗಿಸುವವನೇ ನಮ್ಮ 'ವಿದ್ಯಾಪತಿ' ಅಂತಾ ಹೀರೋನನ್ನು ಪರಿಚಯಿಸಿದೆ. ಕರಾಟೆ ಕಿಂಗ್ ವೇಷ ತೊಟ್ಟಿರುವ ನಾಗಭೂಷಣ್ ಮಾಡುವ ಕಿತಾಪತಿ ತುಣುಕುವೊಂದನ್ನು ಬಿಡುಗಡೆ ಮಾಡಿದೆ. ಕರಾಟೆ ಕಲಿಯುವ ವೇಳೆ ವಿದ್ಯಾಪತಿ ಮಾಡುವ ಯಡವಟ್ಟು ಪ್ರೇಕ್ಷಕರಿಗೆ ಮುಖದ ಮೇಲೆ ಮಂದಹಾಸ ಮೂಡಿಸುತ್ತದೆ.



# ಐರ್ಲೆಂಡ್ ವಿರುದ್ಧ ಸೋತ ಏಷ್ಯನ್ ಚಾಂಪಿಯನ್ ಶ್ರೀಲಂಕಾ

## ಬಲಿಷ್ಠ ಭಾರತ ತಂಡ ಮಣಿಸಿ ಏಷ್ಯಾಕಪ್ ಗೆದ್ದು, ತೆರಳಿದ್ದ ಶ್ರೀಲಂಕಾ ಮಹಿಳಾ ತಂಡಕ್ಕೆ ಸೋಲಿನ ಶಾಕ್

ಐರ್ಲೆಂಡ್ ಮಹಿಳಾ ತಂಡ ಮೊದಲ ಬಾರಿಗೆ ಶ್ರೀಲಂಕಾವನ್ನು ಏಕದಿನದಲ್ಲಿ ಸೋಲಿಸಿದ ದಾಖಲೆ ನಿರ್ಮಿಸಿದೆ. ಅಷ್ಟೇ ಅಲ್ಲ, ಐರ್ಲೆಂಡ್ ತಂಡ ಚೊಚ್ಚಲ ಬಾರಿಗೆ 200ಕ್ಕೂ ಹೆಚ್ಚು ಸ್ಕೋರ್ ಚೇಸ್ ಮಾಡಿದೆ. ಹಾಗೆಯೇ ಈ ಪಂದ್ಯದಲ್ಲಿ ಶತಕ ಸಿಡಿಸಿದ ಓರ್ಲಾ ಪ್ರೆಂಡರ್‌ಗ್ರಾಸ್ಟ್‌ಗೆ ಇದು ಅವರ ವೃತ್ತಿಜೀವನದ ಮೊದಲ ಶತಕವಾಗಿತ್ತು.

ಬಲಿಷ್ಠ ಭಾರತ ಮಹಿಳಾ ತಂಡವನ್ನು ಮಣಿಸಿ ಏಷ್ಯಾಕಪ್ ಗೆದ್ದು, ಐರ್ಲೆಂಡ್ ಪ್ರವಾಸಕ್ಕೆ ತೆರಳಿದ್ದ ಶ್ರೀಲಂಕಾ ಮಹಿಳಾ ತಂಡಕ್ಕೆ ಸೋಲಿನ ಶಾಕ್ ಎದುರಾಗಿದೆ.

ಉಭಯ ತಂಡಗಳ ನಡುವೆ ನಡೆದಿದ್ದ ಟಿ20 ಸರಣಿಯನ್ನು 1-1 ರಿಂದ ಡ್ರಾ ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದ್ದ ಲಂಕಾ ಪಡೆ, ಇದೀಗ ಆರಂಭವಾಗಿರುವ ಏಕದಿನ ಸರಣಿಯ ಮೊದಲ ಪಂದ್ಯದಲ್ಲಿ ಐರ್ಲೆಂಡ್ ವನಿತಾ ಪಡೆಯ ವಿರುದ್ಧ ಹೀನಾಯ ಸೋಲು ಅನುಭವಿಸಿದೆ. ಮೊದಲ ಏಕದಿನ ಪಂದ್ಯದಲ್ಲಿ ಗೆಲುವಿಗೆ 261 ರನ್‌ಗಳ ಬೃಹತ್ ಗುರಿ ಬೆನ್ನಟ್ಟಿದ ಐರ್ಲೆಂಡ್ ವನಿತಾ ಪಡೆ 7 ವಿಕೆಟ್ ಕಳೆದುಕೊಂಡು ಇನ್ನು 5 ಎಸೆತಗಳು ಬಾಕಿ ಇರುವಂತೆಯೇ ಗೆಲುವಿನ ದಡ ಮುಟ್ಟಿತು. ಇದರೊಂದಿಗೆ ಮೂರು ಪಂದ್ಯಗಳ ಏಕದಿನ ಸರಣಿಯಲ್ಲಿ 1-0 ಅಂತರದಿಂದ ಮುನ್ನಡೆ ಕಾಯ್ದುಕೊಂಡಿದೆ.

**ಓರ್ಲಾ ಪ್ರೆಂಡರ್‌ಗಾಸ್ಟ್ ಶತಕದ ಇನ್ನಿಂಗ್ಸ್**

ಶ್ರೀಲಂಕಾ ನೀಡಿದ ಗುರಿ ಬೆನ್ನಟ್ಟಿದ ಐರ್ಲೆಂಡ್ ತಂಡ 20 ರನ್‌ಗಳಿಗೆ ಮೊದಲ ವಿಕೆಟ್ ಕಳೆದುಕೊಂಡಿತು. ಇದರ ನಂತರ, ತಂಡವು ಸ್ಕೋರ್ 69 ರನ್ ಆಗುವಷ್ಟರಲ್ಲಿ ಎರಡನೇ ವಿಕೆಟ್ ಪತನವಾದರೆ, 119 ರನ್ ಆಗುವಷ್ಟರಲ್ಲಿ ಮೂರನೇ ವಿಕೆಟ್ ಪತನವಾಯಿತು. ಇದಾದ ನಂತರ ಬೌಲಿಂಗ್‌ನಲ್ಲಿ ಮಿಂಚಿದ್ದ ಓರ್ಲಾ ಬ್ಯಾಟಿಂಗ್‌ನಲ್ಲೂ ಕಮಾಲ್ ಮಾಡಿದರು. ಒಂದು ತುದಿಯಲ್ಲಿ ನಿಯಮಿತ ಅಂತರದಲ್ಲಿ ಐರ್ಲೆಂಡ್‌ನ ವಿಕೆಟ್ ಬೀಳುತ್ತಲೇ ಇದ್ದರೂ, ಏಕಾಂಗಿ ಹೋರಾಟ ನಡೆಸಿದ ಓರ್ಲಾ ಪ್ರೆಂಡರ್‌ಗಾಸ್ಟ್ ಶತಕದ ಇನ್ನಿಂಗ್ಸ್ ಆಡಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು. ಕೊನೆಯ 3 ಓವರ್‌ಗಳಲ್ಲಿ ಐರ್ಲೆಂಡ್ 30 ರನ್ ಗಳಿಸಬೇಕಿದ್ದು, ಕೈಯಲ್ಲಿ 3 ವಿಕೆಟ್ ಮಾತ್ರ ಉಳಿದಿತ್ತು. ಈ ವೇಳೆ ಸ್ಟ್ರೈಕ್‌ಗೆ ಬಂದ ಓರ್ಲಾ, 2 ಬೌಂಡರಿ ಹಾಗೂ ಒಂದು ಸಿಕ್ಸರ್ ಸಿಡಿಸುವ ಮೂಲಕ ಪಂದ್ಯಕ್ಕೆ ತಿರುವು ನೀಡಿದರು. ಕೊನೆಯ ಓವರ್‌ನ ಎರಡನೇ ಎಸೆತದಲ್ಲಿ ಸಿಂಗಲ್ ಗಳಿಸಿ ತಂಡವನ್ನು ಗೆಲುವಿನತ್ತ ಕೊಂಡೊಯ್ದರು.




**ವಿಶ್ಮಿ ಗುಣರತ್ನೆ ಚೊಚ್ಚಲ ಶತಕ**

**ಪಂದ್ಯದಲ್ಲಿ ಟಾಸ್ ಗೆದ್ದ ಐರ್ಲೆಂಡ್, ಶ್ರೀಲಂಕಾ ತಂಡವನ್ನು ಮೊದಲು ಬ್ಯಾಟಿಂಗ್ ಮಾಡಲು ಆಹ್ವಾನಿಸಿತು. ಅದರಂತೆ ಮೊದಲು ಬ್ಯಾಟಿಂಗ್ ಮಾಡಿದ ಲಂಕಾ ತಂಡ ನಿಗದಿತ 50 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು 260 ರನ್ ಕಲೆಹಾಕಿತು. ತಂಡದ ಪರ ಆರಂಭಿಕ ಆಟಗಾರ್ತಿ ವಿಶ್ಮಿ ಗುಣರತ್ನೆ ಶತಕದ ಇನ್ನಿಂಗ್ಸ್ ಆಡಿದರೆ, ನಾಯಕಿ ಚಾಮರಿ ಅಟಪಟು ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ನಾಲ್ಕನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಇಳಿದ ಹಾಸಿನಿ ಪೆರೇರಾ 46 ರನ್‌ಗಳ ಕಾಣಿಕೆ ನೀಡಿದರೆ, ಉಳಿದವರಿಂದ ಅಲ್ಪ ಪ್ರಮಾಣದ ಇನ್ನಿಂಗ್ಸ್ ಕಂಡುಬಂತು. ಹೀಗಾಗಿ ತಂಡ 260 ರನ್ ಕಲೆಹಾಕಲು ಸಾಧ್ಯವಾಯಿತು. ಐರ್ಲೆಂಡ್ ಪರ ಬೌಲಿಂಗ್‌ನಲ್ಲಿ ಮಿಂಚಿದ ಓರ್ಲಾ ಪ್ರೆಂಡರ್‌ಗಾಸ್ಟ್ 8 ಓವರ್ ಬೌಲ್ ಮಾಡಿ 25 ರನ್ ನೀಡಿ 3 ವಿಕೆಟ್ ಪಡೆದರು.**

**ಲಂಕಾ ವಿರುದ್ಧ ಐರ್ಲೆಂಡ್ ಐತಿಹಾಸಿಕ ಜಯ**

ಈ ಗೆಲುವಿನೊಂದಿಗೆ ಐರ್ಲೆಂಡ್ ಮಹಿಳಾ ತಂಡ ಮೊದಲ ಬಾರಿಗೆ ಶ್ರೀಲಂಕಾವನ್ನು ಏಕದಿನದಲ್ಲಿ ಸೋಲಿಸಿದ ದಾಖಲೆ ನಿರ್ಮಿಸಿದೆ. ಅಷ್ಟೇ ಅಲ್ಲ, ಐರ್ಲೆಂಡ್ ತಂಡ ಚೊಚ್ಚಲ ಬಾರಿಗೆ 200ಕ್ಕೂ ಹೆಚ್ಚು ಸ್ಕೋರ್ ಚೇಸ್ ಮಾಡಿದೆ. ಹಾಗೆಯೇ ಈ ಪಂದ್ಯದಲ್ಲಿ ಶತಕ ಸಿಡಿಸಿದ ಓರ್ಲಾ ಪ್ರೆಂಡರ್‌ಗ್ರಾಸ್ಟ್‌ಗೆ ಇದು ಅವರ ವೃತ್ತಿಜೀವನದ ಮೊದಲ ಶತಕವಾಗಿತ್ತು. ಇದರ ಹೊರತಾಗಿ, ಓರ್ಲಾ ಪ್ರೆಂಡರ್‌ಗ್ರಾಸ್ಟ್ 4ನೇ ಕ್ರಮಾಂಕದಲ್ಲಿ ಅಥವಾ ನಂತರದ ಚೇಸ್‌ನಲ್ಲಿ ಬ್ಯಾಟಿಂಗ್ ಮಾಡುವಾಗ ಅತಿ ಹೆಚ್ಚು ರನ್ ಗಳಿಸಿದ ಎರಡನೇ ಮಹಿಳಾ ಕ್ರಿಕೆಟಿಗರ್ ಎನಿಸಿಕೊಂಡರು.

ಶ್ರೀಲಂಕಾದ ಬ್ಯಾಟ್ಸ್‌ಮನ್ ವಿಶ್ಮಿ ಗುಣರತ್ನೆ ಕೂಡ ತಮ್ಮ ಹೆಸರಿನಲ್ಲಿ ದಾಖಲೆ ಬರೆದಿದ್ದು, ತಮ್ಮ ವೃತ್ತಿಜೀವನದ ಮೊದಲ ಶತಕವನ್ನು ಸಿಡಿಸಿದರು.

98 ಎಸೆತಗಳಲ್ಲಿ 101 ರನ್‌ಗಳ ಅದ್ಭುತ ಇನ್ನಿಂಗ್ಸ್ ಅನ್ನು ಆಡಿದ ಅವರು ಇದರೊಂದಿಗೆ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಶತಕ ಸಿಡಿಸಿದ ಶ್ರೀಲಂಕಾದ ಮೂರನೇ ಮಹಿಳಾ ಬ್ಯಾಟ್ಸ್‌ಮನ್ ಎಂಬ ಹೆಗ್ಗಳಿಕೆಗೆ ಪಾತ್ರರಾದರು.

# ಭಾರತದ ಸಾರ್ವಕಾಲಿಕ ಪ್ಲೇಯಿಂಗ್ || ಹೆಸರಿಸಿದ ಡಿಕೆ

ಟೀಮ್ ಇಂಡಿಯಾದ ಮಾಜಿ ವಿಕೆಟ್ ಕೀಪರ್ ಬ್ಯಾಟರ್ ದಿನೇಶ್ ಕಾರ್ತಿಕ್ ಭಾರತದ ಸಾರ್ವಕಾಲಿಕ ಪ್ಲೇಯಿಂಗ್ ಇಲೆವೆನ್ ಅನ್ನು ಹೆಸರಿಸಿದ್ದಾರೆ. ಆದರೆ ಈ ಪ್ಲೇಯಿಂಗ್ ಇಲೆವೆನ್‌ನಲ್ಲಿ ಟೀಮ್ ಇಂಡಿಯಾದ ಶ್ರೇಷ್ಠ ನಾಯಕ ಮಹೇಂದ್ರ ಸಿಂಗ್ ಧೋನಿಗೆ ಸ್ಥಾನ ನೀಡಲಾಗಿಲ್ಲ ಎಂಬುದು ವಿಶೇಷ.

ಟೀಮ್ ಇಂಡಿಯಾ ಪರ ಧೋನಿ 14 ವರ್ಷಗಳ ಕಾಲ ಆಡಿದ್ದಾರೆ. ಇದೇ ವೇಳೆ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ 15,000 ಕ್ಕೂ ಹೆಚ್ಚು ರನ್ ಕಲೆಹಾಕಿದ್ದಾರೆ. ಇನ್ನು ನಾಯಕನಾಗಿ ಭಾರತಕ್ಕೆ ಮೂರು ಐಸಿಸಿ ಟ್ರೋಫಿ ಗೆದ್ದುಕೊಟ್ಟ (2007ರ ಟಿ20 ವಿಶ್ವಕಪ್, 2011ರ ಏಕದಿನ ವಿಶ್ವಕಪ್, ಮತ್ತು 2013ರ ಚಾಂಪಿಯನ್ಸ್ ಟ್ರೋಫಿ) ಹಿರಿಮೆಯನ್ನು ಸಹ ಹೊಂದಿದ್ದಾರೆ. ಇದಾಗ್ಯೂ, ಡಿಕೆ ತಮ್ಮ ಆಲ್‌ಟೈಮ್ ಪ್ಲೇಯಿಂಗ್ 11 ನಲ್ಲಿ ಧೋನಿಗೆ ಸ್ಥಾನ ನೀಡದಿರುವುದು ಅಚ್ಚರಿ.

ಇನ್ನು ದಿನೇಶ್ ಕಾರ್ತಿಕ್ ಹೆಸರಿಸಿದ ಟೀಮ್ ಇಂಡಿಯಾದ ಸಾರ್ವಕಾಲಿಕ ಪ್ಲೇಯಿಂಗ್ ಇಲೆವೆನ್‌ನಲ್ಲಿ ಆರಂಭಿಕರಾಗಿ ಡ್ಯಾಶಿಂಗ್ ಓಪನರ್‌ಗಳಾದ ವೀರೇಂದ್ರ ಸೆಹ್ವಾಗ್ ಹಾಗೂ ರೋಹಿತ್ ಶರ್ಮಾ ಅವರನ್ನು ಆಯ್ಕೆ ಮಾಡಿದ್ದಾರೆ. 3ನೇ ಕ್ರಮಾಂಕದಲ್ಲಿ ರಾಹುಲ್ ದ್ರಾವಿಡ್ ಇದ್ದರೆ, ಸಚಿನ್ ತೆಂಡೂಲ್ಕರ್ ಅವರನ್ನು 4ನೇ ಕ್ರಮಾಂಕಕ್ಕೆ ಹೆಸರಿಸಿದ್ದಾರೆ. ಇನ್ನು 5ನೇ ಕ್ರಮಾಂಕದಲ್ಲಿ ವಿರಾಟ್ ಕೊಹ್ಲಿ ಕಾಣಿಸಿಕೊಂಡಿದ್ದಾರೆ.

ಈ ಇಲೆವೆನ್‌ನಲ್ಲಿ ಆಲ್‌ರೌಂಡರ್‌ಗಳಾಗಿ ಯುವರಾಜ್ ಸಿಂಗ್ ಹಾಗೂ ರವೀಂದ್ರ ಜಡೇಜಾಗೆ ಸ್ಥಾನ ನೀಡಲಾಗಿದೆ. ಹಾಗೆಯೇ ವೇಗಿಗಳಾಗಿ ಝುಹೀರ್ ಖಾನ್ ಹಾಗೂ ಜಸ್‌ಪ್ರೀತ್ ಬುಮ್ರಾ ಕಾಣಿಸಿಕೊಂಡಿದ್ದಾರೆ. ಇನ್ನು ಹರ್ಭಜನ್ ಸಿಂಗ್ ಅವರನ್ನು ದಿನೇಶ್ ಕಾರ್ತಿಕ್ 12ನೇ ಆಟಗಾರನಾಗಿ ಆಯ್ಕೆ ಮಾಡಿದ್ದಾರೆ. ಅದರಂತೆ ಡಿಕೆ ಹೆಸರಿಸಿದ ಸಾರ್ವಕಾಲಿಕ ಪ್ಲೇಯಿಂಗ್ ಇಲೆವೆನ್ ಈ ಕೆಳಗಿನಂತಿದೆ...

ದಿನೇಶ್ ಕಾರ್ತಿಕ್ ಅವರ ಭಾರತದ ಸಾರ್ವಕಾಲಿಕ ಪ್ಲೇಯಿಂಗ್ ಇಲೆವೆನ್: ವೀರೇಂದ್ರ ಸೆಹ್ವಾಗ್, ರೋಹಿತ್ ಶರ್ಮಾ, ರಾಹುಲ್ ದ್ರಾವಿಡ್, ಸಚಿನ್ ತೆಂಡೂಲ್ಕರ್, ವಿರಾಟ್ ಕೊಹ್ಲಿ, ಯುವರಾಜ್ ಸಿಂಗ್, ರವೀಂದ್ರ ಜಡೇಜಾ, ರವಿಚಂದ್ರನ್ ಅಶ್ವಿನ್, ಅನಿಲ್ ಕುಂಬ್ಳೆ, ಜಸ್ಪ್ರೀತ್ ಬುಮ್ರಾ, ಝುಹೀರ್ ಖಾನ್. ಹರ್ಭಜನ್ ಸಿಂಗ್.



# ಕಟ್ಟುನಿಟ್ಟಿನ ಕ್ರಮ ಕೆಲಸ ಮಾಡಿದೆ

ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರು ವಿಕೆಟ್ ಕೀಪರ್ ಬ್ಯಾಟ್ಸ್‌ಮನ್‌ಗಳಾದ ಇಶಾನ್ ಕಿಶನ್ ಮತ್ತು ಶ್ರೇಯಸ್ ಅಯ್ಯರ್ ಬಗ್ಗೆ ಆಘಾತಕಾರಿ ಹೇಳಿಕೆ ನೀಡಿದ್ದಾರೆ. ಈ ಇಬ್ಬರು ಆಟಗಾರರ ವಿರುದ್ಧ ತೆಗೆದುಕೊಂಡ ಕಟ್ಟುನಿಟ್ಟಿನ ಕ್ರಮಗಳಿಂದಾಗಿ ಇಂದು ಈ ಇಬ್ಬರೂ ಆಟಗಾರರು ದೇಶೀಯ ಕ್ರಿಕೆಟ್ ಆಡುತ್ತಿದ್ದಾರೆ ಎಂದು ಜಯ್ ಶಾ ಹೇಳಿಕೆ ನೀಡಿದ್ದಾರೆ.

ವಾಸ್ತವವಾಗಿ ಈ ಇಬ್ಬರು ಕ್ರಿಕೆಟಿಗರು ದೇಶೀಯ ಕ್ರಿಕೆಟ್‌ಗಿಂತ ಐಪಿಎಲ್‌ಗೆ ಆದ್ಯತೆ ನೀಡಿದ ಕಾರಣ ಈ ವರ್ಷದ ಆರಂಭದಲ್ಲಿ ಬಿಸಿಸಿಐ ತನ್ನ ಕೇಂದ್ರ ಒಪ್ಪಂದದಿಂದ ಈ ಇಬ್ಬರನ್ನು ಕೈಬಿಟ್ಟಿತ್ತು. ಇದರ ಜೊತೆಗೆ ಈ ಇಬ್ಬರು ಟೀಂ ಇಂಡಿಯಾಕ್ಕೆ ಮರಳಬೇಕೆಂದರೆ, ದೇಶೀಯ ಕ್ರಿಕೆಟ್ ಆಡಲೇಬೇಕು ಎಂಬ ಎಚ್ಚರಿಕೆ ಕೂಡ ನೀಡಿತ್ತು. ಕೆಟ್ಟ ಮೇಲೆ ಬುದ್ಧಿ ಬಂತು ಎಂಬ ಗಾದೆಯಂತೆ ಇದೀಗ ಈ ಇಬ್ಬರು ಆಟಗಾರರು ದೇಶೀ ಕ್ರಿಕೆಟ್ ಆಡಲು ಸಜ್ಜಾಗಿದ್ದಾರೆ. ಪ್ರಸ್ತುತ ಬುಚ್ಚಿ ಬಾಬು ಪಂದ್ಯಾವಳಿ ನಡೆಯುತ್ತಿದ್ದು, ಇದರಲ್ಲಿ ಜಾರ್ಖಂಡ್ ಪರ ಆಡುತ್ತಿರುವ ಇಶಾನ್ ಕಿಶನ್ ಆಡಿದ ಮೊದಲ ಪಂದ್ಯದಲ್ಲೇ ಮಧ್ಯಪ್ರದೇಶ ವಿರುದ್ಧ ಶತಕ ಸಿಡಿಸಿ ಮಿಂಚಿದ್ದಾರೆ.

ಇನ್ನು ಶ್ರೇಯಸ್ ಅಯ್ಯರ್ ದುಲೀಪ್ ಟ್ರೋಫಿಯಲ್ಲಿ ಕಣಕ್ಕಿಳಿಯಲಿದ್ದಾರೆ.



# ಕೋರ್ಟ್ ಮೊರೆ ಹೋದ ಪ್ರೀತಿ

ಐಪಿಎಲ್‌ನಲ್ಲಿ ಇದುವರೆಗೆ ಒಮ್ಮೆಯೂ ಚಾಂಪಿಯನ್ ಆಗದ ತಂಡಗಳ ಪೈಕಿ ಪಂಜಾಬ್ ಕಿಂಗ್ ತಂಡವೂ ಒಂದಾಗಿದೆ. ಪ್ರತಿ ಹರಾಜಿಗೂ ಮುನ್ನ ತಂಡದ ಸ್ಟಾರ್ ಆಟಗಾರರಿಗೆ ಕೋಕ್ ನೀಡಿ, ಆ ಬಳಿಕ ಹರಾಜಿನಲ್ಲಿ ನಿರೀಕ್ಷೆಗೂ ಮೀರಿದ ಹಣ ನೀಡಿ ಸ್ಟಾರ್ ಆಟಗಾರನನ್ನು ಖರೀದಿಸುವ ಮೂಲಕ ಪಂದ್ಯವಾಳಿಗೆ ಎಂಟ್ರಿಕೊಡುವ ಪಂಜಾಬ್ ತಂಡಕ್ಕೆ ಕೊನೆಗೆ ಎದುರಾಗುವುದು ಸೋಲಿನ ಹತಾಶೆ ಮಾತ್ರ.

ಐಪಿಎಲ್‌ನಲ್ಲಿ ಇದುವರೆಗೆ ಒಮ್ಮೆಯೂ ಚಾಂಪಿಯನ್ ಆಗದ ತಂಡಗಳ ಪೈಕಿ ಪಂಜಾಬ್ ಕಿಂಗ್ ತಂಡವೂ ಒಂದಾಗಿದೆ. ಪ್ರತಿ ಹರಾಜಿಗೂ ಮುನ್ನ ತಂಡದ ಸ್ಟಾರ್ ಆಟಗಾರರಿಗೆ ಕೋಕ್ ನೀಡಿ, ಆ ಬಳಿಕ ಹರಾಜಿನಲ್ಲಿ ನಿರೀಕ್ಷೆಗೂ ಮೀರಿದ ಹಣ ನೀಡಿ ಸ್ಟಾರ್ ಆಟಗಾರನನ್ನು ಖರೀದಿಸುವ ಮೂಲಕ ಪಂದ್ಯವಾಳಿಗೆ ಎಂಟ್ರಿಕೊಡುವ ಪಂಜಾಬ್ ತಂಡಕ್ಕೆ ಕೊನೆಗೆ ಎದುರಾಗುವುದು ಸೋಲಿನ ಹತಾಶೆ ಮಾತ್ರ.

ಪಂದ್ಯಾವಳಿ ಆರಂಭಕ್ಕೂ ಮುನ್ನ ಬಲಿಷ್ಠ ತಂಡವನ್ನು ಕಟ್ಟಿಕೊಂಡು ಅಖಾಡಕ್ಕಿಳಿಯುವ ಪಂಜಾಬ್ ಕಿಂಗ್ ತಂಡಕ್ಕೆ ಒಮ್ಮೆಯೂ ಪ್ರಶಸ್ತಿ ಗೆಲ್ಲಲು ಸಾಧ್ಯವಾಗಿಲ್ಲ. ಸ್ಟಾರ್ ಆಟಗಾರರೇ ಇದ್ದರೂ ಪ್ರಶಸ್ತಿ ಗೆಲ್ಲಲು ಸಾಧ್ಯವಾಗದೆ ಸದಾ ಸುದ್ದಿಯಾಗುವ ಪಂಜಾಬ್ ಕಿಂಗ್ಸ್ ತಂಡದಲ್ಲಿ ಇದೀಗ ಎಲ್ಲಾವೂ ಸರಿ ಇಲ್ಲ ಎಂಬ ಸುದ್ದಿಯೊಂದು ಹೊರಬಿದ್ದಿದೆ.




# ಟಿ20 ನಾಯಕತ್ವದಿಂದ ಸೂರ್ಯನಿಗೆ ಕೊಕ್

ಶ್ರೀಲಂಕಾ ಸರಣಿಗೂ ಮುನ್ನ ಸೂರ್ಯಕುಮಾರ್ ಯಾದವ್ ಅವರನ್ನು ಟಿ20 ತಂಡದ ನಾಯಕನನ್ನಾಗಿ ನೇಮಿಸಲಾಗಿದೆ. ವಾಸ್ತವವಾಗಿ ಟಿ20 ವಿಶ್ವಕಪ್ ಬಳಿಕ ಹಾರ್ದಿಕ್ ಪಾಂಡ್ಯ ಅವರನ್ನು ಟಿ20 ತಂಡದ ನಾಯಕನ ಸ್ಥಾನಕ್ಕೆ ದೊಡ್ಡ ಸ್ಪರ್ಧಿಯಾಗಿ ಪರಿಗಣಿಸಲಾಗಿತ್ತು. ಆದರೆ ವಿಭಿನ್ನ ಯೋಜನೆ ನಿರ್ಮಿಸಿದ ಬಿಸಿಸಿಐ ಸೂರ್ಯನಿಗೆ ನಾಯಕನ ಪಟ್ಟ ಕಟ್ಟಲಾಯಿತು.

ವರದಿಯ ಪ್ರಕಾರ, ಟಿ20 ತಂಡದ ಖಾಯಂ ನಾಯಕನಾಗಿ ಸೂರ್ಯಕುಮಾರ್ ಯಾದವ್ ಅವರೇ ಮುಂದುವರೆ ಯುವ ಸಾಧ್ಯತೆಗಳಿವೆ ಎಂದು ಹೇಳಲಾಗುತ್ತಿದೆ.

ಇದೆಲ್ಲದರ ನಡುವೆ ವಿಮರ್ಶಕ ಹರ್ಷಾ ಭೋಗ್ಲೆ ಸ್ಫೋಟಕ ಹೇಳಿಕೆ ನೀಡಿದ್ದು, ಹಾರ್ದಿಕ್ ಪಾಂಡ್ಯ ಮತ್ತೆ ಟಿ20 ತಂಡದ ನಾಯಕನನ್ನಾಗಿ ಮಾಡಬಹುದು ಎಂದಿದ್ದಾರೆ.

ಹರ್ಷ ಭೋಗ್ಲೆ ಪ್ರಕಾರ ಹಾರ್ದಿಕ್ ಪಾಂಡ್ಯ ಮತ್ತೊಮ್ಮೆ ಭಾರತ ಟಿ20 ತಂಡದ ನಾಯಕರಾಗಬಹುದು. ಮ್ಯಾನೇಜ್‌ಮೆಂಟ್ ಪಾಂಡ್ಯ ಅವರನ್ನು ಎಲ್ಲಾ ವೈಟ್-ಬಾಲ್ ಪಂದ್ಯಗಳನ್ನು ಆಡುವಂತೆ ಸೂಚಿಸಿರುವುದರಿಂದ ಪಾಂಡ್ಯಗೆ ಮತ್ತೆ ನಾಯಕತ್ವ ಸಿಗಬಹುದು ಎಂದಿದ್ದಾರೆ. ಆಡಳಿತ ಮಂಡಳಿಯು ಸೂರ್ಯಕುಮಾರ್ ಯಾದವ್‌ಗೆ ಪರೀಕ್ಷಾರ್ಥವಾಗಿ ಟಿ20 ತಂಡದ ನಾಯಕತ್ವ ನೀಡಿದೆ. ಒಮ್ಮೆ ಹಾರ್ದಿಕ್ ಪಾಂಡ್ಯ ಸೀಮಿತ ಓವರ್‌ಗಳಲ್ಲಿ ತನ್ನ ಫಿಟ್ನೆಸ್ ಸಾಭೀತು ಪಡಿಸಿದರೆ, ಅವರಿಗೆ ಸೀಮಿತ ಓವರ್‌ಗಳ ನಾಯಕತ್ವ ನೀಡುವುದು ಖಚಿತ ಎಂದಿದ್ದಾರೆ.



**ಅನುಮಾನ ಮೂಡಿಸಿದ ಹೇಳಿಕೆ**




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966